ಸಂಪುಟ: ೦೬/ ಸಂಚಿಕೆ: ೨೩೭/ರವಿವಾರ ದಿನಾಂಕ: ೧೭-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 237 / SUNDAY Date : 17-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

### ॥ ಸಪ್ತಋಷಿವಾಣಿ ॥

ಬದುಕಿನಲ್ಲಿ ಹಣಕ್ಕೆ ಮರ್ಯಾದೆ ಕೊಡಬೇಕು ನಿಜ, ಆದರೆ ಹಣಕ್ಕಾಗಿ ಮರ್ಯಾದೆ ಬಿಡಬಾರದು.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ಎಪಿಎಲ್ ಕಾರ್ಡುಗಳ ರದ್ದತಿಗೆ ಯಾವುದೇ ನಿರ್ದೇಶನ ನೀಡಿಲ್ಲ : ಆಹಾರ ಇಲಾಖೆ ಸ್ಪಷ್ಟೀಕರಣ



ಬೆಂಗಳೂರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯು ರಾಜ್ಯದಲ್ಲಿ ಯಾವುದೇ ಎಪಿಎಲ್ ಕಾರ್ಡುಗಳ ರದ್ದತಿಗೆ ಯಾವುದೇ ಸೂಚನೆ ನೀಡಿಲ್ಲ. ಹಾಗೂ ಯಾವುದೇ ಎಪಿಎಲ್ ಕಾರ್ಡುಗಳನ್ನು ರದ್ದುಗೊಳಿಸಿಲ್ಲ ಎಂದು ಆಹಾರ ಇಲಾಖೆ ಇಂದಿಲ್ಲಿ ಸ್ಪಷ್ಟೀಕರಣ ನೀಡಿದೆ.

ಶನಿವಾರ ಈ ಸಂಬಂಧ ಪ್ರಕಟಣೆ ನೀಡಿರುವ ಇಲಾಖೆ, 'ಕೆಲವು ಪತ್ರಿಕೆಗಳಲ್ಲಿ ಇ-ಕೆವೈಸಿ ನೋಂದಣಿ ಮಾಡಿಕೊಳ್ಳದ ಎಪಿಎಲ್ ಕಾರ್ಡುಗಳನ್ನು ರದ್ದುಗೊಳಿಸಲಾಗುತ್ತಿದೆ ಎಂದು ವರದಿಯಾಗಿರುವುದು ಸತ್ಯಕ್ಕೆ ದೂರವಾಗಿದೆ. ರಾಜ್ಯದಲ್ಲಿ ಸೆಪ್ಟೆಂಬರ್ 2ರಂದು 25,13,798 ಎಪಿಎಲ್ ಕಾರ್ಡುಗಳಿದ್ದವು. ಇಂದು ನ.16ರಂದು 25,62,566 ಕಾರ್ಡುಗಳಿವೆ' ಎಂದು ವಿವರಣೆ ನೀಡಿದೆ.

'ಅನರ್ಹ ಬಿಪಿಎಲ್ ಕಾರ್ಡುಗಳನ್ನು ರದ್ದುಗೊಳಿಸುವ ಕಾರ್ಯ ಕೈಗೊಂಡ ಪರಿಣಾಮ, ಕೆಲವು ಬಿಪಿಎಲ್ ಕಾರ್ಡುಗಳನ್ನು ಎಪಿಎಲ್ ಕಾರ್ಡುಗಳಾಗಿ ಪರಿವರ್ತಿಸಿರುವುದರಿಂದ 48,768 ಕಾರ್ಡುಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದೆ. ರಾಜ್ಯದಲ್ಲಿ 22ಲಕ್ಷ ಬಿಪಿಎಲ್ ಕಾರ್ಡುಗಳು ರದ್ದಾಗಿವೆ ಎಂದು ಸುದ್ದಿ ಪ್ರಕಟವಾಗಿರುವುದು ಸತ್ಯ ಸಂಗತಿಯಲ್ಲ ಎಂದು ಇಲಾಖೆ ತಿಳಿಸಿದೆ.

## ಕೋವಿಡ್ ತನಿಖೆಗೆ ಎಸ್‌ಐಟಿ ರಚನೆಯ ಕುರಿತು ಚಿಂತೆ ಮಾಡುವ ಅಗತ್ಯವಿಲ್ಲ : ಬಿ.ಎಸ್.ಯಡಿಯೂರಪ್ಪ



ಶಿವಮೊಗ್ಗ : "ಕೋವಿಡ್ ಉಪಕರಣ ಖರೀದಿ ಸಂಬಂಧ ತನಿಖೆಗೆ ರಾಜ್ಯ ಸರಕಾರ ಎಸ್‌ಐಟಿ ರಚನೆ ಮಾಡಿರುವ ಕುರಿತು ಚಿಂತೆ ಮಾಡುವ ಅಗತ್ಯವಿಲ್ಲ. ಅದು ದುರುದ್ದೇಶದಿಂದ ಕೂಡಿದ ಆರೋಪವಾಗಿದೆ. ಕಾನೂನು ಚೌಕಟ್ಟಿನಲ್ಲಿ ಅದನ್ನು ಎದುರಿಸುತ್ತೇವೆ" ಎಂದು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ.

ಈ ಕುರಿತು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋವಿಡ್ ಸಂದರ್ಭದಲ್ಲಿ ಜನ ಸಂಕಷ್ಟದಲ್ಲಿ ಸಿಲುಕಿಕೊಂಡಿದ್ದರು. ಬದುಕಿ ಉಳಿಯುವುದೇ ಕಷ್ಟ ಎನ್ನುವ ಸಂದರ್ಭ ಬಂದಾಗ ಯಾವುದೇ ಔಷಧ ಸಿಗುವ ಸಾಧ್ಯತೆಯೇ ಇರಲಿಲ್ಲ. ಹೊರಗಿನಿಂದ ಔಷಧ ತಂದು ಜನರ ಜೀವ ಉಳಿಸುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದೇವೆ. ಇಷ್ಟು ವರ್ಷದ ನಂತರ ಇದು ಒಂದು ಹಗರಣ ಎಂದು ಗೊಂದಲವನ್ನುಂಟು ಮಾಡುವ ಪ್ರಯತ್ನವನ್ನು ರಾಜ್ಯದ ಮುಖ್ಯಮಂತ್ರಿಗಳು ಮಾಡುತ್ತಿದ್ದಾರೆ. ಇದಕ್ಕೆ ತಲೆ ಕೆಡಿಸಿಕೊಳ್ಳುವಂತಹ ಅಗತ್ಯವಿಲ್ಲ. ಪ್ರಾಮಾಣಿಕವಾಗಿ ನಾವು ನಮ್ಮ ಕೆಲಸ ಮಾಡಿದ್ದೇವೆ. ಜನ ಮೆಚ್ಚುವಂತಹ ಕೆಲಸ ಮಾಡಿದ್ದೇವೆ ಎಂದು ಹೇಳಿದರು.

ವಕ್ಫ್ ಸಮಿತಿ ರಚನೆ ಕುರಿತು ಮಾತನಾಡಿದ ಅವರು, ಈಗಾಗಲೇ ವಿಜಯೇಂದ್ರ ವಕ್ಫ್ ಸಮಿತಿಗೆ ಮೂರು ತಂಡಗಳನ್ನು ರಚನೆ ಮಾಡಿದ್ದಾರೆ. ಸಮಿತಿಯವರು ಪ್ರವಾಸ ಮುಗಿಸಿಕೊಂಡು ಬಂದು ವರದಿಯನ್ನು ನೀಡಲಿದ್ದಾರೆ ಎಂದು ತಿಳಿಸಿದರು.

### ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ

# ಪರಿಶಿಷ್ಟರನ್ನು ಸಮಾಜದ ಮುನ್ನೆಲೆಗೆ ತರುವ ಕಾರ್ಯವಾಗಬೇಕು: ಪಿ.ಎಂ.ನರೇಂದ್ರಸ್ವಾಮಿ

ಬೆಳಗಾವಿ : ಸಾಮಾಜಿಕ ಅಸಮಾನತೆಯನ್ನು ತೊಡೆದು ಹಾಕಲು, ದುರ್ಬಲ ವರ್ಗಕ್ಕೆ ಉತ್ತಮವಾದಂತಹ ಯೋಜನೆ ನಿರ್ಮಿಸುವುದರ ಮೂಲಕ ಪರಿಶಿಷ್ಟರನ್ನು ಸಮಾಜದ ಮುನ್ನೆಲೆಗೆ ತರಬಹುದಾಗಿದೆ. ಅಧಿಕಾರಿಗಳು ಇದನ್ನು ಅರಿತುಕೊಂಡು ಶ್ರಮಿಸಬೇಕು ಎಂದು ಕರ್ನಾಟಕ ವಿಧಾನ ಮಂಡಳ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಪಿ.ಎಂ.ನರೇಂದ್ರ ಸ್ವಾಮಿ ಅವರು ತಿಳಿಸಿದರು.

ಬೆಳಗಾವಿ ಸುವರ್ಣಸೌಧದಲ್ಲಿ ಶನುವಾರ(ನ.16) ಜರುಗಿದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಯೋಜನೆಗಳು ಮತ್ತು ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪರಿಶಿಷ್ಟ ಜಾತಿ ಹಾಗೂ ಪಂಗಡದವರಿಗಾಗಿ ಪ್ರತ್ಯೇಕ ಕಾಯ್ದೆ ಜಾರಿಗೊಳಿಸಲಾಗಿದ್ದು, ಇಲಾಖಾ ಅನುದಾನದಲ್ಲಿ ನಿರ್ದಿಷ್ಟಪಡಿಸಿದ ಅನುದಾನವನ್ನು ಕಾಲಮಿತಿ ಒಳಗಾಗಿ ವೆಚ್ಚ ಮಾಡುವುದರ ಜೊತೆಗೆ ಇಲಾಖೆ ಅನುದಾನದಲ್ಲಿ ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನದ ಸದ್ಬಳಕೆ ಆಗಬೇಕು. ಸರ್ಕಾರ ನೀಡಿದ ಅನುದಾನ ಅಪವ್ಯಯವಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಶಾಲೆ ಸೇರಿದಂತೆ ವಿವಿಧ ಸ್ವತ್ತುಗಳ ನಿರ್ಮಾಣಕ್ಕೆ ಒತ್ತು ನೀಡಬೇಕು ಎಂದರು.

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಕುಟುಂಬಗಳ ಸಂಖ್ಯೆಗೆ ಅನುಗುಣವಾಗಿ ವೈಯಕ್ತಿಕ ಶೌಚಾಲಯಗಳ ನಿರ್ಮಾಣಕ್ಕೆ ಕ್ರಮ ವಹಿಸಬೇಕು. ಜಲ ಜೀವನ ಮೀಷನ್ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪ.ಪಂಗಡಗಳ ಕಾಲನಿಯಲ್ಲಿನ ಪ್ರತಿಯೊಂದು ಮನೆಗೂ ನಳ ಸಂಪರ್ಕ ಒದಗಿಸಿ ನೀರು ಒದಗಿಸಬೇಕು. ಈ ಕುರಿತು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಕಾಮಗಾರಿಗಳನ್ನು ಪರಿಶೀಲಿಸಿ ಕಾಮಗಾರಿಗಳಲ್ಲಿ ಯಾವುದೇ ಲೋಪಗಳು ಆಗದಂತೆ ನಿಗಾ ವಹಿಸುವದರ ಜೊತೆಗೆ ಈ ಯೋಜನೆಯಡಿ



ಅಳವಡಿಸಲಾಗುವ ಪೈಪಗಳ ಗುಣಮಟ್ಟವನ್ನು ಪರೀಶಿಲಿಸಬೇಕು. ಈ ಕುರಿತು ನೋಡೆಲ್ ಅಧಿಕಾರಿಗಳನ್ನು ನೇಮಿಸಿ ಪರಿಶೀಲಿಸಲು ಸೂಚನೆ ನೀಡಿದರು.

ಜಿಲ್ಲಾ ಹಾಗೂ ತಾಲೂಕು ಮಟ್ಟದ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಲ ಜೀವನ ಮಿಷನ ಯೋಜನೆ ಕುರಿತು ಪ್ರಗತಿ ಪರಿಶೀಲನೆಯಾಗಬೇಕು ಸಮಾಜ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳು ಈ ಕುರಿತು ನಿಗಾ ವಹಿಸುವಂತೆ ನರೇಂದ್ರಸ್ವಾಮಿ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳ ಆರೋಗ್ಯ ಸುಧಾರಣೆಗಾಗಿ ಇರುವ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಜಾರಿಗೊಳಿಸುವ ಮೂಲಕ ಅಪೌಷ್ಟಿಕತೆ ನಿವಾರಣೆಗೆ ಮುಂದಾಗಬೇಕು. ಅದೇ ರೀತಿ ಜಿಲ್ಲೆಯಲ್ಲಿ ದೇವದಾಸಿಯರಿಗೆ ಪುನರ್ವಸತಿ ಕಲ್ಪಿಸುವ ಯೋಜನೆಯಡಿ ನಿವೇಶನ ಹಾಗೂ ವಸತಿ ಇಲ್ಲದ ದೇವದಾಸಿಯರನ್ನು ಗುರುತಿಸಿ ಅವರಿಗೆ ಸಮರ್ಪಕವಾಗಿ ಪುನರ್ವಸತಿ ಕಲ್ಪಿಸುವ ಕಾರ್ಯವಾಗಬೇಕು. ಈ ಕಾರ್ಯದಲ್ಲಿ ಜಿಲ್ಲಾಡಳಿತದೊಂದಿಗೆ ಸಮಾಜ ಕಲ್ಯಾಣ ಹಾಗೂ ಮಹಿಳಾ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ಅಲೆಮಾರಿ, ಅರೆ ಅಲೆಮಾರಿ ಜನಾಂಗದವರಿಗಾಗಿ ಜಾರಿಯಲ್ಲಿರುವ ಸರಕಾರದ ಯೋಜನೆ ಹಾಗೂ ಸೌಲಭ್ಯಗಳು ದೊರಕಿಸಿ ಅವರನ್ನು ಕೂಡ ಸಮಾಜದ ಮುಖ್ಯವಾಹಿನಿಗೆ ತರುವಂತಹ ಕಾರ್ಯವಾಗಬೇಕು.

ಜಾತಿ ನಿಂದನೆ ಪ್ರಕರಣಗಳನ್ನು ಗಂಭಿರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯ ಕಠಿಣ ಕ್ರಮ ಜರುಗಿಸುವಂತೆ ಸೂಚನೆ ನೀಡಿದರು. ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗಾಗಿ ಇರುವ ಯೋಜನೆಗಳನ್ನು ದುರುಪಯೋಗ ಪಡೆಸಿಕೊಂಡವರ ವಿರುದ್ಧ ಕಠಿಣ ಕ್ರಮ ಜರುಗಿಸಲು ತಿಳಿಸಿದರು.

ನಗರಾಭಿವೃದ್ಧಿ ಇಲಾಖೆ ಹಾಗೂ ಮಹಾನಗರ ಪಾಲಿಕೆಗಳ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಹೆಚ್ಚಿನ ಅನುದಾನವನ್ನು ಶಿಕ್ಷಣ ಕ್ಷೇತ್ರಕ್ಕೆ ಮೀಸಲಿಡಲು ತಿಳಿಸಿದರು. ಅದರಲ್ಲೂ ಹೆಣ್ಣು ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಎಲ್ಲ ಸೌಲಭ್ಯಗಳನ್ನು ಒದಗಿಸಲು ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದರು.

ಸಭೆಗೆ ಗೈರಾದ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸೂಚನೆ: ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಅಭಿವೃದ್ಧಿಗಾಗಿ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆಗಳು ಮತ್ತು ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಗಂಭೀರತೆಯನ್ನು ಅರಿಯದೆ ಸಭೆಗೆ ಗೈರಾದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲು ಸಮಿತಿಯ ಅಧ್ಯಕ್ಷರಾದ ಪಿ.ಎಂ.ನರೇಂದ್ರಸ್ವಾಮಿ ಅವರು ಸೂಚನೆ ನೀಡಿದರು.

ಶಾಸಕರು ಹಾಗೂ ಸಮಿತಿ ಸದಸ್ಯರಾದ ಎನ್. ರವಿಕುಮಾರ ಅವರು ಮಾತನಾಡಿ ಜಿಲ್ಲೆಯಲ್ಲಿ ಗ್ರಾಮ ಪಂಚಾಯತಗಳಲ್ಲಿ ಖಾಲಿ ಇರುವ ಗ್ರೂಪ ಡಿ ಹುದ್ದೆಗಳ ಕುರಿತು ಮಾಹಿತಿ ಪಡೆದರು.

ಸ್ವಚ್ಛ ಭಾರತ ಮಿಷನ ಯೋಜನೆಯಡಿ ಕೇಂದ್ರ ಹಾಗೂ ರಾಜ್ಯ ಸರಕಾರಗಳಿಂದ ಅನುದಾನ ಬಿಡುಗಡೆಯಾಗುತ್ತಿದ್ದು ಜಿಲ್ಲೆಯ ಪ.ಜಾತಿ, ಪ.ಪಂಗಡಗಳ ಕುಟುಂಬಗಳಿಗೆ ವೈಯಕ್ತಿಕ ಶೌಚಾಲಯ ನಿರ್ಮಾಣ ಮಾಡಬೇಕು. ಈ ಯೋಜನೆಯಡಿ ಮನೆಗಳಿಗೆ ಶುದ್ಧ ಕುಡಿಯುವ ನೀರನ್ನು ಪೂರೈಸಬೇಕು.

ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ/ಪಂಗಡಗಳ ಕುಟುಂಬಗಳ ಮಾಹಿತಿ ಕುರಿತು ಸಮರ್ಪಕ ಮಾಹಿತಿಯನ್ನು ಒದಗಿಸದಿರುವುದಕ್ಕೆ ಸಮಿತಿಯ ಸದಸ್ಯ ಎನ್.ರವಿಕುಮಾರ್ ಅಸಮಾಧಾನ ವ್ಯಕ್ತಪಡಿಸಿದರು. ನರೇಗಾ, ಜಲಜೀವನ ಮಿಷನ್ ಸೇರಿದಂತೆ ಪ್ರತಿಯೊಂದು ಯೋಜನೆಗಳನ್ನು ಪರಿಶಿಷ್ಟರ ಕಾಲನಿಗಳಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು ಎಂದು ಸಮಿತಿಯ ಸದಸ್ಯ ರವಿಕುಮಾರ್ ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ವರ್ಗಗಳ ಪ್ರತಿಮನೆಗೆ ಶುದ್ಧ ಕುಡಿಯುವ ನೀರು ಮತ್ತು ಶೌಚಾಲಯ ಒದಗಿಸುವ ಮೂಲಕ ಅವರ ಜೀವನ ಮಟ್ಟವನ್ನು ಸುಧಾರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಮಿತಿ ಸದಸ್ಯರಾದ ಡಾ. ಡಿ.ತಿಮ್ಮಯ್ಯ ಅವರು ಮಾತನಾಡಿ, ಎಸ್.ಸಿ.ಪಿ, ಟಿ.ಎಸ್.ಪಿ ಅನುದಾನದಡಿ ಬಿಡುಗಡೆಯಾದಂತಹ ಅನುದಾನದಲ್ಲಿ ಬಳಕೆಯಾದ ಹಾಗೂ ಬಾಕಿ ಉಳಿದ ಅನುದಾನದ ನಿಖರವಾದ ವಿವರಗಳನ್ನು ಒದಗಿಸಲು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಅಪೌಷ್ಟಿಕತೆಯಿಂದ ಬಳಲುತ್ತಿರುವ ಎಸ್.ಸಿ/ಎಸ್.ಟಿ ಮಕ್ಕಳ ಮಾಹಿತಿ ಪಡೆದು ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳ ಬಗ್ಗೆ ಹೆಚ್ಚಿನ ಹರಿಸಿ ಮಕ್ಕಳಿಗೆ ಅಗತ್ಯದ ಪೌಷ್ಠಿಕಾಂಶಗಳ ಕುರಿತು ಚಿಕಿತ್ಸೆ ಒದಗಿಸಬೇಕು. ಈ ಕುರಿತು ಆರೋಗ್ಯ ಇಲಾಖೆ ವತಿಯಿಂದ ನಿಯಮಿತವಾಗಿ ಪ್ರಗತಿ ಪರಿಶೀಲಿಸಬೇಕು ಎಂದು ತಿಳಿಸಿದರು. ಸಮಿತಿ ಸದಸ್ಯರಾದ ಕೃಷ್ಣಾ ನಾಯಕ ಅವರು ಮಾತನಾಡಿ, ಎಸ್.ಸಿ.ಎಸ್.ಪಿ. ಟಿ. ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪ.ಪಂಗಡಗಳ ಜನ ವಾಸಿಸುವ ಕಾಲನಿಗಳಲ್ಲಿ ಸ್ವತ್ತುಗಳ ನಿರ್ಮಾಣಕ್ಕೆ ಕ್ರಮ ವಹಿಸಬೇಕು ಎಂದರು. ಸಮಿತಿ ಸದಸ್ಯರಾದ ಡಿ.ಎಂ.ಐಹೋಳೆ ಅವರು ಮಾತನಾಡಿ, ಜಲ ಜೀವನ ಮಿಷನ್ ಯೋಜನೆಯೆಡಿ ನಡೆದಂತಹ ಕಾಮಗಾರಿಗಳಿಂದಾಗಿ ಹಾಳಾದ ರಸ್ತೆಗಳನ್ನು ದುರಸ್ತಿ ಮಾಡಿಸಲು ಕ್ರಮ ವಹಿಸಲು ತಿಳಿಸಿದರು.

ಶಾಲೆಗಳ ದುರಸ್ತಿಗಾಗಿ ಎಸ್.ಡಿ.ಆರ್.ಎಫ್. ಅಡಿ ಹತ್ತು ಕೋಟಿ ರೂಪಾಯಿ ಅನುದಾನವನ್ನು ನೀಡಲಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದರು.

ಈ ಅನುದಾನದಡಿ ದುರಸ್ತಿ ಅಗತ್ಯವಿರುವ ಪ್ರತಿ ಶಾಲೆಗೆ ತಲಾ ಎರಡು ಲಕ್ಷ ರೂಪಾಯಿ ಖರ್ಚು ಮಾಡಬಹುದು ಎಂದರು.

ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯ ಕ್ರಿಯಾ ಯೋಜನೆಯಲ್ಲಿ ಶೇ.35 ರಷ್ಟು ಅಂಗನವಾಡಿ ಮತ್ತು ಶಾಲೆಗಳ ಸುಧಾರಣಾ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ವಿವರಿಸಿದರು.

ಪ್ರತಿ ಗ್ರಾಮ ಪಂಚಾಯತಿಯಲ್ಲಿ ಕನಿಷ್ಠ ಐದು ಹುದ್ದೆಗಳಿದ್ದು, ಜನಸಂಖ್ಯೆ ಮತ್ತು ಓವರ್ ಹೆಡ್ ಟ್ಯಾಂಕ್ ಸಂಖ್ಯೆ ಆಧರಿಸಿ ಕೆಲವು ಪಂಚಾಯತಿಗಳಲ್ಲಿ ಐದಕ್ಕಿಂತ ಹೆಚ್ಚು ಹುದ್ದೆಗಳಿವೆ. ಜಿಲ್ಲಾ ಪಂಚಾಯಿತಿ ಅನುಮೋದಿತ ಸಿಬ್ಬಂದಿಗೆ ಪ್ರತಿ ತಿಂಗಳು ಸಮರ್ಪಕ ವೇತನವನ್ನು ನಿಯಮಿತವಾಗಿ ಪಾವತಿಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 7.92 ಲಕ್ಷ ಜಾಬ್ ಕಾರ್ಡಗಳಿದ್ದು, 4.04 ಲಕ್ಷ ಕಾರ್ಡುಗಳು ಸಕ್ರಿಯವಾಗಿವೆ. ಇದರಲ್ಲಿ ಪರಿಶಿಷ್ಟ ಜಾತಿ/ಪಂಗಡಗಳ ಜನರ ಒಟ್ಟು 1.55 ಲಕ್ಷ ಕಾರ್ಡ್ ಗಳಿದ್ದು, ಅದರಲ್ಲಿ 1.32 ಲಕ್ಷ ಕಾರ್ಡ್‌ಗಳು ಸಕ್ರಿಯವಾಗಿವೆ. ಬೇಸಿಗೆಯಲ್ಲಿ ಪ್ರತಿದಿನ ಒಂದು ಲಕ್ಷ ಜನರು ನರೇಗಾ ಕೆಲಸ ಮಾಡುತ್ತಿದ್ದಾರೆ ಎಂದು ರಾಹುಲ್ ಶಿಂಧೆ ವಿವರಿಸಿದರು.

ಸಭೆಯಲ್ಲಿ ಸಮಿತಿ ಸದಸ್ಯರುಗಳಾದ ಬಸವರಾಜ ಮತ್ತಿಮುಡು, ಶಾಂತಾರಾಮ ಸಿದ್ಧಿ, ಸಮಾಜ ಕಲ್ಯಾಣ ಇಲಾಖೆಯ ರಾಕೇಶ್ ಕುಮಾರ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಸಂಜಯ ಶೆಟ್ಟಣ್ಣವರ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ನಬ್ಯಾಂಗ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಪ್ರಶಿಕ್ಷಣಾರ್ಥಿ ಐ.ಎ.ಎಸ್. ಅಧಿಕಾರಿ ದಿನೇಶ ಕುಮಾರ ಮೀನಾ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ಹುಬ್ಬಳ್ಳಿಯಲ್ಲಿ ಬಾಲಕಿಗೆ ಚುಡಾಯಿಸಿದ ಐವರು ಪುಂಡರ ಬಂಧನ ಕಿಡಿಗೇಡಿಗಳಿಗೆ ಕಮಿಷನರ್ ಖಡಕ್ ಎಚ್ಚರಿಕೆ



ಹುಬ್ಬಳ್ಳಿ: ಬಾಲಕಿಯೊರ್ವಳನ್ನು ಚುಡಾಯಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಹಳೇಹುಬ್ಬಳ್ಳಿ ಠಾಣೆಯ ಪೊಲೀಸರು ಐವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತರನ್ನು ಹಳೇಹುಬ್ಬಳ್ಳಿಯ ಅಯೋಧ್ಯೆ ನಗರದ ನಿವಾಸಿಗಳಾದ ಶುಭಂ ತಡಸ, ಮೆಹಬೂಬ್ ಹಿತ್ತಲಮನಿ ಎಂದು ಗುರುತಿಸಲಾಗಿದೆ. ಈ ಆರೋಪಿಗಳಿಗೆ ಸಹಕರಿಸಿದ ಸಾಗರ ಸಾತಪುತೆ, ಶ್ರೀವತ್ಸವ ಬೆಂಡಿಗೇರಿ, ಸಚಿನ್ ನರೇಂದ್ರ ಎಂಬವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಬಂಧಿತರಿಂದ ಆರು ಮೊಬೈಲ್ ಮತ್ತು ಕೃತ್ಯಕ್ಕೆ ಬಳಸಿದ ಒಂದು ದ್ವಿಚಕ್ರ ವಾಹನವನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ. ಇನ್ನು ಶುಭಂ ತಡಸ ವಿರುದ್ಧ ಕಸಬಾಪೇಟೆ ಮತ್ತು ಹಳೇಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ಈ ಹಿಂದೆ ಎರಡು ಪ್ರಕರಣಗಳು ದಾಖಲಾಗಿವೆ. ಸಾಗರ ಸಾತಪುತೆ ವಿರುದ್ಧ ಹಳೇಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ಎರಡು ಪ್ರಕರಣಗಳಿವೆ. ಸಚಿನ್ ನರೇಂದ್ರ ಎಂಬಾತನ ವಿರುದ್ಧ ಹಳೇಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ಒಂದು ಪ್ರಕರಣ ದಾಖಲಾಗಿದೆ. ಸದ್ಯ ಈ ಕುರಿತು ಹಳೇಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ಆರೋಪಿಗಳ ವಿರುದ್ಧ ಪೋಕ್ಸೋ ಪ್ರಕರಣ ಕೂಡ ದಾಖಲಾಗಿದೆ.

ಬೀದಿಕಾಮಣ್ಣರಿಗೆ ಕಮಿಷನರ್ ಖಡಕ್ ಎಚ್ಚರಿಕೆ: ಈ ಕುರಿತಂತೆ ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮಿಷನರ್ ಎನ್ ಶಶಿಕುಮಾರ್ ಪ್ರತಿಕ್ರಿಯಿಸಿ "ಹಳೇಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ಅಪ್ರಾಪ್ತ ಬಾಲಕಿಯನ್ನು ಚುಡಾಯಿಸಿದ ಘಟನೆಗೆ ಸಂಬಂಧಿಸಿದಂತೆ ಪೋಕ್ಸೋ ಪ್ರಕರಣ ದಾಖಲಾಗಿದೆ. 14 ವರ್ಷದ ಬಾಲಕಿ ಶಾಲೆ ಮುಗಿಸಿ ಮನೆಗೆ ತೆರಳುವ ಸಂದರ್ಭದಲ್ಲಿ ಕಿಡಿಗೇಡಿಗಳಿಬ್ಬರು ಬೈಕ್ ಮೇಲೆ ಬಂದಿದ್ದು, ಬಾಲಕಿಯನ್ನು ಹಿಂಬಾಲಿಸಿ ಕಿರುಕುಳ ನೀಡಿದ್ದರು. ಈ ಕುರಿತು ಸಿಸಿ ಕ್ಯಾಮರಾದಲ್ಲಿ ದೃಶ್ಯಾವಳಿಗಳು ಸೆರೆಯಾಗಿದ್ದವು. ಅಷ್ಟೇ ಅಲ್ಲದೇ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ವೈರಲ್ ಆಗಿತ್ತು. ಬಳಿಕ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಆರೋಪಿಗಳ ವಿರುದ್ಧ ಬಿ.ಎನ್.ಎಸ್ ಮತ್ತು ಪೋಕ್ಸೋ ಕಾಯ್ದೆ ಪ್ರಕರಣವನ್ನು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗಿದೆ" ಎಂದು ತಿಳಿಸಿದರು.

ಹಾಗೇ "ನಗರದ ಶಾಲೆ-ಕಾಲೇಜು, ಮಾರುಕಟ್ಟೆ, ಜನನಿಬಿಡ ಪ್ರದೇಶಗಳಲ್ಲಿ ಮಹಿಳೆಯೊಂದಿಗೆ ಅನುಚಿತವಾಗಿ ವರ್ತನೆ ತೋರುವ ದುಷ್ಕರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು. ಮಹಿಳೆ ಅಥವಾ ಮಕ್ಕಳು ದೂರು ದಾಖಲಿಸಲು ಹಿಂದೇಟು ಹಾಕಿದರೆ ಸುಮೋಟೋ ಪ್ರಕರಣ ದಾಖಲಿಸಿಕೊಂಡು ಅಂತವರ ವಿರುದ್ಧ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆ ಸಿದ್ಧವಾಗಿದೆ. ಸಾರ್ವಜನಿಕರು ಕೂಡ ಇಂತಹ ಪ್ರಕರಣ ಗಮನಕ್ಕೆ ಬಂದಾಗ ಪೊಲೀಸರಿಗೆ ಮಾಹಿತಿ ನೀಡಬೇಕು. ಅಂತವರ ಮಾಹಿತಿಯನ್ನು ಗೌಪ್ಯವಾಗಿಟ್ಟು ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು" ಎಂದೂ ಕಮಿಷನರ್ ಖಡಕ್ ಎಚ್ಚರಿಕೆ ನೀಡಿದರು.

## ನನ್ನ ಸವಾಲು ಸ್ವೀಕರಿಸಲು ಮೋದಿಗೆ ಭಯವೇಕೆ : ಮುಖ್ಯಮಂತ್ರಿ

ಸೋಲಾಪುರ(ಮಹಾರಾಷ್ಟ್ರ): ಪ್ರಧಾನಿ ನರೇಂದ್ರ ಮೋದಿ ಚುನಾವಣಾ ಭಾಷಣಗಳನ್ನು ಬಂದು ಹಸಿ ಹಸಿ ಸುಳ್ಳು ಹೇಳಿ ಹೋಗುತ್ತಾರೆ. ನಮ್ಮ ಸರಕಾರದ ವಿರುದ್ಧ ಮಾಡಿರುವ ಆರೋಪವನ್ನು ಸಾಬೀತು ಮಾಡಿದರೆ ನಾನು ರಾಜಕೀಯ ನಿವೃತ್ತಿ ಘೋಷಿಸುತ್ತೇನೆ. ಇಲ್ಲದಿದ್ದರೆ ಅವರು ರಾಜಕೀಯ ನಿವೃತ್ತಿ ಘೋಷಿಸಬೇಕು ಎಂದು ಹಾಕಿರುವ ಸವಾಲವನ್ನು ಸ್ವೀಕರಿಸಲು ಅವರಿಗೆ ಭಯವೇಕೆ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಶನಿವಾರ ಸೋಲಾಪುರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕರ್ನಾಟಕದಲ್ಲಿ ನಮ್ಮ ಸರಕಾರ ನುಡಿದಂತೆ ಐದಕ್ಕೆ ಐದೂ ಗ್ಯಾರಂಟಿಗಳನ್ನು ಜಾರಿಗೊಳಿಸಿ, ಯಶಸ್ವಿಯಾಗಿ ರಾಜ್ಯದ ಜನರ ಮನೆ ಮನೆ ತಲುಪಿಸಿದೆ. ಶಕ್ತಿ ಯೋಜನೆಯಡಿ ಇಲ್ಲಿಯವರೆಗೂ 325 ಕೋಟಿ ಬಾರಿ ಮಹಿಳೆಯರು ಉಚಿತವಾಗಿ ಬಸ್ ಗಳಲ್ಲಿ ಪ್ರಯಾಣಿಸಿದ್ದಾರೆ ಎಂದು ಹೇಳಿದರು.

ಗೃಹಜ್ಯೋತಿ ಯೋಜನೆಯಡಿ 1.62 ಕೋಟಿ ಕುಟುಂಬಗಳು 200 ಯೂನಿಟ್ ವರೆಗೆ ಉಚಿತ ವಿದ್ಯುತ್ ಪಡೆಯುತ್ತಿದ್ದಾರೆ. ಅನ್ನಭಾಗ್ಯಯೋಜನೆಯಡಿ 1.20 ಕೋಟಿ ಕುಟುಂಬಗಳು ಐದು ಕೆಜಿ ಉಚಿತ ಅಕ್ಕಿ ಜೊತೆಗೆ ಐದು ಕೆಜಿ ಅಕ್ಕಿಯ ಬಾಬ್ತು ತಲಾ 170 ರೂಪಾಯಿಗಳನ್ನು ಪಡೆಯುತ್ತಿದ್ದಾರೆ ಎಂದು ಸಿದ್ದರಾಮಯ್ಯ ವಿವರಿಸಿದರು. ಗೃಹಲಕ್ಷ್ಮಿ ಯೋಜನೆಯಡಿ 1.22 ಕೋಟಿ ಕುಟುಂಬಗಳ ಯಜಮಾನಿಯರು ಪ್ರತಿ ತಿಂಗಳು 2 ಸಾವಿರ ರೂಪಾಯಿ ಪಡೆಯುತ್ತಿದ್ದಾರೆ. ಹೆಚ್ಚೂ ಕಡಿಮೆ ಈ ಗ್ಯಾರಂಟಿಯಿಂದ ಪ್ರತೀ ವರ್ಷ 30 ಸಾವಿರ ಕೋಟಿ ರೂಪಾಯಿ ಹಣ ಮನೆ ಯಜಮಾನಿಯರ ಖಾತೆಗೆ ನೇರವಾಗಿ ಜಮೆ ಆಗುತ್ತಿದೆ. ಯುವ ನಿಧಿ ಯೋಜನೆಯಡಿ ನಿರುದ್ಯೋಗಿ ಪದವೀಧರರು ಮತ್ತು ಡಿಪ್ಲೊಮೋ ಹೊಂದಿರುವವರಿಗೆ ಭತ್ತೆ ನೀಡಲಾಗುತ್ತಿದೆ. ನಮ್ಮ ಸರಕಾರ ಬಂದ 8 ತಿಂಗಳೊಳಗೆ ಎಲ್ಲ ಐದು ಗ್ಯಾರಂಟಿಗಳು ಆರಂಭವಾಗಿವೆ. ಮಹಾರಾಷ್ಟ್ರದ ಬಿಜೆಪಿ ಮುಖಂಡರು ಮತ್ತು ಮಂತ್ರಿಗಳು ಕರ್ನಾಟಕಕ್ಕೆ ಬಂದು ಪರೀಕ್ಷಿಸಲಿ ಎಂದು ಅವರು ಸವಾಲು ಹಾಕಿದರು.

ಕರ್ನಾಟಕ ಪ್ರತೀ ವರ್ಷ 4 ಲಕ್ಷ 50 ಸಾವಿರ ಕೋಟಿ ರೂ.ಗಳಷ್ಟು ತೆರಿಗೆಯನ್ನು ಕೇಂದ್ರಕ್ಕೆ ಪಾವತಿಸಿದರೆ, ವಾಪಾಸ್ ರಾಜ್ಯಕ್ಕೆ ಬರುತ್ತಿರುವುದು 60 ಸಾವಿರ ಕೋಟಿ ರೂಪಾಯಿ ಮಾತ್ರ. ಮಹಾರಾಷ್ಟ್ರ ರಾಜ್ಯ ಪ್ರತಿ ವರ್ಷ 8 ಲಕ್ಷ 78 ಸಾವಿರ ಕೋಟಿ ರೂಪಾಯಿ ತೆರಿಗೆ ಕಟ್ಟಿದರೆ ವಾಪಾಸ್ ಬರುತ್ತಿರುವುದು



1 ಲಕ್ಷ 30 ಸಾವಿರ ಕೋಟಿ ರೂ.ಮಾತ್ರ ಎಂದು ಸಿದ್ದರಾಮಯ್ಯ ಹೇಳಿದರು.

ಮಹಾರಾಷ್ಟ್ರ ಕಟ್ಟುವ ಪ್ರತಿ ಒಂದು ರೂಪಾಯಿ ತೆರಿಗೆಯಲ್ಲಿ 15 ಪೈಸೆಯಷ್ಟನ್ನು, ಕರ್ನಾಟಕ 13 ಪೈಸೆಯಷ್ಟನ್ನು ಮಾತ್ರ ವಾಪಾಸ್ ಪಡೆಯುತ್ತಿದೆ. ಕೇಂದ್ರದ ಮೋದಿ ಸರಕಾರ ಕರ್ನಾಟಕ ಮತ್ತು ಮಹಾರಾಷ್ಟ್ರ ಎರಡೂ ರಾಜ್ಯಗಳಿಗೂ ಅನ್ಯಾಯ ಮಾಡುತ್ತಿದೆ. ಗ್ಯಾರಂಟಿಗಳ ಜಾರಿಯಿಂದ ಆರ್ಥಿಕತೆ ನಾಶವಾಗುತ್ತದೆ ಎಂದು ಮೋದಿ ಭಾಷಣ ಮಾಡಿದ್ದಾರೆ. ಆದರೆ, ಬಿಜೆಪಿ ಮಹಾರಾಷ್ಟ್ರ ಚುನಾವಣೆಯಲ್ಲೂ ಗ್ಯಾರಂಟಿಗಳನ್ನು ಘೋಷಿಸಿದೆ. ಮಧ್ಯಪ್ರದೇಶ ಚುನಾವಣೆಯಲ್ಲೂ ಗ್ಯಾರಂಟಿಗಳನ್ನು ಘೋಷಿಸಿತ್ತು ಎಂದು ಅವರು ಟೀಕಿಸಿದರು.

ಮಹಾರಾಷ್ಟ್ರ ಸಾಮಾಜಿಕವಾಗಿ, ಆರ್ಥಿಕವಾಗಿ ದೊಡ್ಡ ರಾಜ್ಯ. ಆದುದರಿಂದ, ಇಲ್ಲಿ ಕಾಂಗ್ರೆಸ್ ಮತ್ತು ಮಹಾ ವಿಕಾಸ್ ಆಘಾಡಿ ಒಕ್ಕೂಟ ಅಧಿಕಾರಕ್ಕೆ ಬಂದರೆ ಎಲ್ಲ ಗ್ಯಾರಂಟಿಗಳನ್ನು ಜಾರಿ ಮಾಡುತ್ತಾರೆ. ನಾನು ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದಾಗ ರೈತರ 8,165 ಕೋಟಿ ರೂ. ಸಾಲ ಮನ್ನಾ ಮಾಡಿದ್ದೇನೆ. ಮನಮೋಹನ್ ಸಿಂಗ್ ಪ್ರಧಾನಿ ಆದಾಗ ರೈತರ 76 ಸಾವಿರ ಕೋಟಿ ರೂಪಾಯಿ ಸಾಲ ಮನ್ನಾ ಮಾಡಿದ್ದರು ಎಂದು ಸಿದ್ದರಾಮಯ್ಯ ತಿಳಿಸಿದರು. ಆದುದರಿಂದ, ಮಹಾರಾಷ್ಟ್ರ ಜನತೆ ಮಹಾ ವಿಕಾಸ್ ಅಘಾಡಿಯನ್ನು ಗೆಲ್ಲಿಸುವ ಮೂಲಕ ಮಹಾರಾಷ್ಟ್ರದ ಅಭಿವೃದ್ಧಿ ಮತ್ತು ಮಹಾರಾಷ್ಟ್ರದ ಜನತೆಯ ಆರ್ಥಿಕ ಪ್ರಗತಿಗೆ ಕಾರಣರಾಗಬೇಕು ಎಂದು ಮುಖ್ಯಮಂತ್ರಿ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಸದೆ ಪ್ರಣಿತಿ ಶಿಂಧೆ, ಸಚಿವ ಎಂ.ಬಿ.ಪಾಟೀಲ್, ಮುಖ್ಯಮಂತ್ರಿಯ ರಾಜಕೀಯ ಕಾರ್ಯದರ್ಶಿ ಕೆ.ಗೋವಿಂದರಾಜು ಸೇರಿದಂತೆ ಮಹಾರಾಷ್ಟ್ರ ಕಾಂಗ್ರೆಸ್ ಸಮಿತಿಯ ಮುಖಂಡರು ಉಪಸ್ಥಿತರಿದ್ದರು.

## ಎಸಿ ನ್ಯಾಯಾಲಯಗಳಲ್ಲಿ ಬಾಕಿ ಇದ್ದ ಶೇ.70ರಷ್ಟು ತಕರಾರು ಅರ್ಜಿಗಳ ವಿಲೇವಾರಿ: ಸಚಿವ ಕೃಷ್ಣಬೈರೇಗೌಡ




ಬೆಂಗಳೂರು: ಉಪ ವಿಭಾಗಾಧಿಕಾರಿ (ಎ.ಸಿ) ಕಂದಾಯ ನ್ಯಾಯಾಲಯದಲ್ಲಿ ಈ ಹಿಂದಿನ ಸರ್ಕಾರ ಉಳಿಸಿ ಹೋಗಿದ್ದ ಹಳೆಯ ತಕರಾರು ಅರ್ಜಿಗಳ ಪೈಕಿ ಶೇ.70ರಷ್ಟು ಪ್ರಕರಣಗಳನ್ನು ಕಳೆದ ಒಂದು ವರ್ಷದಲ್ಲಿ ಇತ್ಯರ್ಥಪಡಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಅಧಿಕಾರಿಗಳ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ವಿಕಾಸಸೌಧದಲ್ಲಿ ಶನಿವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲಾ ಉಪ ವಿಭಾಗಾಧಿಕಾರಿಗಳ ಜೊತೆ ಮಾಸಿಕ ಸಭೆ ನಡೆಸಿ ಮಾತನಾಡಿದ ಅವರು, "ಎಸಿ ನ್ಯಾಯಾಲಯಗಳಲ್ಲಿ ಪ್ರಕರಣಗಳನ್ನು ವಿಲೇವಾರಿ ಮಾಡಲು ಸರ್ಕಾರ ನಿಗದಿಪಡಿಸಿರುವ ಕಾಲಮಿತಿ 6 ತಿಂಗಳು ಮಾತ್ರ. ಆದರೆ ಕಳೆದ ಸರ್ಕಾರ ತನ್ನ ಅಧಿಕಾರದ ಅವಧಿಯಲ್ಲಿ ಜನಸಾಮಾನ್ಯರ ಸಮಸ್ಯೆಗಳನ್ನು ಬಗೆಹರಿಸಬೇಕಾದ ಕಂದಾಯ ನ್ಯಾಯಾಲಯಗಳ ಪ್ರಕರಣಗ ವಿಳಂಬದ ಬಗ್ಗೆ ತಲೆಯನ್ನೇ ಕೆಡಿಸಿಕೊಂಡಿರಲಿಲ್ಲ. ಪರಿಣಾಮ ರೈತರು ತೀವ್ರ ತೊಂದರೆ ಒಳಗಾಗಬೇಕಾದ ಸ್ಥಿತಿ ಎದುರಾಗಿತ್ತು" ಎಂದು ವಿಷಾದಿಸಿದರು.

ಅಭಿಯಾನ ಮಾದರಿಯಲ್ಲಿ ವಿಲೇವಾರಿ: "ನಮ್ಮ ಸರ್ಕಾರ ಅಧಿಕಾರ ವಹಿಸಿಕೊಂಡಾಗ ಎಸಿ ನ್ಯಾಯಾಲಯದಲ್ಲಿ ಒಂದು ವರ್ಷಕ್ಕಿಂತ ಹೆಚ್ಚಿನ ಅವಧಿಯ 59,339 ಪ್ರಕರಣಗಳು ವಿಲೇ ಆಗದೆ ಬಾಕಿ ಉಳಿದಿದ್ದವು. ಕಂದಾಯ ನ್ಯಾಯಾಲಯಗಳಲ್ಲಿ ಪ್ರಕರಣಗಳ ವಿಲೇ ಈ ರೀತಿಯಾಗಿ ಮಿತಿಮೀರಿ ವಿಳಂಭವಾಗುವುದರಿಂದ ಸಾಮಾನ್ಯ ಜನರಿಗೆ ತೀವ್ರ ತೊಂದರೆಯಾಗುತ್ತಿರುವುದನ್ನು ಗಮನಿಸಿದ ನಮ್ಮ ಸರ್ಕಾರ ಇದಕ್ಕೊಂದು ಪರಿಹಾರ ನೀಡಲು ತೀರ್ಮಾನಿಸಿತ್ತು. ಬಾಕಿ ಪ್ರಕರಣಗಳನ್ನು ವಿಲೇ ಮಾಡಬೇಕು ಎಂದು ಮಾನ್ಯ ಮುಖ್ಯಮಂತ್ರಿಯವರ ಸೂಚನೆ ಮೇರೆಗೆ ಕಳೆದ ಒಂದು ವರ್ಷದಲ್ಲಿ ಬಾಕಿ ಪ್ರಕರಣಗಳ ವಿಲೇವಾರಿಯನ್ನು ಅಭಿಯಾನ ಮಾದರಿಯಲ್ಲಿ ಕೈಗೆತ್ತಿಕೊಳ್ಳಲಾಗಿದೆ" ಎಂದರು.

"ಎಸಿ ನ್ಯಾಯಾಲಯಗಳಲ್ಲಿ ಒಂದು ವರ್ಷಕ್ಕಿಂತ ಹೆಚ್ಚು ಅವಧಿಗೆ ಬಾಕಿ ಇದ್ದ 59,339 ಪ್ರಕರಣಗಳ ಪೈಕಿ ಕಳೆದ ಒಂದು ವರ್ಷದಲ್ಲಿ 44,545 ಪ್ರಕರಣಗಳನ್ನು ವಿಲೇ ಮಾಡಲಾಗಿದೆ. ಹಾಲಿ ಬಾಕಿಯನ್ನು 14,794 ಕ್ಕೆ ಇಳಿಸಲಾಗಿದ್ದು, ಶೇ.70ಕ್ಕೂ ಹೆಚ್ಚು ಪ್ರಗತಿ ಸಾಧಿಸಲಾಗಿದೆ" ಎಂದು ಅಧಿಕಾರಿಗಳ ಕಾರ್ಯ ವೈಖರಿ ಬಗ್ಗೆ ಮೆಚ್ಚುಗೆ ಸೂಚಿಸಿದರು.

ಹಿಂದಿನ ಸರ್ಕಾರದ ಆಡಳಿತ ಯಂತ್ರ ವೈಫಲ್ಯ: "1ರಿಂದ 5 ವರ್ಷಗಳ ಅವಧಿಯಲ್ಲಿ ಬಾಕಿ ಉಳಿದಿದ್ದ 26,551 ಪ್ರಕರಣಗಳ ಪೈಕಿ 10,504 ಪ್ರಕರಣಗಳನ್ನು ವಿಲೇ ಮಾಡಲಾಗಿದೆ. ಇನ್ನೂ 5 ವರ್ಷಕ್ಕೂ ಮೇಲ್ಪಟ್ಟ 32,787 ಪ್ರಕರಣಗಳನ್ನು ಈ ಹಿಂದಿನ ಸರ್ಕಾರ ಬಾಕಿ ಉಳಿಸಿಹೋಗಿತ್ತು. ಇದು ಆಡಳಿತ ಯಂತ್ರ ವೈಫಲ್ಯವಲ್ಲದೆ ಮತ್ತೇನು ಅಲ್ಲ. ಆದರೆ, ಈ ಪ್ರಕರಣಗಳನ್ನೂ ಕಳೆದ ಇಂದು ವರ್ಷದ ಅವಧಿಯಲ್ಲಿ 28,497 ಪ್ರಕರಣಗಳಿಗೆ ಮುಕ್ತಿ ನೀಡಲಾಗಿದೆ. ಕೇವಲ 4290 ಪ್ರಕರಣಗಳನ್ನು ಮಾತ್ರ ಉಳಿಸಲಾಗಿದೆ" ಎಂದು ಪ್ರಶಂಸಿಸಿದರು.

"ಎಸಿ ಕಂದಾಯ ನ್ಯಾಯಾಲಯಗಳಲ್ಲಿನ ಪ್ರಕರಣಗಳ ಇತ್ಯರ್ಥಕ್ಕಾಗಿಯೇ ಸರ್ಕಾರ 18 ಜನ ವಿಶೇಷ ಉಪ ವಿಭಾಗಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ತಕರಾರು ಅರ್ಜಿಗಳ ವಿಲೇವಾರಿಯನ್ನು ಎಲ್ಲಾ ಅಧಿಕಾರಿಗಳೂ ಇದೇ ವೇಗದಲ್ಲಿ ಮುಂದುವರೆಸಿದರೆ ಮುಂದಿನ ಜನವರಿ ಅಥವಾ ಫೆಬ್ರವರಿಯೊಳಗಾಗಿ ಎಲ್ಲಾ ಬಾಕಿ ಪ್ರಕರಣಗಳೂ ಇತ್ಯರ್ಥವಾಗಲಿದೆ. ಅಲ್ಲದೇ, ಉಪ ವಿಭಾಗಾಧಿಕಾರಿಗಳು ವಾರಕ್ಕೆ ನಾಲ್ಕು ಮತ್ತು ವಿಶೇಷ ಉಪ ವಿಭಾಗಾಧಿಕಾರಿಗಳು ಎರಡು ಪ್ರಕರಣವನ್ನು ವಿಲೇಗೊಳಿಸಬೇಕು" ಎಂದು ಅವರು ತಿಳಿಸಿದರು.

ಸಭೆಯಲ್ಲಿ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯ, ಕಂದಾಯ ಆಯುಕ್ತ ಸುನೀಲ್ ಕುಮಾರ್ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

### ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭಾಷಣಕ್ಕೆ ಚಪ್ಪಾಳೆಗಳ ಸುರಿಮಳೆ

## ಗೃಹಲಕ್ಷ್ಮೀ ಯೋಜನೆ ಕುರಿತು ಅಪಪ್ರಚಾರ ಖಂಡನೀಯ: ಸಚಿವೆ ಹೆಬ್ಬಾಳಕರ್



ಜತ್(ಮಹಾರಾಷ್ಟ್ರ): ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರ ಜಾರಿಗೊಳಿಸಿರುವ ಗೃಹಲಕ್ಷ್ಮೀ ಯೋಜನೆ ಕುರಿತು ಮಹಾರಾಷ್ಟ್ರದಲ್ಲಿ ಸಾಕಷ್ಟು ಅಪಪ್ರಚಾರ ಮಾಡಲಾಗುತ್ತಿದ್ದು, ಅದಕ್ಕೆ ಯಾರೂ ಕಿವಿಗೊಡಬಾರದು. ನಿರಂತರವಾಗಿ 14 ತಿಂಗಳಿನಿಂದ ರಾಜ್ಯದ ಮಹಿಳೆಯರಿಗೆ ಅತ್ಯಂತ ವ್ಯವಸ್ಥಿತವಾಗಿ ಗೃಹಲಕ್ಷ್ಮೀ ಯೋಜನೆಯ ಹಣ ತಲುಪಿಸಲಾಗುತ್ತಿದೆ ಎಂದು ಕರ್ನಾಟಕದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಜತ್ ವಿಧಾನಸಭಾ ಕ್ಷೇತ್ರದ ಉಮದಿಯಲ್ಲಿ ಆಯೋಜಿಸಿದ್ದ ಪ್ರಚಾರ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರೊಂದಿಗೆ ಭಾಗವಹಿಸಿ ಮಹಾ ವಿಕಾಸ ಅಘಾಡಿ ಅಭ್ಯರ್ಥಿ ಕಾಂಗ್ರೆಸ್ ನ ವಿಕ್ರಮಸಿಂಹ ಬಾಳಾಸೋ ಸಾವಂತ್ ಅವರ ಪರವಾಗಿ ಸಚಿವರು ಮಾತನಾಡುತ್ತಿದ್ದರು. ಗೃಹಲಕ್ಷ್ಮೀ ಯೋಜನೆ ಕುರಿತು ಸುಳ್ಳು ಪ್ರಚಾರ ಮಾಡುತ್ತಿದ್ದಾರೆ. ಈ ಕುರಿತ ಸುಳ್ಳು ಜಾಹಿರಾತನ್ನೂ ನೋಡಿದ್ದೇನೆ. ಈವರೆಗೆ 30 ಸಾವಿರ ಕೋಟಿ ರೂ.ಗಳಿಗಿಂತ ಹೆಚ್ಚು ಹಣವನ್ನು ನಾವು ಕರ್ನಾಟಕದ ಮಹಿಳೆಯರಿಗೆ ಹಾಕಿದ್ದೇವೆ. ಕಳೆದ 14 ತಿಂಗಳಿನಿಂದ ನಿರಂತರವಾಗಿ ಯೋಜನೆ ನಡೆಯುತ್ತಿದೆ. ಅಪಪ್ರಚಾರಕ್ಕೆ ಯಾರೂ ಕಿವಿಗೊಡಬೇಡಿ ಎಂದು ಅವರು ಮನವಿ ಮಾಡಿದರು.

ಇಲ್ಲಿಯ ಸರಕಾರ ಭಾವನೆಗಳ ಮೇಲೆ ಆಡ ಆಡಲು ಮುಂದಾಗಿದೆ. ನಾವು ಬದುಕಿನ ಮೇಲೆ ಆಡಳಿತ ನಡೆಸುತ್ತೇವೆ. ಇಲ್ಲಿನ ಅಭ್ಯರ್ಥಿ ವಿಕ್ರಮ ಸಿಂಹ್ ಹಿಂದೆ ಜಿಲ್ಲಾ ಪಂಚಾಯಿತಿ ಸದಸ್ಯರಾಗಿ ಕೆಲಸ ಮಾಡಿದವರು. ಅತ್ಯುತ್ತಮ ಕೆಲಸ ಮಾಡುವ ಮನೋಭಾವ ಉಳ್ಳವರು. ಈ ಹಿಂದೆ ವಿಧಾನಸಭೆಯಲ್ಲಿ ಒಮ್ಮೆ ಸೋತರು ಜನಸೇವೆ ನಿಲ್ಲಿಸಲಿಲ್ಲ. ಜನಸಂಪರ್ಕ ಇಟ್ಟುಕೊಂಡು ಬರುತ್ತಿದ್ದಾರೆ. ಹಾಗಾಗಿ ಅವರಿಗೆ ಹೆಚ್ಚಿನ ಮತ ನೀಡಿ ಕನಿಷ್ಠ 30 ಸಾವಿರ ಮತಗಳ ಅಂತರದಿಂದ ಗೆಲ್ಲಿಸಿ ಎಂದು ಲಕ್ಷ್ಮೀ ಹೆಬ್ಬಾಳಕರ್ ವಿನಂತಿಸಿದರು.

ನನ್ನ ಕ್ಷೇತ್ರದಲ್ಲಿ ನನ್ನ ಜಾತಿಯಾದ ಲಿಂಗಾಯತರು ಬಹಳ ಕಡಿಮೆ ಸಂಖ್ಯೆಯಲ್ಲಿದ್ದಾರೆ. ಮರಾಠಿ ಭಾಷಿಕರೇ ದೊಡ್ಡ ಪ್ರಮಾಣದಲ್ಲಿದ್ದಾರೆ. ಆದರೂ ನನ್ನನ್ನು 56 ಸಾವಿರ ಮತಗಳ ಅಂತರದಿಂದ ಗೆಲ್ಲಿಸಿದ್ದಾರೆ. ಜಾತಿ ರಾಜಕಾರಣ ಎಲ್ಲೂ ಇಲ್ಲ. ಎಲ್ಲವೂ ಸುಳ್ಳು. ನಾವು ಎಲ್ಲ ಜಾತಿಯವರು ಒಂದಾಗಿದ್ದೇವೆ. ಬಾಬಾಸಾಹೇಬ ಅಂಬೇಡ್ಕರ್, ಬಸವಣ್ಣ, ಛತ್ರಪತಿ ಶಿವಾಜಿ ಮಹಾರಾಜ ಅವರ ತತ್ವಗಳ ಮೇಲೆ ನಡೆಯುತ್ತಿದ್ದೇವೆ ಎಂದು ಅವರು ಪ್ರತಿಪಾದಿಸಿದರು.

ಈ ಭಾಗದಲ್ಲಿ ಕನ್ನಡಿಗರು ದೊಡ್ಡ ಸಖ್ಯೆಯಲ್ಲಿದ್ದಾರೆ. ನನಗೂ ಈ ಭಾಗಕ್ಕೂ ಅವಿನಾಭಾವ ಸಂಬಂಧವಿದೆ. ಇಲ್ಲಿನ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಇದೆ ಎಂದು ಹೇಳಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಕರ್ನಾಟಕ ಸರಕಾರ ಅಗತ್ಯ ನೆರವು ನೀಡಲಿದೆ ಎಂದು ಹೆಬ್ಬಾಳಕರ್ ಭರವಸೆ ನೀಡಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಕನ್ನಡ, ಮರಾಠಿ ವಾಕ್ ಚಾತುರ್ಯಕ್ಕೆ ಅಲ್ಲಿನ ಜನ ಚಪ್ಪಾಳೆಗಳ ಸುರಿಮಳೆಗೈದರು. ಈ ವೇಳೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಮಾಜಿ ಸಚಿವರಾದ ಎಸ್.ಆರ್.ಪಾಟೀಲ, ವಿಠ್ಠಲ ಕಟ್ಲಗೊಂಡ, ನಾನಾ ಶಿಂಧೆ, ಚನ್ನಪ್ಪ ಹೊರ್ತಿಕರ್, ರೇಷ್ಮಾ ಹೊರ್ತಿಕರ್, ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಅಭಿವೃದ್ಧಿಗೆ ವಿಜ್ಞಾನ ಕೊಡುಗೆ ಅಪಾರ



**ಇಂಡಿ:** ದೇಶದ ಅಭಿವೃದ್ಧಿಗೆ ವಿಜ್ಞಾನದ ಕೊಡುಗೆ ಅಪಾರವಾಗಿದೆ. ಸುಸ್ಥಿರ ಭವಿಷ್ಯಕ್ಕಾಗಿ ವಿಜ್ಞಾನ ತಂತ್ರಜ್ಞಾನ ಮುಖ್ಯ. ಸಮಾಜದಲ್ಲಿ ವಿಜ್ಞಾನದ ಪಾತ್ರ ಮತ್ತು ಉದಯೋನ್ಮುಖ ವೈಜ್ಞಾನಿಕ ವಿಷಯಗಳ ಕುರಿತು ಮಕ್ಕಳನ್ನು ತೊಡಗಿಸಿಕೊಳ್ಳುವ ಅಗತ್ಯವನ್ನು ವಿಜ್ಞಾನದಿಂದ ನಡೆಯು ತ್ತಿದೆ ಎಂದು ಕಂದಾಯ ಉಪವಿಬಾಗಾಧಿಕಾರಿ ಅಬೀದ್ ಗದ್ಯಾಳ ಹೇಳಿದರು.

ಪಟ್ಟಣದ ಹಡಪದ ಅಪ್ಪಣ್ಣ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ನಡೆದ ಮಕ್ಕಳ ದಿನಾಚರಣೆ ಮತ್ತು ವಿಜ್ಞಾನ ಪ್ರದರ್ಶನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹಿರೇಬೇವನೂರ ವೇದ ಮೂರ್ತಿ ದಯಾನಂದ ಹಿರೇಮಠ ಮಾತನಾಡಿ ವಿಜ್ಞಾನ ಮತ್ತು ನಮ್ಮ ಜೀವನದಲ್ಲಿ ಅದರ ಮಹತ್ವ ಕುರಿತು ಮಕ್ಕಳಲ್ಲಿ ಅರಿವು ಮೂಡಿಸಲು ವಿಜ್ಞಾನ ದಿನಾಚರಣೆ ಮುಖ್ಯ ಎಂದರು.

ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ ಮಾತನಾಡಿ, ವಿದ್ಯಾರ್ಥಿಗಳು ವಿಜ್ಞಾನದ ಸಾಧಕಗಳ ಪ್ರಯೋಜನ ಪಡೆದು ಕೊಳ್ಳಬೇಕು. ಬಾಧಕಗಳ ಬಗ್ಗೆ ವಿಚಾರ ಮಾಡಬಾರದು ಎಂದರು.

ಮುಖ್ಯ ಶಿಕ್ಷಕಿ ಭವಾನಿಗೌಡ ಮತ್ತು ಜಯಶ್ರೀ ಗೌಡ ಮಾತನಾಡಿದರು.

ಸಭೆಯಲ್ಲಿ ಭೀಮರಾಯಗೌಡ ಬಿರಾದಾರ,ಶ್ರೀ ಹಡಪದ ಅಪ್ಪಣ್ಣ ವಿದ್ಯಾ ಸಂಸ್ಥೆಯ ಅಧ್ಯಕ್ಷ ಸಂತೋಷ ಗವಳಿ, ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಸಿದರಾಯ ಅಪ್ತಾಗಿರಿ, ಉಪಾಧ್ಯಕ್ಷ ಶಿವಾನಂದ ನಾವಿ,ಆಡಳಿತ ಅಧಿಕಾರಿ ಪಂಡಿತ ಬಿರಾದಾರ, ಸಿದ್ದು ನಾವಿ, ನಟರಾಜ ಗವಳಿ , ಶಕುಂತಲಾ ನಾವಿ ಮತ್ತಿತರರು ವೇದಿಕೆಯ ಮೇಲೆ ಇದ್ದರು.

# ಸಮಚಿತ್ತದಿಂದ ಅಧ್ಯಯನ ಮಾಡಿ



**ಬಾಗಲಕೋಟೆ:** ಒಬ್ಬ ಮನುಷ್ಯ ಪರಿಪೂರ್ಣವಾಗಬೇಕಾದರೆ ದೇಶ ಸುತ್ತಬೇಕು, ಕೋಶ ಓದಬೇಕು ಎಂಬ ಗಾದೆ ಇದ್ದು, ದೇಶ ಸುತ್ತಲೂ ಆಗದಿದ್ದಲ್ಲಿ ಕೋಶ (ಅಧ್ಯಯನ) ಮಾಡುವದ-ರಿಂದ ಪರಿಪೂರ್ಣನಾಗುತ್ತಿದ್ದು, ಅದಕ್ಕಾಗಿ ಓದುಗರು ಸಮಚಿತ್ತದಿಂದ ಅಧ್ಯಯನ ಮಾಡಬೇಕೆಂದು ಗ್ರೇಟ್-2 ತಹಶೀಲ್ದಾರ ನಾಗೇಂದ್ರ ಕೋರಿಶೆಟ್ಟಿ ಹೇಳಿದರು.

ಉಪವಿಭಾಗಾಧಿಕಾರಿಗಳ ಕಾರ್ಯಾಲಯದ ಸಭಾಭವನದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆ, ಜಿಲ್ಲಾ ಕೇಂದ್ರ ಗ್ರಂಥಾಲಯ ಸಹಯೋಗದಲ್ಲಿ ನಡೆದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸ್ಪರ್ಧಾತ್ಮಕ ಅಧ್ಯಯನ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು ಒಂದು ಪುಸ್ತಕ ಒಬ್ಬ ಶ್ರೇಷ್ಠ ಸ್ನೇಹಿತನಿದ್ದಂತೆ. ಶ್ರೇಷ್ಠ ಕವಿಗಳು ದಾರ್ಶನಿಕರು, ಆತ್ಮಚರಿತ್ರೆ ಬರೆದವರ ಪುಸ್ತಕಗಳನ್ನು ಓದುವದ-ರಿಂದ ಬದುಕುವ ಕಲೆ ಕರಗತವಾಗುತ್ತಿದೆ ಎಂದರು.

ಒಬ್ಬ ಲೇಖಕ ಒಂದು ವಿಷಯದ ಮೇಲೆ ಬರೆದಿದ್ದರೆ, ಅದೇ ವಿಷಯವನ್ನು ಮತ್ತೊಬ್ಬ ಲೇಖಕ ವಿಭಿನ್ನವಾಗಿ ಬರೆದಿರುತ್ತಾರೆ. ವಿಷಯ ಒಂದೇ ಆದರೂ ಅಧ್ಯಯನ ರೀತಿ ಬೇರೆ ಯಾಗಿರುತ್ತದೆ. ಕಾರಣ ಹಲವಾರು ಲೇಖಕರ ಪುಸ್ತಕಗಳನ್ನು ಓದುವುದು ಅವಶ್ಯವಾಗಿದೆ. ಆ ನಿಟ್ಟಿನಲ್ಲಿ ಪ್ರತಿ ಗ್ರಾಪಂ ಮಟ್ಟದಲ್ಲಿ ಗ್ರಂಥಾಲಯ ವ್ಯವಸ್ಥೆ ಮಾಡಲಾಗಿದೆ. ಗ್ರಾಮೀಣ ಮಟ್ಟದಲ್ಲಿ ಓದುಗರ ಸಂಖ್ಯೆ ಹೆಚ್ಚಾಗಬೇಕೆಂಬ ಗುರಿ ಇದೆ ಎಂದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ ಕಾರ್ಯಾಲಯದ ಶಿರಸ್ತೇದಾರ ಮಹಾಂತೇಶ ಅಂಗಡಿ, ಸ್ಪರ್ಧಾತ್ಮಕ ಅಧ್ಯಯನ ಕೇಂದ್ರದ ಅಭಿಷೇಕ ಕಬ್ಬಿಣದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ

**ಕೊಪ್ಪಳ:** ತಾಲ್ಲೂಕಿನ ಕಲ್ಹಾರಿ ಚಾಪೆಲ್ ಟ್ರಸ್ಟ್ ಕೊಪ್ಪಳದಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಪಾಲನಾ ಸಂಸ್ಥೆಗಳು, ಯುನಿಸೆಫ್ ಮಕ್ಕಳ ರಕ್ಷಣಾ ಯೋಜನೆ ಕೊಪ್ಪಳ ಮತ್ತು ನವೋದಯ ಸಮಗ್ರ ಗ್ರಾಮೀಣಾಭಿವೃದ್ಧಿ ಹಾಗೂ ಶೈಕ್ಷಣಿಕ ಸಂಸ್ಥೆ,ಢಾಣಪುರ ಸಂಂ-ಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ನಾಯ್ಯದೀಶರು ಮಹಾಂತೇಶ ಸಂಗಪ್ಪ ದರಗದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು ಮಕ್ಕಳಲ್ಲಿ ಶಿಸ್ತು ಶಾಂತಿ ಸಹನೆ ಪರೋಪಕಾರ ಮೊದಲಾದ ಗುಣಗಳನ್ನು ಬೆಳೆಸುವಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾದದ್ದು ಹಾಗೂ ಮಕ್ಕಳಿಗೆ ಸರ್ಕಾರ ಸಾಕಷ್ಟು ಯೋಜನೆಗಳನ್ನು ಜಾ-ರಿಗೊಳಿಸಿದ್ದು ಅದರ ಸದಪಯೋಗಗಳನ್ನು ಮಾಡಿಕೊಂಡು ಶಿಕ್ಷಣಕ್ಕೆ ಹೆಚ್ಚಿನ ನೀಡುವ ಪಾಲಕರು ಹೆಚ್ಚು ಒತ್ತು ಕೊಡಬೇಕು ಸಮಾರಂಭದಲ್ಲಿ ಎಂದರು.

ಮುಂದುವರೆದು, ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ಶ್ರೀ ಮಾನ್ಯ ರಮೇಶ್ ಎಸ್ ಗಾಣಿಗರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ ಅಧ್ಯಕ್ಷರು, ಬಾಲನ್ಯಾಯ ಮಂಡಳಿ, ಕೊಪ್ಪಳ ಶ್ರೀಮತಿ ನಿಲೋಫರ್ ಎಸ್ ರಾಂಪುರಿ, ಪರಶುರಾಮ ವಾಯ್ ಶೆಟ್ಟಪ್ಪನವರ ,ಎ.ವಿ.ಕಣವಿ ,



ಅಧ್ಯಕ್ಷತೆ ನವನೀತ್ ಕುಮಾರ್ ಮುಖ್ಯಸ್ಥರು, ಕಲ್ಹಾರಿನ ಚಾಪೇಲ್ ಟ್ರಸ್ಟ್, ಕೊಪ್ಪಳ ಕಳಕಪ್ಪ ತಳವಾರ, ಶ್ರೀಮತಿ ಸರೋಜಾ ಬಾಕಳೆ, ಶ್ರೀಮತಿ ನೇತ್ರಾ ಬಸವರಾಜ ಪಾಟೀಲ, ಮಾಲಿಂಗಪ್ಪ ದೋಟಿಹಾಳ, ಬಿ.ವಾಸುದೇವ, ಡಾ. ಕೆ.ರಾಘವೇಂದ್ರಭಟ್, ಹರೀಶ ಭೋಗಿ, ಪ್ರಕಾಶ ಕುಂಬಾರ ಸೇರಿದಂತೆ ಬಾಲಕ ಬಾಲಮಂದಿರ ಬಾಲಕಿಯರ ಬಾಲ ಮಂದಿರ ಅಧಿಕಾರಿಗಳು/ಸಿಬ್ಬಂದಿಗಳು ಹಾಗೂ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಚೂರು–ಪಾರು**

## ವಿಶ್ವ ವಿಕಲಚೇತನರ ದಿನಾಚರಣೆ

**ಬಾಗಲಕೋಟೆ:** ಪ್ರತಿ ವರ್ಷ ಡಿ.3ರಂದು ಆಚರಿಸಲ್ಪಡುವ ವಿಶ್ವ ವಿಕಲಚೇತನರ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಆಚರಿಸಲಾಗುತ್ತಿದ್ದು, ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ವಿಕಲಚೇತನ ವ್ಯಕ್ತಿಗಳ ಅಥವಾ ಅವರಿಗೆ ಸಹಕರಿಸುವ ಸಾಮಾನ್ಯ ವ್ಯಕ್ತಿಗಳನ್ನು ವಿಶೇಷ ಆಹ್ವಾನಿತರನ್ನಾಗಿ, ಮುಖ್ಯ ಅತಿಥಿಗಳನ್ನಾಗಿ ಕಾರ್ಯಕ್ರಮಕ್ಕೆ ಆಹ್ವಾನಿಸಿ ಗೌರವಿಸಲಾಗುತ್ತಿದೆ.ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿಗಳ ಹೆಸರನ್ನು ಅವರ ಸಾಧನೆಯ ವಿವರಗಳನ್ನೊಳಗೊಂಡ ಕಿರು ಪರಿಚಯದೊಂದಿಗೆ ಪ್ರಸ್ತಾವನೆಯನ್ನು ನವೆಂಬರ 25 ರೊಳಗಾಗಿ ಜಿಲ್ಲಾ ಕಚೇರಿ ಸಲ್ಲಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08354-220766, ಎಂ.ಆರ್.ಡಬ್ಲೂ ಬಾಗಲಕೋಟೆ (9538714441), ಬಾದಾಮಿ, ಗುಳೇದಗುಡ್ಡ (9945408215), ಹುನಗುಂದ, ಇಳಕಲ್ಲ (8970565869), ಬೀಳಗಿ (9741197060), ಮುಧೋಳ (9008173773), ಜಮಖಂಡಿ (9900417764), ರಬಕವಿ-ಬನಹಟ್ಟಿ (9739936205) ಸಂಪರ್ಕಿಸಬಹುದಾಗಿದೆ.

## ಭೀಮಪ್ಪ ಖಿಚಡೆಗೆ ಗೌರವ ಸಮ್ಮಾನ

**ರಾಯಬಾಗ:** ತಾಲ್ಲೂಕು ಚುಟುಕು ಸಾಹಿತ್ಯ ಪರಿಷತ್ತು 69 ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಕಳೆದ ರವಿವಾರ ದಿ.10 ರಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡ ಸುವರ್ಣ ಕರ್ನಾಟಕ ಚುಟುಕು ಕವಿ ಗೋಷ್ಠಿ ಹಾಗೂ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಪಟ್ಟಣದ ನಂದಿನಿ ಉತ್ಪನ್ನದ ಕ್ರಿಯಾಶೀಲ ವ್ಯಾಪಾರಸ್ಥರು ಹಾಗೂ ಪತ್ರಕರ್ತರಾದ ಶ್ರೀ ಭೀಮಪ್ಪ ಖಿಚಡೆ ಅವರು ಇತ್ತೀಚಿಗೆ ನವೆಂಬರ್ 1 ರಂದು ಬೆಳಗಾವಿಯಲ್ಲಿ ನಡೆದ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಗಣ್ಯ ಮಹೋದಯರಿಂದ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ಪಡೆದುಕೊಂಡ ಪ್ರಯುಕ್ತ ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಆಗಮಿಸಿದ ಗಣ್ಯ ಮಹೋದಯರು ಶ್ರೀ ಭೀಮಪ್ಪ ಖಿಚಡೆ ಅವರಿಗೆ ಶಾಲು ಹೊದಿಸಿ ಫಲ ತಾಂಬೂಲು ನೀಡಿ ಆತ್ಮೀಯವಾಗಿ ಸತ್ಕ-ರಿಸಿದರು.ಈ ಸಂದರ್ಭದಲ್ಲಿ ಪಪಂ ಅಧ್ಯಕ್ಷರಾದ ಅಶೋಕ ಅಂಗಡಿ ಹಿರಿಯ ಕವಿ ಪ್ರೊ ಶಿವಾನಂದ ಬೆಳಕೂಡ,ಚು ಸಾ ಪ ಅಧ್ಯಕ್ಷ ಶಿರೂರು ಶ್ರೀಶೈಲ, ಹಿರಿಯ ಸಾಹಿತಿ ಕುಮಾರ ಅವಳೆ ನಿವೃತ್ತ ಶಿಕ್ಷಕರಾದ ಬಸವರಾಜ ಕುಂದರಗಿ ಪಿ.ಬಿ. ಮುನ್ಯಾಳ ಸಾಹಿತಿ ಕನ್ನಡ ಪ್ರಾಧ್ಯಾಪಕರಾದ ಡಾ. ಜಯವೀರ ಎ. ಕೆ, ಕವಿ, ಸಮಾಜ ಸೇವಕ ಸಾಗರ ಝುಡೆನ್ನವರ ವಕೀಲ ಎಂ.ಎಂ. ಪಾಟೀಲ, ಶ್ರೀ ನಿಶಾನಮಠ ಹಾಗೂ ಚುಟುಕು ಕವಿಗಳು ಉಪಸ್ಥಿತರಿದ್ದರು.

## ೨೩ರಂದು ಗೋಡಚಿ ವೀರಭದ್ರೇಶ್ವರ ಪಾದಯಾತ್ರೆ

**ಗೋಕಾಕ:** ಇದು 7ನೇ ವರ್ಷದ ಭಕ್ತಾಧಿಗಳ ಪಾದಾರ್ಪಣೆಯಾಗಿದ್ದು , ಗೋಕಾಕದಿಂದ ಶ್ರೀ ಗೋಡಚಿ ವೀರಭದ್ರೇಶ್ವರ ದೇವಸ್ಥಾನಕ್ಕೆ ಪಾದಯಾತ್ರೆಯು ಇದೇ ದಿನಾಂಕ 23 ರಿಂದ ಪ್ರಾರಂಭವಾಗಲಿದೆ ಎಂದು ಶ್ರೀ ಸೋಮಯ್ಯ ಹಿರೇಮಠ ಅವರು ತಿಳಿಸಿದ್ದಾರೆ.ಗೋಕಾಕದಿಂದ ದುಂಡಾನಟ್ಟಿ ಮಾರ್ಗವಾಗಿ ಪ್ರಾರಂಭವಾಗುವ ಪಾದಯಾತ್ರೆಯು ದಿನಾಂಕ 24ರಂದು ಗೊಡಚಿ ದೇವಸ್ಥಾನಕ್ಕೆ ತಲುಪಲಿದೆ.ಗೋಡಚಿ ವೀರಭದ್ರೇಶ್ವರ ದೇವಸ್ಥಾನಕ್ಕೆ ಪಾದಯಾತ್ರೆಯಲ್ಲಿ ಹೋಗುವ ಮಾರ್ಗದಲ್ಲಿ ಗೋಕಾಕದಿಂದ ದುಂಡಾನಟ್ಟಿ, ಮಮದಾಪೂರ ಕ್ರಾಸ್, ನಾಯಕನಹಟ್ಟಿ ಕ್ರಾಸ್, ನಂದಿಕಟ್ಟಿ , ಯರಗಣವಿ, ಯರಗಟ್ಟಿ, ತೋರಣಗಟ್ಟಿ ಕ್ರಾಸ್, ಕಟಕೋಳ ಈ ಎಲ್ಲ ಗ್ರಾಮದ ಸದ್ಭಕ್ತರು ಪಾದಯಾತ್ರೆಗಳಿಗೆ ಸಹಾಯ ಸಹಕಾರ ಊಟೋಪಚಾರ ಜೊತೆಗೆ ಸಹಾಯ ಸಹಕಾರ ಮಾಡಲಿದ್ದಾರೆ ಎಂದು ಪಾದಯಾತ್ರಾತ್ರಿಗಳಾದ ಮುರಿಗೆಪ್ಪಾ ಸೊಗಲಿ, ವಿಕಾಸ ಬೆಂಡವಾಡ , ಮೆಳವಂಕಿಯ ಶ್ರೀಮತಿ ಮಹಾದೇವಿ ಕೊಚ್ಚರಗಿ, ರಾಜಾಪೂರದ ಸಂಜೀವ ಬೈರಗೋಳ ಇವರು ತಿಳಿಸಿದ್ದಾರೆ. ಮಾಹಿತಿಗಾಗಿ 9916267250 ಈ ಮೋಬೈಲ್ ನಂಬರನ್ನು ಸಂಪರ್ಕಿಸಲು ಕೋರಿದ್ದಾರೆ.

# ಸಪ್ತರ್ಷಿಗಳಿಂದ ಶಿಕ್ಷಣದ ಕ್ರಾಂತಿ

## ಸುವರ್ಣ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಲೇಖಕ ಮಲ್ಲಿಕಾರ್ಜುನ ಹೆಗ್ಗಳಗಿ

**ಮಹಾಲಿಂಗಪುರ:** ಮುಂಬೈ ಪ್ರಾಂತ್ಯದ ಮರಾಠಿ ಪ್ರಭಾವದಲ್ಲಿದ್ದ ಉತ್ತರ ಕರ್ನಾಟಕದಲ್ಲಿ ಕನ್ನಡ ಕಹಳೆ ಊದಿ ಶಿಕ್ಷಣ ಕ್ರಾಂತಿ ಮಾಡಿದ ಸಪ್ತರ್ಷಿಗಳ ತ್ಯಾಗ ಅಮರ ಎಂದು ಸುವರ್ಣ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಲೇಖಕ ಮಲ್ಲಿಕಾರ್ಜುನ ಹೆಗ್ಗಳಗಿ ಹೇಳಿದರು.

ಸ್ಥಳೀಯ ಕೆಎಲ್ಇ ಅಂಗಸಂಸ್ಥೆಗಳ ಆಶ್ರಯದಲ್ಲಿ ನಡೆದ ಕೆಎಲ್ಇ ಸಂಸ್ಥಾಪನಾ ದಿನಾಚರಣೆ ಕಾರ್ಯ ಕ್ರಮದಲ್ಲಿ ಮಾತನಾಡಿದರು. ಬ್ರಿಟೀಷರ ಆಡಳಿತದಲ್ಲಿ ಧಾರವಾಡ ಡಿಸಿ ಆಗಿದ್ದ ಅರಟಾಳ ರುದ್ರಗೌಡರು ಕೆಎಲ್ಇ ಸಂಸ್ಥೆಯ ಆರಂಭಿಸಲು ಎದುರಿಸಿದ ಸವಾಲು, ಅನುಭವಸಿದ ಕಷ್ಟಗಳು ಅಪಾರ. ಅವರೊಂದಿಗೆ ಮತ್ತೆ ಆರು ಜನ ಮಹಾನುಭಾವರು ಮಾಡಿದ ತ್ಯಾಗದ ಫಲವಾಗಿ ಬೃಹತ್ತಾಗಿ ಬೆಳೆದ ಸಂಸ್ಥೆ ಅವರನ್ನು ಸಪ್ತರ್ಷಿಗಳೆಂದು ಆರಾಧಿಸುತ್ತಿರುವುದು ಕೃತಜ್ಞತೆಗೆ ಸಾಕ್ಷಿ ಎಂದರು.

ಪ್ರಾಚಾರ್ಯ ಡಾ.ಕೆ.ಎಂ.ಅವರಾದಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೆಎಲ್ಇ ಸಂಸ್ಥೆ ಕಟ್ಟಿದ ಸಪ್ತರ್ಷಿಗಳ ಕಿರುಪರಿಚಯ ಮಾಡಿದರು. ಇದೇ ಕಾಲೇಜಿನಲ್ಲಿ ದೀರ್ಘಾವಧಿ ಸೇವೆ ಸಲ್ಲಿಸಿ ನಿವೃತ್ತರಾದ 4 ತಲೆಮಾರಿನ ಶಿಕ್ಷಕ ಎಂದೇ ಖ್ಯಾತರಾದ ಮಕ್ಕಳ



ಮಹಾಲಿಂಗಪುರದ ಕೆಎಲ್ಇ ಅಂಗ ಸಂಸ್ಥೆಗಳ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಸಂಸ್ಥಾಪನಾ ದಿನಾಚರಣೆಯಲ್ಲಿ ಮಲ್ಲಿಕಾರ್ಜುನ ಹೆಗ್ಗಳಗಿ ಅವರನ್ನು ಸನ್ಮಾನಿಸಲಾಯಿತು.

ಸಾಹಿತಿ ಅಣ್ಣಾಜಿ ಫಡತಾರೆ ಅವರನ್ನು ಹಾಗೂ ಮುಖ್ಯ ಅತಿಥಿಯನ್ನೂ ಸನ್ಮಾನಿಸಲಾಯಿತು. ಸ್ಥಾನಿಕ ಆಡಳಿತ ಮಂಡಳಿ ಸದಸ್ಯರಾದ ಅಶೋಕ ಅಂಗಡಿ, ಬಸವರಾಜ ಢಪಳಾಪೂರ, ಡಿಪ್ಲೋಮಾ ಕಾಲೇಜಿನ ಸುಭಾಸ್ ಮೂಶಿ, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕಿ ಜಯಶ್ರೀ ಹಿರೇಮಠ, ಡಾ.ಅಶೋಕ ನರೋಡೆ, ಡಾ.ಸುನಂದಾ ಸೋರಗಾಂವಿ ಇದ್ದರು. ಪ್ರಭಾರಿ ಪ್ರಾಚಾರ್ಯ ಆರ್.ಎನ್.ಪಟ್ಟಣಶೆಟ್ಟಿ ಸ್ವಾಗತಿಸಿದರು. ಉಪಪ್ರಾಂಶುಪಾಲ ಬಿ.ಎನ್.ಅರಕೇರಿ ಪರಿಚಯಿಸಿದರು. ಆರ್.ಎಸ್.ಕಲ್ಲೋಳಿ, ಬಿ.ಎನ್. ಹಂದಿಗುಂದ ನಿರೂಪಿಸಿದರು. ಐಟಿಐ ಪ್ರಾಚಾರ್ಯ ಎಸ್.ಎಸ್.ಅಂಗಡಿ ವಂದಿಸಿದರು.

## ಸರ್ವಜ್ಞ ವಿದ್ಯಾಪೀಠ ಶಾಲೆಯಲ್ಲಿ ಮಕ್ಕಳ ದಿನಾಚರಣೆ



**ತಾಳಿಕೋಟೆ:** ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಪಂ. ಜವಾಹರಲಾಲ್ ನೆಹರು ಅವರ ಜನ್ಮದಿನದಂದು ಮಕ್ಕಳ ಬಗೆಗಿನ ಅತೀವ ಪ್ರೀತಿಯ ಸಂಕೇತವಾಗಿ ಆಚರಿಸಲಾಗುವ ಮಕ್ಕಳ ದಿನ ಆಚ-ರಿಸಲಾಯಿತು.

ಪಂಡಿತ್ ಜವಾಹರಲಾಲ್ ನೆಹರು ಅವರ ಜಯಂತಿ ದಿನದಂದು ಕೇಕ್ ಕತ್ತರಿಸುವ ಮೂಲಕ ಮಕ್ಕಳಿಗೆ ಸಿಹಿ ತಿನಿಸುವುದರ ಮೂಲಕ ಮಕ್ಕಳ ದಿನಾಚರಣೆಯನ್ನು ಆಚ-ರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ, ಮುಖ್ಯೋಪಾಧ್ಯರಾದ ಸಂತೋಷ ಪವಾರ, ದೈಹಿಕ ಶಿಕ್ಷಕರಾದ ಬಸವರಾಜ ಚಳ್ಳಗಿ, ಶಾಂತಗೌಡ ಬಿರಾದಾರ, ಶಿಕ್ಷಕರಾದ ರಾಜು ಜವಳಗೇರಿ, ಭೀಮನಗೌಡ ಸಾಸನೂರ, ರಸೂಲಸಾ ತುರ್ಕಣಿಗೇರಿ, ರವಿಕುಮಾರ ಮಲ್ಲಾಬಾದಿ, ಸಿದ್ದನಗೌಡ ಮೂದನೂರು, ಸಿದ್ದನಗೌಡ ಚೌದರಿ, ಶರಣಗೌಡ ಕಾಚಾಪುರ, ಸಂಜುಕುಮಾರ ಭಜಂತ್ರಿ, ರಮೇಶ ಪಾಸೋಡಿ, ರೂಪಾ ಪಾಟೀಲ, ಶಿವಲೀಲಾ ಚುಂಚನೂರ, ಲಕ್ಷ್ಮಿ ಚುಂಚುರ, ದೇವೇಂದ್ರ ಗುಳೆದ, ಅನಿತಾ ಚೌದ್ರಿ, ಅಂಬುಜಾ ಹಜೇರಿ, ರಾಜಬಿ ಬಿದರಿ, ಕಲ್ಪನಾ ಹಜೇರಿ, ನಾಗರತ್ನ ಮೈಲೇಶ್ವರ, ಹೇಮಾ ಕೊಡೆಕಲ್, ನಾಗಶ್ರೀ ನಾಯಕ, ಶಂಕ್ರಮ್ಮ, ಮೇಘಾ ಪಾಟೀಲ, ಮುಬಿನ ಮುರಾಳ, ತನುಶ್ರೀ ಮಹೇಂದ್ರಕರ, ಸರ್ವ ಗುರು ಬಳಗದವರು ಮತ್ತು ಮುದ್ದು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಮಾಜ ಪರಿವರ್ತನೆಗೆ ಸುಂದರ ಪರಿಸರ ಅಗತ್ಯ

## ೧೮೮೨ನೇ ಮದ್ಯವರ್ಜನ ಶಿಬಿರದ ಸಮಾರೋಪ ಸಮಾರಂಭದಲ್ಲಿ ಎಚ್.ಆರ್. ಲವಕುಮಾರ

**ಗೋಕಾಕ:** ಪರಿವರ್ತನೆ ಆಗಬೇಕಾದರೆ ಪರಿಸರ ಚನ್ನಾಗಿ ಇರಬೇಕು ಅಂತಹ ಪರಿಸರವನ್ನು ನಿರ್ಮಿಸುವ ಕಾರ್ಯ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಾಡುತ್ತಿದೆ ಎಂದು ಯೋಜನಾ ನಿರ್ದೇಶಕ ಎಚ್.ಆರ್. ಲವಕುಮಾರ ಹೇಳಿದರು.

ಬುಧವಾರ ನಗರದ ಜ್ಞಾನ ಮಂದಿರದಲ್ಲಿ ಸುಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜನ ಜಾಗೃತಿ ವೇದಿಕೆ, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವ್ಯಸನ ಮುಕ್ತಿ ಮತ್ತು ಸಂಶೋಧನಾ ಕೇಂದ್ರ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ನರಗಸಭೆ ಹಾಗೂ ಶೌರ್ಯ ವಿಪತ್ತು ನಿರ್ವಾಹನ ಘಟಕ ಗೋಕಾಕ ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ 1882ನೇ ಮದ್ಯವರ್ಜನ ಶಿಬಿರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜನರ ಕಷ್ಟಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಧರ್ಮ ಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಂಸ್ಥೆ ಮಾಡುತ್ತಿದ್ದು, ಇದು ಕರ್ನಾಟಕ ರಾಜ್ಯಾದ್ಯಂತ ನಿರಂತರವಾಗಿ ನಡೆಯುತ್ತಿರುತ್ತದೆ. ಧರ್ಮಸ್ಥಳ ವ್ಯಸನ ಮುಕ್ತ ಕೇಂದ್ರದಲ್ಲಿ ಪ್ರತಿ ತಿಂಗಳಲ್ಲಿ 2 ಶಿಬಿರಗಳು ನಡೆಯುತ್ತವೆ. ಜ್ಞಾನದಾಸೋಹ ದಿಂದ ಮಾತ್ರ ಜೀವನ ಪಾವನ ವಾಗಲು ಸಾಧ್ಯ ಎಂಬ ಯೋಚನೆಯಿಂದ ಈ ಯೋಜನೆ ಧರ್ಮಾಧಿಕಾರಿ



ವಿರೇಂದ್ರ ಹೆಗಡೆ ಪ್ರಾರಂಭ ಮಾಡಿದ್ದು, ಈ ಯೋಜನೆ ಸ್ವಾಸ್ಥ್ಯ ಸಮಾಜ ನಿರ್ಮಾಣ ಸಂಕಲ್ಪ ಹೊಂದಿದೆ ಎಂದ ಅವರು ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಹುಟ್ಟಿ ಹಾಕಿ ಅದರ ಮೂಲಕ ಸಮಾಜವನ್ನು ಸೇರಿಸಿಕೊಂಡು ಮಧ್ಯ ವ್ಯಸನದಂತಹ ದುಶ್ಚಟಗಳನ್ನು ಬಿಡಿಸಲು ಶಿಬಿರಗಳನ್ನು ಹಮ್ಮಿಕೊಂಡು ಇದನ್ನು ಪ್ರಾರಂಭಿಸಿದ್ದೇವೆ ಇದರಲ್ಲಿ ಭಾಗವಹಿಸಿ ಹಲವರು ವ್ಯಸನ ಮುಕ್ತರಾಗಿದ್ದಾರೆ.

ಈ ಶಿಬಿರ ನಡೆಯಬೇಕಾದರೆ ಸ್ಥಳೀಯ ಎಲ್ಲಾ ಇಲಾಖೆಗಳು ಸಹಕಾರ ನೀಡುತ್ತವೆ ಹಾಗಾಗಿ ಶಿಬಿರಗಳು ಯಶಸ್ವಿಯಾಗಿ ಸಂಪನ್ನಗೊಳ್ಳಲು ಸಾಧ್ಯ. ಇದರಿಂದ ತಮ್ಮ ಬದುಕು ಬದಲಾಗಬೇಕು. ಮದ್ಯೆ ವ್ಯಸನಿ ಮುಕ್ತ ಸಮಾಜ ನಿರ್ಮಿಸಲು ನಾವೆಲ್ಲರೂ ಪಣತೊಡಬೇಕು ಇದಕ್ಕೆ ಪ್ರತಿಯೊಬ್ಬರ ಸಹಕಾರ ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮ ದಿವ್ಯ ಸಾನಿಧ್ಯವನ್ನು ಘೋಡಗೇರಿಯ ಶ್ರೀ ಮಲಯ್ಯ ಮಹಾಸ್ವಾಮಿಗಳು ವಹಿಸಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮದ್ಯವರ್ಜನ ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷ ನರಸಿಂಹ ಪೂಜಾರಿ ವಹಿಸಿದ್ದರು.

ವೇದಿಕೆಯಲ್ಲಿ ತಹಶೀಲ್ದಾರ್ ಡಾ. ಮೋಹನ ಭಸ್ಮೆ, ಅಶೋಕ್ ಪೂಜಾರಿ, ಸುವರ್ಣ ಹೋಸಮಠ, ಸೋಮಶೇಖರ್ ಮಗದುಮ್ಮ, ಈಶ್ವರ ಮಮದಾಪೂರ, ರಾಮಚಂದ್ರ ಕಾಕಡೆ, ಶ್ರೀಮತಿ ಶಕುಂತಲಾ ಮುರಾರಿ, ಮಹಾಂತೇಶ ಪೂಜಾರಿ, ತಿಮ್ಮೇಶಿ ಎಂ.ಸಿ., ಭಾಸ್ಕರ್ ಎನ್, ನಾಗೇಂದ್ರ ಉಪಸ್ಥಿತರಿದ್ದರು.

## ಗ್ರಾಮೀಣ ಗ್ರಂಥಾಲಯಗಳ ಪಾತ್ರ ಮುಖ್ಯ

**ಯರಗಟ್ಟಿ:** ಗ್ರಾಮೀಣ ಗ್ರಂಥಾಲಯಗಳು ಈಗ ಅರಿವು ಕೇಂದ್ರವಾಗಿ ಡಿಜಿಟಲ್ ಮಾಹಿತಿಗಳನ್ನು ತ್ವ-ರಿತವಾಗಿ ನೀಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಶಿಕ್ಷಣ ಫೌಂಡೇಶನ್ ಮದ್ಯ ಕರ್ನಾಟಕದ ರೋರಲ್ ಮ್ಯಾನೇಜರ್ ಶ್ರೀಶೈಲ ಅಥಣಿ ತಿಳಿಸಿದರು.

ಅವರು ತಾಲೂಕು ಪಂಚಾಯತ ಸಭಾ ಭವನದಲ್ಲಿ ಗಾಪಂ ಮೇಲ್ವಿಚಾರಕರಿಗೆ ಶಿಕ್ಷಣ ಫೌಂಡೇಶನ್ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಒಂದು ದಿನದ ನಾಯಕತ್ವ ಮತ್ತು ಡಿಜಿಟಲ್ ಸಾಕ್ಷರತೆಯ ಕುರಿತಾದ ಒಂದು ದಿನದ ತರಬೇತಿಯ ಉದ್ದೇಶಿಸಿ ಮಾತನಾಡಿದರು.

ಶಿಕ್ಷಣ ಫೌಂಡೇಶನ್ ಬೆಳಗಾವಿ ಜಿಲ್ಲಾ ಸಂಯೋಜಕ ರಾಘವೇಂದ್ರನಾಯ್ಕ ಮಾತನಾಡಿ, ಆದ-ನಿಕತೆಯ ಸ್ಪರ್ಶ ಪಡೆದ ಗ್ರಾಮ ಪಂಚಾಯತ ಅರಿವು ಕೇಂದ್ರಗಳು ಸಮಾಜ ಮುಖ್ಯ ವಾಹಿನಿಯಲ್ಲಿ ಗುರುತಿಸುವಕೊಳ್ಳುವಂತೆ ಮಾಡಬೇಕು ಗ್ರಂಥಾಲಯಗಳ ಶಿಕ್ಷಣ ಪೌಂಡೇಶನ್ ಸಂಸ್ಥೆಯಿಂದ ನೀಡಿರುವ ಡಿಜಿಟಲ್ ಸಾಧನೆಗಳನ್ನು ಬಳಸಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಲು ಸಾದ್ಯವಾಗಬೇಕು ಎಂದರು.

ಜಿಲ್ಲಾ ಸಂಯತೋಜಕಬಾಳಪ್ಪ ಮಡಿವಾಳರ ಮಾತನಾಡಿ ಜೀವನದಲ್ಲಿ ಕೌಶಲ್ಯವಿದ್ದರೆ ಮಾತ್ರ ಜ್ಞಾನಕ್ಕೆ ಬಲವಿರುತ್ತದೆ. ಮುಂಬರುವ ಪೀಳಿಗೆಗೆ ಡಿಜಿಟಲ್ ಸಾಕ್ಷರತೆ ಅಗತ್ಯವಾಗಿದೆ ಎಂದರು. ಕಾರ್ಯನಿರ್ವಾಹಕ ಅಧಿಕಾರಿ ಆನಂದ ಬಡಕುಂದರಿ, ಎಡಿಪಿ ಆರ್.ಎ. ಪಾಟೀಲ, ಮಂಜು ನಾಥ ಮ್ಯಾಗಿ ನಮನಿ, ಈರಣ್ಣ ಗುಂಡಗಾಂವಿ, ಮುನಿಯಪ್ಪ ಅಮೋಗಿಮಠ, ರಾಜು ಗಾಣಿಗೇರ, ಮಂಜುನಾಥ ಅಂಗಡಿ ಇದ್ದರು.



# ದೇಶ ವಿದೇಶಗಳಲ್ಲಿ ಕೆಎಲ್ಇ ಕೀರ್ತಿ ಪಸರಿಸಿದೆ



ಗೋಕಾಕ: ಗುಣಮಟ್ಟದ ಶಿಕ್ಷಣವನ್ನು ಜನಸಾಮಾನ್ಯರಿಗೆ ನೀಡುವ ಉದ್ದೇಶದಿಂದ ಸಪ್ತರ್ಷಿಗಳಿಂದ ಸ್ಥಾಪನೆಗೊಂಡ ಕೆಎಲ್ಇ ಸಂಸ್ಥೆ ಇಂದು ದೇಶ ವಿದೇಶಗಳಲ್ಲಿ ತಮ್ಮ ಕೀರ್ತಿಯನ್ನು ಹರಡುತ್ತಿದೆ ಎಂದು ಕೆಎಲ್ಇ ನಿರ್ದೇಶಕ ಜಯಾನಂದ ಮುನ್ನವಳ್ಳಿ ಹೇಳಿದರು.

ಬುಧವಾರ ನಗರದ ಕೆಎಲ್ಇ ಸಂಸ್ಥೆಯ ಸಿ.ಎಸ್. ಅಂಗಡಿ ಪದವಿ ಮಹಾವಿದ್ಯಾಲಯದಲ್ಲಿ ಕೆಎಲ್ಇ ಸಂಸ್ಥೆಯ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳ ಟ್ಯಾಲೆಂಟ್ ಎಕ್ಸ್ಪೋ ಸಮಾರಂಭದವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೆಎಲ್ಇ ಸಂಸ್ಥೆ ಇಂದು ಡಾ.ಪ್ರಭಾಕರ ಕೋರೆ ಅವರ ನೇತೃತ್ವದಲ್ಲಿ ಲಕ್ಷಾಂತರ ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಉದ್ಯೋಗವನ್ನು ನೀಡುತ್ತಿದೆ. ಆರೋಗ್ಯ ಕ್ಷೇತ್ರದಲ್ಲಿಯೂ ಮುಂಚೂಣಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ನಗರದಲ್ಲಿಯೂ ಹಲವಾರು ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿ ಪ್ರತಿವರ್ಷ 200 ವಿದ್ಯಾರ್ಥಿಗಳಿಗೆ ಉದ್ಯೋಗವನ್ನು ಕಲ್ಪಿಸುತ್ತಿದೆ. ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಕಲ್ಪಿಸಿ ಅವರನ್ನು ಸಾಧಕರನ್ನಾಗಿ ಮಾಡುತ್ತಿದೆ. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯು ಪ್ರತಿಭೆ ಇದ್ದು, ಅದನ್ನು ಪ್ರೋತ್ಸಾಹಿಸಲು ಇಂತಹ ವೇದಿಕೆಗಳನ್ನು ಕಲ್ಪಿಸಲಾಗುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಸಾಧಕರ ವಿಶೇಷ ಸನ್ಮಾದಲ್ಲಿ ತಹಶೀಲ್ದಾರ ಡಾ.ಮೋಹನ ಭಸ್ಮೆ ಹಾಗೂ ಛಾಯಾಶ್ರೀ ಪ್ರಶಸ್ತಿ ಪುರಸ್ಕೃತ ಛಾಯಾಗ್ರಾಹಕ ಬಿ.ಪ್ರಭಾಕರ (ಪ್ರವೀಣ್) ಅವರನ್ನು ಸತ್ಕರಿಸಲಾಯಿತು.

ವೇದಿಕೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಅಜೀತ್ ಮನ್ನಿಕೇರಿ, ಜಿ.ಬಿ.ಬಳಗಾರ, ಕೆಎಲ್ಇ ಸ್ಥಾನಿಕ ಆಡಳಿತ ಮಂಡಳಿಯ ಅಧ್ಯಕ್ಷ ಎಂ.ಡಿ.ಚುನಮರಿ, ಆಡಳಿತಾಧಿಕಾರಿ ಜಿ.ಎಂ ಅಂದಾನಿ, ಓಂಪ್ರಕಾಶ್ ಅಂಗಡಿ, ಪ್ರಾಚಾರ್ಯರಾದ ಕೆ.ಬಿ.ವೆವುಂಡಿಮಠ, ಎಂ.ಎ ಪಾಟೀಲ ಇದ್ದರು.

# ಗ್ಯಾರಂಟಿ ಸಮರ್ಪಕವಾಗಿ ಅನುಷ್ಠಾನಕ್ಕೆ ಅಧಿಕಾರಿಗಳ ಸಹಕಾರ ಅಗತ್ಯ

## ಗ್ಯಾರಂಟಿ ೫ ಯೋಜನೆ ಅನುಷ್ಠಾನ ಸಮಿತಿ ತಾಲೂಕಾಧ್ಯಕ್ಷ ಗೋಪಾಲ ದಳವಾಯಿ ಸೂಚನೆ

**ಯರಗಟ್ಟಿ:** ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರುವಲ್ಲಿ ಅಧಿಕಾರಿಗಳ ಸಹಕಾರ ಅಗತ್ಯವಾಗಿದೆ. ಮಾಸಿಕ ಸಭೆಗೆ ಕೈ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಗ್ಯಾರಂಟಿ 5 ಯೋಜನೆ ಅನುಷ್ಠಾನ ಸಮಿತಿ ತಾಲೂಕಾಧ್ಯಕ್ಷ ಗೋಪಾಲ ದಳವಾಯಿ ಸೂಚನೆ ನೀಡಿದರು.

ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯಲ್ಲಿ ಮಾತನಾಡಿ, 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ನಿರಂತರ ಸಭೆ ನಡೆಸುವ ಮೂಲಕ ನ್ಯೂನತೆಗಳನ್ನು ಸರಿಪಡಿಸಿ ಎಲ್ಲ ಫಲಾನುಭವಿಗೆ ಸರ್ಕಾರದ ಯೋಜನೆ ತಲುಪಿಸುವಂತೆ ನೋಡಿಕೊಳ್ಳಬೇಕು ಎಂದರು.

ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ, 200 ಯೂನಿಟ್ ಉಚಿತ ವಿದ್ಯುತ್, ಬಿಪಿಎಲ್ ಕುಟುಂಬಕ್ಕೆ 10 ಕೆಜಿ ಅಕ್ಕಿ, ಕುಟುಂಬದ ಮಹಿಳೆಗೆ 2000 ರೂ. ಮತ್ತು ಯುವ ನಿಧಿ ಯೋಜನೆಯಡಿ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ತಾಂತ್ರಿಕ ದೋಷದಿಂದ ಕೆಲವರಿಗೆ ಸವಲತ್ತು ಪಡೆಯಲು ಸಾಧ್ಯವಾಗುತ್ತಿಲ್ಲ. ವಂಚಿತ ಫಲಾನುಭವಿಗಳ ಮಾಹಿತಿ ಸಂಗ್ರಹಿಸಿ ಸರಿಪಡಿಸುವ ಕಾರ್ಯ



ನಡೆದಿದೆ. ಪಂಚಾಯಿತಿ ಮಟ್ಟದಲ್ಲಿ ಹೆಚ್ಚಿನ ಮುತುವರ್ಜಿ ವಹಿಸಿ ಸಮಸ್ಯೆ ಪರಿಹ-ರಿಸಬೇಕು ಎಂದರು. ಯಾವುದೇ ದೋಷವಿಲ್ಲದೆ ಗ್ಯಾರಂಟಿ ಯೋಜನೆಗಳು ಜನರ ತಲುಪುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಪಪಂ ಮುಖ್ಯಾದಿಕಾರಿ ತಹಸಿಲ್ದಾರ್ ಸರ್ ಮಾತನಾಡಿ ಸರ್ಕಾರ ಜನಸಾಮಾನ್ಯರ ಅನುಕೂಲಕ್ಕಾಗಿ ಗೃಹ ಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಹಾಗೂ ಯುವನಿಧಿ ಯೋಜನೆ ಜಾರಿಗೊಳಿಸಿದೆ. ಗ್ಯಾರಂಟಿ ಯೋಜನೆಗಳು ಶೇ.100 ಪ್ರಗತಿ ಸಾಧಿಸಬೇಕು. ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸುವ ಮೂಲಕ ಫಲಾನುಭವಿಗಳಿಗೆ ಯೋಜನೆ ತಲುಪುವಂತೆ ನೋಡಿಕೊಳ್ಳಬೇಕು ಎಂದರು.

ಸಿಡಿಪಿಒ ಸುನೀತಾ ಪಾಟೀಲ ಮಾತನಾಡಿ, ಆಗಸ್ಟ್‌ವರೆಗೂಎಲ್ಲ ಫಲಾನುಭವಿಗಳಿಗೆ ಹಣ ತಲುಪಿಸಲಾಗಿದೆ. ತಾಂತ್ರಿಕ ಕಾರಣಗಳಿಂದ ಕೆಲವು ಫಲಾನುಭವಿಗಳು ವಂಚಿತರಾಗಿದ್ದು ಸಮಸ್ಯೆ ಬಗೆಹರಿಸಲಾಗುವುದು. ತಾಲೂಕಿನ ಮಹಿಳೆಯರು ತಮ್ಮ ಒಂದು ತಿಂಗಳ ಗೃಹಲಕ್ಷ್ಮಿ ಹಣ ಮಠದ ದಾಸೋಹಕ್ಕಾಗಿ ನೀಡಿದ್ದಾರೆ. ಕೆಲವರು ಮೇಕೆ ಸಾಕಾಣಿಕೆ, ಇಸ್ತ್ರಿ ಅಂಗಡಿ ಸೇರಿ ಸ್ವಯಂ ಉದ್ಯೋಗಕ್ಕಾಗಿ ವಿನಿಯೋಗಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಪಂಚ ಯೋಜನೆಗಳ ಕು-ರಿತು ಅಧಿಕಾರಿಗಳು ವಿವರಣೆ ನೀಡಿದರು. ಸಭೆಯಲ್ಲಿ ವಿದ್ಯಾರ್ಥಿ ಮತ್ತು ನೌಕರರಿಗೆ ಬಸ್ ಅನಾನುಕೂಲದಿಂದ ಆಗುತ್ತಿರುವ ತೊಂದರೆ, ಜಿಎಸ್‌ಟಿ ಗೊಂದಲ ಕುರಿತು ಒತ್ತು ನೀಡುವುದು, ಗ್ಯಾರಂಟಿ ಯೋಜನೆಗಳ ಕುರಿತು ಗ್ರಾಪಂ ಮಟ್ಟದಲ್ಲಿ ಜಾಗೃತಿ, ಸರ್ವರ್ ಸಮಸ್ಯೆ ನೆಪ ಹೇಳದೆ ನ್ಯಾಯ ಬೆಲೆ ಅಂಗಡಿಗಳು ಸರಿಯಾಗಿ ಕಾರ್ಯ ನಿರ್ವಹಿಸುವಂತೆ ಸಮಿತಿ ಸದಸ್ಯರು ಸಲಹೆ ನೀಡಿದರು.

ಸರ್ಕಾರದ ಪಂಚಗ್ಯಾರಂಟಿ ಯೋಜನೆಯನ್ನ ಸಮರ್ಪಕವಾಗಿ ಜನರಿಗೆ ತಲುಪಿಸಲು ಸಹಕ-ರಿಸಬೇಕು. ಗೃಹಜ್ಯೋತಿ ಯೋಜನೆ ಪ್ರತಿಶತ 96% ರಷ್ಟು ಪಲಾನುಭವಿಗಳಿಗೆ ತಲುಪಿದ್ದು ಹರ್ಷ ತಂದಿದೆ. ಇನ್ನುಳಿದ 4% ಜನರಿಗೆ ತಲುಪಲು ಪ್ರಯತ್ನಿಸಬೇಕೆಂದರು ಅದೇ ರೀತಿ ಗೃಹಲಕ್ಷ್ಮೀ ಯೋಜನೆ 94% ಜನರಿಗೆ ತಲುಪುತಿ-ದ್ದು ಇನ್ನುಳಿದ 6% ಆಯ್.ಟಿ/ಜಿ.ಎಸ್.ಟಿ ಅದನ್ನ ಆದಷ್ಟು ಬಗೆಹರಿಸಿ ಎಲ್ಲ ಪಲಾನುಭವಿಗೆ ತಲುಪಿಸಲು ಸೂಚಿಸಲಾಯಿತು.

ಈ ವೇಳೆ ಹೆಸ್ಕಾಂ ಎಇಇ ಎಂ. ಎಸ್. ವಿಶಾಪೂರಕರ, ಉಪ ತಹಶೀಲ್ದಾರ ಎಸ್. ಬಿ. ಕುಲಕರ್ಣಿ, ಸದಸ್ಯರಾದ ರಾಘು ಗಿಡ್ಡಮಲ್ಲಪ್ಪಗೋಳ, ಬಸವರಾಜ ಪೂಜೇರ, ವಿಕ್ರಮ್ ಇಂಗಳೆ, ಮಂಜುನಾಥ ಹಾದಿಮನಿ, ಅಶೋಕ ಗಡಮ್ಮನವರ, ಮುತ್ತಣಗೌಡರ ಆರಿಬೆಂಚಿ, ಹಣಮಂತ ಭಜಂತ್ರಿ, ನಜೀರ ನದಾಫ, ಮಹಾಂತೇಶ ಉಪ್ಪಿನ, ಫಕ್ಕೀರಪ್ಪ ಬಸಿಡೋಣಿ, ಆಯ್. ಗೌಡರ, ಲಕ್ಷ್ಮಣ ಕ-ರಿಗೋಳಿ ಬಾಗವಹಿಸಿದ್ದರು.

# ಶ್ರೇಷ್ಠ ದಾರ್ಶನಿಕ ಕವಿ ಕನಕದಾಸರ ಜಯಂತಿ-2024

ಗದಗ : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಶ್ರೇಷ್ಠ ದಾರ್ಶನಿಕ ಕವಿ ಕನಕದಾಸರ ಜಯಂತಿ–2024 ನ್ನು ನಗರದ ಹಾತಲಗೇರಿ ನಾಕಾದ ಕನಕದಾಸ ವೃತ್ತದಲ್ಲಿ ನವೆಂಬರ್ 18 ರಂದು ಬೆ 8.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್ , ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ ಅವರುಗಳು ಆಗಮಿಸುವರು.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ , ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸರ್ವರಿಗೂ ಸ್ವಾಗತ ಕೋರಿದ್ದಾರೆ.

# ಡಿ. 14 ರಂದು ರಾಷ್ಟ್ರೀಯ ಲೋಕ ಅದಾಲತ್ ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಸದಾವಕಾಶ

ಗದಗ : ಜಿಲ್ಲೆಯಲ್ಲಿ ಡಿಸೆಂಬರ್ 14 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸದಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಅವರು ತಿಳಿಸಿದರು.



ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ವಿಡಿಯೋ ಕಾನ್ಫರನ್ಸ್ ಹಾಲ್‌ದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮತ್ತು ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು ಹಾಗೂ ಪ್ರಕರಣ ರಾಜೀ ಆದಲ್ಲಿ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ ಇಲ್ಲಿಗೆ ಪ್ರಕರಣ ಮುಕ್ತಾಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾಯಕವಾಗುತ್ತದೆ ಎಂದರು.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚಿನಂತೆ ಒಟ್ಟು 14 ಬೆಂಚಗಳನ್ನು ರಚಿಸಿದ್ದು ಗದಗ ಜಿಲ್ಲೆಯಲ್ಲಿ ಒಟ್ಟು 19896 ವಿವಿಧ ಚಾಲ್ತಿ ಪ್ರಕರಣಗಳಿದ್ದು ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 2821 ಪ್ರಕರಣಗಳನ್ನು ಗುರುತಿಸಿದ್ದು ಇದರಲ್ಲಿ ಸಿವಿಲ್ ದಾವೆಗಳು ಅಂದರೆ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಅವರು ತಿಳಿಸಿದರು.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು, ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಡಿಸೆಂಬರ್ 14 ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಬಹುದಾಗಿದೆ .

ಪಕ್ಷಗಾರರು ನ್ಯಾಯಾಲಯಗಳಲ್ಲಿರುವ ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ ಎಂದರು.

ಕಳೆದ ಸೆಪ್ಟೆಂಬರ್–2024 ರಂದು ಜರುಗಿದ ಲೋಕ ಅದಾಲತ್‌ನಲ್ಲಿ 1770 ಚಾಲ್ತಿ ಪ್ರಕರಣಗಳನ್ನು ಹಾಗೂ 19898 ವ್ಯಾಜ್ಯಪೂರ್ವ ಪ್ರಕರಣಗಳನ್ನು ಸೇರಿ ಒಟ್ಟು 21668 ಪ್ರಕರಣಗಳ್ನು ರಾಜೀ ಮೂಲಕ ಇತ್ಯರ್ಥಪಡಿಸಿದೆ. ಇದರಲ್ಲಿ ವಿಶೇಷವಾಗಿ 08 ಕೌಟುಂಬಿಕ ಪ್ರಕರಣಗಳನ್ನು ಪುನಃ ಒಂದುಗೂಡಿಸಿ ಕಳುಹಿಸಲಾಗಿದೆ.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್.ಶಿವನಗೌಡ್ರ, ವಾರ್ತಾಧಿಕಾರಿ ವಸಂತ ಮಡ್ಲೂರ ಅವರು ಉಪಸ್ಥಿತರಿದ್ದರು.

## ಚೂರು–ಪಾರು

## ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ ಕಾರ್ಯಕ್ರಮ

ಕೊಪ್ಪಳ : ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿ ಅವರು ನವೆಂಬರ್ 15 ರಿಂದ 17ರವರೆಗೆ ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಸಚಿವರು ನ.15ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನಿಂದ ನಿರ್ಗಮಿಸಿ, ಮಧ್ಯಾಹ್ನ 2.30 ಗಂಟೆಗೆ ಕೊಪ್ಪಳಕ್ಕೆ ಆಗಮಿಸ, 3 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕೊಪ್ಪಳ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಬಳಿಕ

ರಾತ್ರಿ 8 ಗಂಟೆಗೆ ಕಾರಟಗಿಗೆ ತೆರಳಿ ವಾಸ್ತವ್ಯ ಹೂಡುವರು.

ನ.16ರಂದು ಬೆಳಿಗ್ಗೆ 10 ರಿಂದ ಸಂಜೆ 7 ಗಂಟೆಯವರೆಗೆ ಕಾರಟಗಿ ಹಾಗೂ ಕನಕಗಿರಿ ತಾಲ್ಲೂಕಿನ ಸಾರ್ವಜನಿಕರ ಭೇಟಿ ಮತ್ತು ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಅಂದು ಕಾರಟಗಿಯಲ್ಲಿ ವಾಸ್ತವ್ಯ ಮಾಡುವರು. ನ.17ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಕಾರಟಗಿ ಹಾಗೂ ಕನಕಗಿರಿ ತಾಲ್ಲೂಕಿನ ಸಾರ್ವಜನಿಕರ ಭೇಟಿ ಮತ್ತು ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಬೆಂಗಳೂರಿಗೆ ಪ್ರಯಾಣ ಬೆಳಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಯುಷ್ಮಾನ ಆರೋಗ್ಯ ಮಂದಿರಗಳ ರಾಜ್ಯ ಮಟ್ಟದ ಮೌಲ್ಯಮಾಪನ: ಕೊಪ್ಪಳ ಜಿಲ್ಲೆ ಉತ್ತಮ ಪ್ರಗತಿ

ಕೊಪ್ಪಳ : ಆಯುಷ್ಮಾನ ಆರೋಗ್ಯ ಮಂದಿರಗಳ ರಾಜ್ಯ ಮಟ್ಟದ ಮೌಲ್ಯಮಾಪನ ವರದಿಯಲ್ಲಿ ಕೊಪ್ಪಳ ಜಿಲ್ಲೆಯು ಉತ್ತಮ ಪ್ರಗತಿ ಸಾಧಿಸಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಟಿ.ಲಿಂಗರಾಜು ತಿಳಿಸಿದ್ದಾರೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯ ಕೇಂದ್ರ ಕಚೇರಿಯಿಂದ ಪ್ರತಿ ತಿಂಗಳು ಆಯುಷ್ಮಾನ ಆರೋಗ್ಯ ಮಂದಿರಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರಕಾರದ ವಿವಿಧ ಕಾರ್ಯಕ್ರಮಗಳಡಿಯಲ್ಲಿ ನೀಡುವ ಆರೋಗ್ಯ ಸೇವೆಗಳಾದರಿಸಿ ಪ್ರಾಥಮಿಕ ಆರೋಗ್ಯ ಕೇಂದ್ರ–ಆಯುಷ್ಮಾನ ಆರೋಗ್ಯ ಮಂದಿರಗಳಿಗೆ ಮತ್ತು ಜಿಲ್ಲಾವಾರು ರ್‍ಯಾಕಿಂಗಗಳಲ್ಲಿ ನೀಡಲಾಗುತ್ತಿದೆ.

ಅದರನ್ವಯ ಅಕ್ಟೋಬರ್–2024ರ ಮಾಹೆಯ ರ್‍ಯಾಂಕಿಂಗ್‌ನಲ್ಲಿ ಕೊಪ್ಪಳ ಜಿಲ್ಲೆಯ 6 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಟಾಪ್ 10 ಬೆಸ್ಟ್ ರ್‍ಯಾಂಕಿಂಗ್ ಪಡೆದುಕೊಂಡಿದ್ದು, ಅದರಲ್ಲಿ ಗೊಂಡಬಾಳ, ಕುಕನಪಳ್ಳಿ ಹಾಗೂ ಬೆಣಕಲ್ ಗ್ರಾಮದ ಆಯುಷ್ಮಾನ ಆರೋಗ್ಯ ಮಂದಿರಗಳು ಎಲ್ಲಾ ಆರೋಗ್ಯ ಕಾರ್ಯಕ್ರಮಗಳಲ್ಲಿ ಪ್ರತಿಶತ 100 ಗುರಿ ಸಾಧಿಸಿ ರಾಜ್ಯದಲ್ಲಿ ಮೊದಲನೆ ಎರಡನೆ ಹಾಗೂ 3ನೇ ಸ್ಥಾನ ಪಡೆದಿವೆ. ನವಲಿ ಹಾಗೂ ಹೊಲಗೇರ ಆಯುಷ್ಮಾನ ಆರೋಗ್ಯ ಮಂದಿರ ಪ್ರತಿಶತ 98 ಗುರಿ ಸಾಧಿಸಿ ರಾಜ್ಯದಲ್ಲಿ 4 ಮತ್ತು 5ನೇ ಸ್ಥಾನ ಪಡೆದಿರುತ್ತದೆ. ಚಿಕೇನಕೊಪ್ಪ ಆಯುಷ್ಮಾನ ಆರೋಗ್ಯ ಮಂದಿರ ಪ್ರತಿಶತ 97 ಗುರಿ ಸಾಧಿಸಿ 10 ಸ್ಥಾನ ಪಡೆದಿರುತ್ತದೆ.

ಅದೇ ರೀತಿ ರಾಜ್ಯದ ಜಿಲ್ಲಾವಾರು ರಾಂಕಿಂಗ್‌ನಲ್ಲಿ ಕೊಪ್ಪಳ ಜಿಲ್ಲೆಯು ಒಟ್ಟಾರೆಯಾಗಿ 3ನೇ ಸ್ಥಾನ ಪಡೆದಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಆಕ್ಷೇಪಣೆ ಸಲ್ಲಿಸಲು ನವೆಂಬರ್ 20 ಕೊನೆಯ ದಿನ

ಗದಗ : ಕೇಂದ್ರ ಸರ್ಕಾರದ ನಗರಾಭಿವೃದ್ಧಿ ಮಂತ್ರಾಲಯವು ಸ್ವಚ್ಛ ಭಾರತ್ ಅಭಿಯಾನದಡಿ ಬಯಲು ಶೌಚಮುಕ್ತ ನಗರವನ್ನು ಸೃಜಿಸುವ ಮುಖ್ಯ ಉದ್ದೇಶ ಹೊಂದಿದ್ದು, ಈಗಾಗಲೇ ಮುಳಗುಂದ ಪಟ್ಟಣವನ್ನು ಬಯಲು ಶೌಚಮುಕ್ತ ನಗರವೆಂದು ಘೋಷಿಸಲಾಗಿರುತ್ತದೆ. ಶೌಚಾಲಯ ಹೊಂದುವವರ ಜೊತೆಗೆ ಶೌಚಾಲಯ ಬಳಸುವದು ಪ್ರತಿಯೊಬ್ಬ ನಾಗರೀಕನ ಆದ್ಯ ಕರ್ತವ್ಯವಾಗಿರುತ್ತದೆ. ಈ ಸಂಬಂಧ ಮುಳಗುಂದ ಪಟ್ಟಣವನ್ನು ಎಸ್.ಬಿ.ಎಂ, ಓ.ಡಿ.ಎಫ್+ ಎಂದು ಘೋಷಿಸಲು ತಿರ್ಮಾನಿಸಲಾಗಿದೆ. ಈ ಕುರಿತು ಈಗಾಗಲೇ ವಾರ್ಡಿನ ಸ್ವ–ಸಹಾಯ ಸಂಘಗಳಿಂದ ಮುಖ್ಯ ನಾಗರಿಕರಿಂದ ಸ್ವಯಂ ಘೋಷಣೆ ಪಡೆಯಲಾಗಿರುತ್ತದೆ. ಮುಳಗುಂದ ಪಟ್ಟಣವನ್ನು ಎಸ್.ಬಿ.ಎಂ, ಓ.ಡಿ.ಎಫ್+ ಎಂದು ಘೋಷಿಸಲು ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನಿಸಲಾಗಿದೆ. ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ ನವೆಂಬರ್ 20 ರೊಳಗೆ ಸಲ್ಲಿಸಬಹುದಾಗಿದೆ ಎಂದು ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

ಗದಗ : ಎನ್.ಆರ್.ಎಲ್.ಎಂ ಸಂಜೀವಿನಿ ಯೋಜನೆಯಡಿ ರಚಿಸಲಾಗಿರುವ ಗದಗ ತಾಲೂಕ ಸಂಜೀವಿನಿ ಮಹಿಳಾ ಕಿಸಾನ್ ಪ್ರೊಡ್ಯೂಸರ್ ಕಂಪನಿ ಲಿಮಿಟೆಡ್‌ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಲೆಕ್ಕಿಗರನ್ನು ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಗರಿಷ್ಟ 35 ವರ್ಷ ವಯೋಮಿತಿ ಇದ್ದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಮಾಸಿಕ ವೇತನ ರೂ. 25,000/– ಇರುತ್ತದೆ. ಲೆಕ್ಕಿಗರ ಹುದ್ದೆಗೆ ಮಾಸಿಕ ವೇತನ 10,000/– ರೂ ಇದ್ದು ಕೆಲಸದ ಅವಧಿ 36 ತಿಂಗಳದ್ದಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ತಮ್ಮ ಬಯೋಡೇಟಾ, ಭಾವಚಿತ್ರ ಮತ್ತು ಸೂಕ್ತ ದಾಖಲಾತಿಗಳನ್ನು ಗೆಜೆಟೆಡ್ ಅಧಿಕಾರಿಗಳ ದೃಢೀಕರಣದೊಂದಿಗೆ ನವೆಂಬರ್ 21 ರೊಳಗೆ ಗದಗ ತಾಲೂಕು ಪಂಚಾಯತ್ ( ದೂ.ಸಂ: 8050195080, 9901909263,9481468428) ಇಲ್ಲಿಗೆ ಸಲ್ಲಿಸಬೇಕು. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಗದಗ ತಾಲೂಕು ಪಂಚಾಯತ್ ಕಾರ್ಯಾಲಯ ದೂರವಾಣಿ ಸಂಖ್ಯೆ : 08372–276390 ಸಂಪರ್ಕಿಸಬಹುದಾಗಿದೆ.

# ಎಲ್ಲಾ ಸಮಸ್ಯೆಗಳಿಗೆ ಶಿಕ್ಷಣ ಒಂದೇ ಪರಿಹಾರ : ಭರತ್ ಎಸ್



ಗದಗ :ವಿದ್ಯಾರ್ಥಿಗಳಿಗೆ ತಾವು ಕಲಿಯುವ ಶಾಲೆಯ ಅಭಿವೃದ್ಧಿ ಕುರಿತಿರುವ ಅಭಿಪ್ರಾಯ, ಆಕಾಂಕ್ಷೆಯನ್ನು ತಿಳಿದುಕೊಳ್ಳುವ ಉದ್ದೇಶದಿಂದ ವಿದ್ಯಾರ್ಥಿಗಳಿಗೆ ಮುಕ್ತ ವೇದಿಕೆ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ ಸಂಭಾಗಣದಲ್ಲಿ ಶುಕ್ರವಾರ ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಏರ್ಪಡಿಸಿದ ಮಕ್ಕಳ ಜಿಲ್ಲಾ ಪಂಚಾಯತ ಸಾಮಾನ್ಯ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ಶಾಲೆಯ ಅಭಿವೃದ್ಧಿ ಬಗ್ಗೆ ಇರುವ ನಿರೀಕ್ಷೆಗಳನ್ನು ಮುಕ್ತವಾಗಿ ಹಂಚಿಕೊಳ್ಳಬೇಕು. ಮಕ್ಕಳಿಗೆ ತಮ್ಮ ಶಾಲೆಯ ಅಭಿವೃದ್ಧಿ ಬಗ್ಗೆ ಪ್ರಶ್ನಿಸಲು ಸಂಪೂರ್ಣ ಅಧಿಕಾರ ಹಾಗೂ ಹಕ್ಕಿದ್ದು ಶಾಲಾ ಶಿಕ್ಷಕರಿಗೆ ಅಧಿಕಾರಿಗಳಿಗೆ ತಮ್ಮ ಬೇಡಿಕೆಗಳನ್ನು ಒತ್ತಾಯಿಸುವದನ್ನು ಬಿಡಬಾರದು. ಈ ಶಾಲಾ ಅವಧಿ ಅತ್ಯಂತ ಅಮೂಲ್ಯ ವಾದದ್ದು ಶಾಲೆಗೆ ಬೇರೆ ಬೇರೆ ಆರ್ಥಿಕ, ಸಾಮಾಜಿಕ ಹಿನ್ನಲೆಯಿಂದ ವಿದ್ಯಾರ್ಥಿಗಳು ಬರುತ್ತಾರೆ, ಈ ಎಲ್ಲಾ ಸಮಸ್ಯೆಗಳಿಗೆ ಶಿಕ್ಷಣ ಒಂದೇ ಪರಿಹಾರ ಉತ್ತಮ ಶಿಕ್ಷಣ ಪಡೆದಾಗ ಮಾತ್ರ ಸಾಮಾಜಿಕವಾಗಿ, ಆರ್ಥಿಕ ವಾಗಿ ಸರ್ವ ಸಮಾನತೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ನಮ್ಮ ದೇಶದಲ್ಲಿರುವ ಪ್ರಜಾಪ್ರಭುತ್ವ ಕುರಿತು ವಿದ್ಯಾರ್ಥಿಗಳಿಗೆ ಆಸಕ್ತಿ ಆತ್ಮವಿಶ್ವಾಸ ಬರಲಿ ಎನ್ನುವ ಉದ್ದೇಶದಿಂದ ಈ ಸಭೆಯಲ್ಲಿ ವಿದ್ಯಾರ್ಥಿಗಳನ್ನೇ ಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನಾಗಿ ಆಯ್ಕೆಮಾಡಲಾಗಿದೆ. ಮಕ್ಕಳಿಗಾಗಿಯೇ ಇರುವ ಹಕ್ಕುಗಳನ್ನು ಎಲ್ಲರು ತಿಳಿದುಕೊಳ್ಳಬೇಕು, ತಮ್ಮ ಸುತ್ತ ಮುತ್ತ ಬಾಲ್ಯ ವಿವಾಹ, ಭಿಕ್ಷಾಟನೆ, ಮಕ್ಕಳ ಕಳ್ಳ ಸಾಗಾಟ ಇಂತಹ ಘಟನೆಗಳು ಕಂಡು ಬಂದರೆ ಅದರ ವಿರುದ್ಧ ಧ್ವನಿ ಎತ್ತಿ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್ ಎಸ್ ಬುರುಡಿ ಮಾತನಾಡಿ, ಮಕ್ಕಳು ತಮ್ಮ ಹಕ್ಕುಗಳನ್ನು ಅರಿಯಬೇಕು, ಇಲಾಖೆಯ ಸಂಪೂರ್ಣ ಸವಲತ್ತುಗಳನ್ನು ಬಳಸಿಕೊಂಡು ವಿದ್ಯಾರ್ಥಿಗಳು ಚೆನ್ನಾಗಿ ವಿದ್ಯಾಭ್ಯಾಸ ಕಡೆಗೆ ಗಮನ ಹರಿಸಬೇಕು, ಹಿರಿಯರಿಗೆ ಗೌರವ ಕೊಡಬೇಕು, ಉತ್ತಮ ಸ್ನೇಹಿತರ ಬಳಗವನ್ನು ಹೊಂದಿ, ಒಳ್ಳೆಯ ವಿಚಾರಗಳನ್ನು ಚರ್ಚೆಮಾಡಿ ಶಿಸ್ತಿನಿಂದ ಓದುವ ವಾತಾವರಣ ನಿರ್ಮಿಸಬೇಕು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ ಮಾತನಾಡಿ ಈ ಸಭೆಯೂ ವಿಶೇಷವಾಗಿದ್ದು, ಬಾಲ್ಯ ವಿವಾಹ, ಪೋಕೊ ಖಾಯ್ದೆ ಸೇರಿದಂತೆ ವಿವಿಧ ಯೋಜನೆಗಳ ಕುರಿತು ಶಾಲಾ ಹಂತದಲ್ಲಿ ಅರಿವು ಮೂಡಿಸುವ ಕಾರ್ಯಗಾರ ಏರ್ಪಡಿಸಲಾಗುತ್ತದೆ ಹಾಗೂ ಯಾವುದೇ ತೊಂದರೆ ಇದ್ದಲ್ಲಿ ಮಕ್ಕಳ ಸಹಾಯವಾಣಿ 1098 ಗೆ ಕರೆ ಮಾಡಲು ತಿಳಿಸಿದರು.

ಮಕ್ಕಳ ಜಿಲ್ಲಾ ಪಂಚಾಯತ ಸಾಮಾನ್ಯ ಸಭೆಯಲ್ಲಿ ಕು.ಮೇಘಾ ಪುರದ ಅಧ್ಯಕ್ಷೀಯ ,ಕು.ನೇತ್ರಾ ಕುಂಬಾರ ಉಪಾಧ್ಯಕ್ಷೆ ಸ್ಥಾನವನ್ನು ಅಲಂಕರಿಸಿ, ವಿವಿಧ ತಾಲೂಕಿನಿಂದ ಬಂದ ವಿದ್ಯಾರ್ಥಿಗಳು ಉತ್ಸುಕತೆಯಿಂದ ಅಪಾರ ಸಮಸ್ಯೆ, ಪರಿಹಾರ ಕ್ರಮ ವಿಷಯಗಳ ಕುರಿತು ವಿಷಯ ಮಂಡಿಸಿದರು. ಮಕ್ಕಳ ಶಿಕ್ಷಣ ಗುಣಮಟ್ಟ ಸುದಾರಣೆಗೆ ಅನುಸರಿಸಬಹುದಾದ ಕ್ರಮಗಳೆಡೆಗೆ ಆರೋಗ್ಯಕರ ಸಂವಾದ ಮತ್ತು ಚರ್ಚೆ ಜರುಗಿತು. ಸಂವಾದ ಮತ್ತು ಚರ್ಚೆಯಲ್ಲಿ ಕೀರ್ತಿ ಕುಲಗೋಡ ಪ್ರಥಮ , ನೇತ್ರಾ ಕುಂಬಾರ ದ್ವಿತೀಯ, ಪೂಜಾ ಗಂಗಾವತಿ ತೃತೀಯ, ಮೇಘಾ ಪುರಸ ನಾಲ್ಕನೇ ಸ್ಥಾನವನ್ನು ಪಡೆದುಕೊಂಡರು, ವಿಜೇತರಿಗೆ ಜಿ.ಪಂ ಸಿಇಓ ಪ್ರಮಾಣ ಪತ್ರ ನೀಡಿ ಅಭಿನಂದಿಸಿದರು. ಸಭೆಯಲ್ಲಿ ಡಯಟ್ ಪ್ರಾಚಾರ್ಯ ಜಿ.ಎಲ್, ಬಾರಟಕ್ಕಿ, ಶಾಲಾ ಶಿಕ್ಷಣ ಇಲಾಖೆಯ ಶಿಕ್ಷಕರು, ವಿದ್ಯಾರ್ಥಿಗಳು, ಅಧಿಕಾರಿಗಳು ಹಾಜರಿದ್ದರು. ಕಾರ್ಯಕ್ರವನ್ನು ಎಂ.ಎಚ್.ಕಂಬಳಿ ಸ್ವಾಗತಿಸಿದರು, ಶಿವಕುಮಾರ ಕುರಿ ವಂದಿಸಿದರು, ಎಂ.ಎ. ಎರಗುಡಿ ನಿರೂಪಿಸಿದರು.

## ವಿಶ್ವ ಮಧುಮೇಹ ದಿನಾಚರಣೆ ಕಾರ್ಯಕ್ರಮ

# ಮಧುಮೇಹ ಖಾಯಿಲೆ ತಡೆಗಟ್ಟುವಲ್ಲಿ ವೈದ್ಯಾಧಿಕಾರಿಗಳ ಪಾತ್ರ ಬಹು ಮುಖ್ಯ: ಡಾ.ಲಿಂಗರಾಜು.ಟಿ

ಕೊಪ್ಪಳ : ಮಧುಮೇಹ ಖಾಯಿಲೆಯ ನಿಯಂತ್ರಣ ಮತ್ತು ತಡೆಗಟ್ಟುವಲ್ಲಿ ವೈದ್ಯಾಧಿಕಾರಿಗಳ ಹಾಗೂ ಸಮುದಾಯ ಆರೋಗ್ಯ ಅಧಿಕಾರಿಗಳ ಪಾತ್ರ ಬಹು ಮುಖ್ಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಲಿಂಗರಾಜು.ಟಿ ಅವರು ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ ಹಾಗೂ ಎನ್.ಸಿ.ಡಿ. ಕೋಶ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಪಂಚಾಯತ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಶುಕ್ರವಾರದಂದು ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ವಿಶ್ವ ಮಧುಮೇಹ ದಿನಾಚರಣೆಯ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ವರ್ಷ ನವೆಂಬರ್ 14 ರಂದು ವಿಶ್ವ ಮಧುಮೇಹ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ ಇದರ ಉದ್ದೇಶ ಮಧುಮೇಹ ಖಾಯಿಲೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ ಚಿಕಿತ್ಸೆ ನೀಡುವುದಾಗಿದೆ. ಜೀವನಶೈಲಿಯಿಂದ ಬರುವ ರೋಗಗಳಲ್ಲಿ ಮಧುಮೇಹ ಕೂಡ ಒಂದಾಗಿದ್ದು, ಜೀವನಶೈಲಿಯನ್ನು ಬದಲಾವಣೆ ಮಾಡಿ ಪೌಷ್ಠಿಕ ಆಹಾರ ಸೇವನೆ, ದೈಹಿಕ ಚಟುವಟಿಕೆಯಿಂದ ಇರುವುದು. 30 ವರ್ಷ ಮೇಲ್ಪಟ್ಟ ಎಲ್ಲಾ ಸಾರ್ವಜನಿಕರಿಗೆ ಪ್ರತಿ ವರ್ಷಕ್ಕೆ ಒಂದು ಬಾರಿ ರಕ್ತ ಪರೀಕ್ಷೆ ಮಾಡಿಸುವಂತೆ ಅರಿವು ಮೂಡಿಸುವುದು ಹಾಗೂ ಪತ್ತೆಯಾದ ಮಧುಮೇಹ ರೋಗಿಗಳಿಗೆ ಚಿಕಿತ್ಸೆ ನೀಡುವುದು ಎಲ್ಲಾ ವೈದ್ಯಾಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ನಂದಕುಮಾರ್ ಹೆಚ್. ಪ್ರಸ್ತಾವಿಕವಾಗಿ ಮಾತನಾಡಿ ಮಧುಮೇಹ ಖಾಯಿಲೆ ಕುರಿತು ಮಧುಮೇಹ ಮತ್ತು ಯೋಗಕ್ಷೇಮ ಎಂಬ ಘೋಷ ವಾಕ್ಯದೊಂದಿಗೆ ಈ ವರ್ಷ ಕಾರ್ಯಕ್ರಮವನ್ನು ಆಚರಿಸಲಾಗುತ್ತಿದೆ. ಜಿಲ್ಲೆಯ ಎಲ್ಲಾ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಹಾಗೂ ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ ಕಾರ್ಯಕ್ರಮದ ಅಂಗವಾಗಿ ಜಾಗೃತಿ ಕಾರ್ಯಕ್ರಮ ಮತ್ತು ತಪಾಸಣಾ ಶಿಬಿರ ಹಮ್ಮಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಮಧುಮೇಹಿಗಳು ಸರಿಯಾಗಿ ಚಿಕಿತ್ಸೆ ಪಡೆಯುವುದರ ಮೂಲಕ ಖಾಯಿಲೆಯನ್ನು ದೂರವಿಡಬಹುದು. ಜೀವನ ಶೈಲಿ ರೋಗಗಳು ಇಂದಿನ ವೈದ್ಯಲೋಕಕ್ಕೆ ಸವಾಲಾಗಿವೆ ಮನುಷ್ಯ ಆಧುನಿಕನಾದಂತೆ ಆತನ ಮಾನಸಿಕ ಹಾಗೂ ದೈಹಿಕ ಸ್ವಾಸ್ಥ್ಯಕ್ಕೆ ಹೆಚ್ಚಿನ ತೊಂದರೆಗಳು ಕಾಣಿಸಿಕೊಂಡು ಆಹಾರ ಕ್ರಮದಲ್ಲಿನ ಬದಲಾವಣೆ, ದೈಹಿಕ ಚಟುವಟಿಕೆ ಇಲ್ಲದ ಜೀವನ ಹಾಗೆ ಮಾನಸಿಕ ಒತ್ತಡದಿಂದಾಗಿ ಅನೇಕ ರೋಗಗಳು ಶಾರೀರಿಕ ಹಾಗೂ ಮಾನಸಿಕವಾಗಿ ದಾಳಿ ಮಾಡುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ರವೀಂದ್ರನಾಥ ಎಮ್.ಹೆಚ್, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ.ಶಶಿಧರ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ.ಪ್ರಕಾಶ ಹೆಚ್., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ವೆಂಕಟೇಶ, ಕೊಪ್ಪಳ ವೈದ್ಯಕೀಯ ಮಹಾವಿದ್ಯಾಲಯದ ಮೆಡಿಸಿನ್ ಪ್ರೊಫೆಸರ್ ಡಾ.ಶಿವಕುಮಾರ ಸೇರಿದಂತೆ ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು, ವೈದ್ಯಾಧಿಕಾರಿಗಳು, ಸಮುದಾಯ ಆರೋಗ್ಯ ಅಧಿಕಾರಿಗಳು, ಇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಜಿಲ್ಲಾ ಕಾರಗೃಹದಲ್ಲಿ ಜಾಗೃತಿ ಕಾರ್ಯಕ್ರಮ: ನವೆಂಬರ್ 14 ರಂದು ಜಿಲ್ಲಾ ಕಾರಗೃಹದಲ್ಲಿ ವಿಶ್ವ ಮಧುಮೇಹ ದಿನಾಚರಣೆಯ ಅಂಗವಾಗಿ ಜಾಗೃತಿ ಕಾರ್ಯಕ್ರಮ ಮತ್ತು ಆರೋಗ್ಯ ಶಿಬಿರವನ್ನು ನಡೆಸಿ ನ್ಯೂನತೆಯುಳ್ಳವರಿಗೆ ಚಿಕಿತ್ಸೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಪರ್ವತಗೌಡ ದಂತ ವೈದ್ಯಾಧಿಕಾರಿ ಡಾ.ಮಾರುತಿ, ಜಿಲ್ಲಾ ಎನ್.ಸಿ.ಡಿ. ಕಾರ್ಯಕ್ರಮ ಸಂಯೋಜಕಿ ಡಾ.ಜಯಶ್ರೀ ಕಮತೆ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ, ಜಿಲ್ಲಾ ಕಾರಾಗೃಹದ ಅಧೀಕ್ಷಕ ಶ್ರೀ ರಾಮು ಸೇರಿದಂತೆ ಇತರ ಸಿಬ್ಬಂದಿಗಳು ಭಾಗವಹಿಸಿದ್ದರು.

# ಗ್ರಾಮ ಪಂಚಾಯತ ಉಪಚುನಾವಣೆ: ಮದ್ಯ ಮಾರಾಟ ನಿಷೇಧ

ಕಾರವಾರ – ಗ್ರಾಮ ಪಂಚಾಯತ ಉಪ ಚುನಾವಣೆ ನಿಮಿತ್ತ ಉತ್ತರ ಕನ್ನಡ ಜಿಲ್ಲೆಯಲ್ಲಿ ನೀತಿ ಸಂಹಿತೆ ಜಾರಿಯಲ್ಲಿರುವ, ಕಾರವಾರ ತಾಲೂಕಿನ ಚಿತ್ತಾಕುಲಾ, ಅಂಕೋಲಾ ತಾಲೂಕಿನ ಸಗಡಗೇರಿ, ಕುಮಟಾ ತಾಲೂಕಿನ ಹನೇಹಳ್ಳಿ, ಬರ್ಗಿ, ಹೊನ್ನಾವರ ತಾಲೂಕಿನ ಮಾಗೋಡ, ಭಟ್ಕಳ ತಾಲೂಕಿನ ಶಿರಾಲಿ, ಶಿರಸಿ ತಾಲೂಕಿನ ಬಿಸಲಕೊಪ್ಪ, ಹುತ್ತಗಾರ, ಸಿದ್ಧಾಪುರ ತಾಲೂಕಿನ ದೊಡ್ಮನೆ, ಮುಂಡಗೋಡ ತಾಲೂಕಿನ ಹುನಗುಂದ, ಹಳಿಯಾಳ ತಾಲೂಕಿನ ಬೆಳವಟಗಿ, ಜನಗಾ, ಅರ್ಲವಾಡ, ದಾಂಡೇಲಿ ತಾಲೂಕಿನ ಅಂಬಿಕಾನಗರ ಮತ್ತು ಜೋಯಿಡಾ ತಾಲೂಕಿನ ಕಾತೇಲಿ (ಕುಂಬಾರವಾಡಾ), ನೇದರ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ವ್ಯಾಪ್ತಿಯಲ್ಲಿ ನ.21 ರಂದು ಸಂಜೆ 5 ಗಂಟೆಯಿಂದ ನ.23 ರ ಸಂಜೆ 5 ಗಂಟೆಯವರೆಗೆ ಎಲ್ಲಾ ರೀತಿಯ ಮದ್ಯ ಮಾರಾಟ, ಸಾಗಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಕೆ.ಲಕ್ಷ್ಮೀ ಪ್ರಿಯಾ ಆದೇಶಿಸಿದ್ದಾರೆ.

# ರೈತ ಬಾಂಧವರಿಗೆ ಸಲಹೆ

ಗದಗ : ಹಿಂಗಾರು ಹಂಗಾಮಿನಲ್ಲಿ ಕಡಲೆ ಬೆಳೆಯಲ್ಲಿ ಪ್ರಮುಖವಾಗಿ 10 ಜಿಲ್ಲೆಗಳು ಹೆಚ್ಚಿನ ವಿಸ್ತೀರ್ಣ ಹೊಂದಿದ್ದು, ರಾಜ್ಯದ ಸರಾಸರಿ ಇಳುವರಿ(2017–18 ರಿಂದ 2021–22) 634ಕೆ.ಜಿ/ಹೆ ಇರುತ್ತದೆ. ಇದಕ್ಕೆ ಹೋಲಿಸಿದಾಗ ಗದಗ ಜಿಲ್ಲೆಯ ಇಳುವರಿಯು 159 ಕೆ.ಜಿ./ಹೆ. ಆಗಿದ್ದು, ರಾಜ್ಯದ ಸರಾಸರಿಯ ಕೇವಲ ಶೇ.25 ಮಾತ್ರ ಆಗಿರುತ್ತದೆ. ಹೆಚ್ಚಿನ ವಿಸ್ತೀರ್ಣ ಮತ್ತು ಅತಿ ಕಡಿಮೆ ಇಳುವರಿ ಇರುವದರಿಂದ ರೈತ ಬಾಂಧವರು ಜಿಲ್ಲೆಯಲ್ಲಿ ಅಧಿಕ ಇಳುವರಿಗಾಗಿ ಈ ಕೆಳಗಿನ ಸುಧಾರಿತ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳಲು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಡಲೆ ಬೆಳೆಯಲ್ಲಿ ಅಧಿಕ ಇಳುವರಿಗಾಗಿ ಸುಧಾರಿತ ತಾಂತ್ರಿಕತೆಗಳು : ಸುಧಾರಿತ, ರೋಗ ನಿರೋಧಕ, ಕಡಿಮೆ ಅವಧಿಯ ಹಾಗೂ ಒತ್ತಡ ಸಹಿಷ್ಣತೆ ತಳಿಯ ಬಿತ್ತನೆ ಬೀಜಗಳನ್ನು ಉಪಯೋಗಿಸುವುದು. ಯಾಂತ್ರೀಕೃತ ಕೂರಿಗೆ ಬಿತ್ತನೆ/ಊರುಗಾಳು ಪದ್ಧತಿ ಅನ್ವಯ ಸರಿಯಾದ ಬೆಳೆ ಅಂತರ ಕಾಪಾಡುವುದು (30/45 ಸೆಂ.ಮೀ.?ಠ 10ಸೆಂ.ಮೀ.) ಬಿತ್ತನೆಯ ಸಮಯದಲ್ಲಿ ಎಕರೆಗೆ 8 ಕಿ.ಗ್ರಾಂ. ಮೈಕೋರೈಜಾ ಜೈವಿಕ ಗೊಬ್ಬರವನ್ನು 200 ಕಿ.ಗ್ರಾಂ. ಎರೆಹುಳು ಗೊಬ್ಬರದ ಜೊತೆಗೆ ಮಿಶ್ರಣ ಮಾಡಿ ಬಿತ್ತನೆಯ ಸಾಲಿನಲ್ಲಿ ಮಣ್ಣಿನಲ್ಲಿ ಹಾಕಿ ಬೆರೆಸಬೇಕು. ಬಿತ್ತನೆ ಮಾಡುವಾಗ ಶಿಲೀಂಧ್ರನಾಶಕಗಳಿಂದ ಹಾಗೂ ಜೈವಿಕ ಗೊಬ್ಬರಗಳಾದ ಟ್ರೈಕೊಡರ್ಮಾ, ಪಿ.ಎಸ್.ಬಿ., ಮತ್ತು ರೈಜೋಬಿಯಂಗಳಿಂದ ಬೀಜೋಪಚಾರ ಕೈಗೊಳ್ಳಬೇಕು.

ಕಡಲೆ ಬೆಳೆಯ ಬೆಳವಣಿಗೆ ಹಂತದಲ್ಲಿ(ಬೆಳೆ ಹಂತ:35–40 ದಿನಗಳಲ್ಲಿ) ತಪ್ಪದೇ ಕುಡಿ ಚಿವುಟುವುದು. ಸಮಗ್ರ ಪೋಷಕಾಂಶಗಳ ಬಳಕೆಯೊಂದಿಗೆ, ಸುಧಾರಿತ ಬೇಸಾಯ ಕ್ರಮಗಳ ಪ್ರಕಾರ ಸಾವಯವ ಗೊಬ್ಬರಗಳನ್ನು ಬಳಸುವುದು, ರಸಗೊಬ್ಬರಗಳನ್ನು ಬಳಸುವುದು, ನ್ಯಾನೊ ಯೂರಿಯಾ ಇತ್ಯಾದಿಗಳನ್ನು ಬಳಸುವುದು. ದ್ವಿದಳ ಧಾನ್ಯ ಬೆಳೆ ಅವಧಿಯಲ್ಲಿ ಸೂಕ್ಷ?ಮ ಪೋಷಕಾಂಶಗಳನ್ನು ಒಳಗೊಂಡಂತೆ ಸಮಗ್ರ ಪೋಷಕಾಂಶ ನಿರ್ವಹಣೆ ಕೈಗೊಳ್ಳುವುದು. ಬೆಳೆಯಲ್ಲಿ ತೇವಾಂಶ ಕಾಪಾಡುವುದು ಮತ್ತು ಬೆಳೆಯ ಸಂದಿಗ್ಧ ಹಂತಗಳಲ್ಲಿ ನೀರು ಕೊಡಬೇಕು. ಬೇವಿನ ಬೀಜದ ಕಷಾಯ ಸಿಂಪರಣೆ, ಲಿಂಗಾಕರ್ಷಕ ಬಲೆಗಳ ಉಪಯೋಗ ಒಳಗೊಂಡಂತೆ ಸಮಗ್ರ ಪೀಡೆ ನಿರ್ವಹಣಾ ಕ್ರಮಗಳನ್ನು ಅನುಸರಿಸುವುದು.

### ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪಿ.ಜಿ ಮತ್ತು ಪಿ.ಹೆಚ್.ಡಿ ವಿದ್ಯಾರ್ಥಿಗಳಿಗೆ ವಿದೇಶಿ ವ್ಯಾಸಂಗ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ : 2024–25 ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿ.ಹೆಚ್.ಡಿ ಅಧ್ಯಯನ ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ–1, 2–ಎ, 3–ಎ ಹಾಗೂ 3–ಬಿ ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ನೀಡುವ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಡಿಸೆಂಬರ 05, 2024 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8050770004 ಗೆ ಅಥವಾ Bcwd.karnataka.gov.in/gmail.com ವೆಬ್‌ಸೈಟ್‌ಗೆ ಭೇಟಿ ನೀಡಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಅರ್ಜಿ ಆಹ್ವಾನ

ಧಾರವಾಡ : ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಸಿ.ಇ.ಟಿ., ಎನ್.ಇ.ಇ.ಟಿ ಮೂಲಕ ಪ್ರವೇಶ ಪರಿಕ್ಷೆಯಲ್ಲಿ ಉತ್ತೀರ್ಣರಾಗಿ ಇಂಜಿನಿಯರಿಂಗ್, ವೈದ್ಯಕೀಯ, ದಂತ ವೈದ್ಯಕೀಯ ಇತ್ಯಾದಿ ವೃತ್ತಿಪರ ಪದವಿ ಹಾಗೂ ಸ್ನಾತಕೋತ್ತರ ಪದವಿ, ವೃತ್ತಿಪರ ಪಿ.ಎಚ್.ಡಿ ಕೋರ್ಸ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಡಿಸೆಂಬರ್ 15, 2024 ರೊಳಗಾಗಿ kacdc.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2957829 ಅಥವಾ 9448451111 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಆರ್ಯ ವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀನುಗಾರರಿಗೆ ಕಿಸಾನ ಕ್ರೆಡಿಟ್ ಕಾರ್ಡ್ ವಿತರಣೆ: ಅರ್ಜಿ ಆಹ್ವಾನ

ಕೊಪ್ಪಳ : ಮೀನುಗಾರಿಕೆ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಮೀನು ಕೃಷಿಕರಿಗೆ ಕಿಸಾನ ಕ್ರೆಡಿಟ್ ಕಾರ್ಡ್ ವಿತರಣೆ ಹಾಗೂ ಜನತಾ ಸಾಮೂಹಿಕ ಅಪಘಾತ ವಿಮಾ ಯೋಜನೆಯಡಿ ನೊಂದಣಿಗೆ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕೊಪ್ಪಳ, ಕುಕನೂರು ಹಾಗೂ ಯಲಬುರ್ಗಾ ತಾಲ್ಲೂಕುಗಳ ಮೀನುಗಾರರ ಸಹಕಾರ ಸಂಘಗಳ ಸದಸ್ಯರಿಂದ ಹಾಗೂ ವೃತ್ತಿಪರ ಮೀನುಗಾರರಿಂದ ಮೀನು ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುಕೂಲವಾಗುವಂತೆ ಬ್ಯಾಂಕುಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಮೀನು ಕೃಷಿಕರಿಗೆ ಕಿಸಾನ ಕ್ರೆಡಿಟ್ ಕಾರ್ಡ್‌ಗಳನ್ನು ವಿತರಿಸಲಾಗುವುದು ಹಾಗೂ ಜನತಾ ಸಾಮೂಹಿಕ ಅಪಘಾತ ವಿಮಾ ಯೋಜನೆಯಡಿ ಮೀನುಗಾರರನ್ನು ನೊಂದಾಯಿಸಿಕೊಳ್ಳಲಾಗುತ್ತಿದ್ದು ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ನವೆಂಬರ್ 25 ಕೊನೆಯ ದಿನವಾಗಿದ್ದು, ಅರ್ಜಿಗಳನ್ನು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಕೊಪ್ಪಳ ಇವರಿಗೆ ಸಲ್ಲಿಸಬೇಕು. ಅರ್ಜಿ ವಿಧಾನ, ಸಲ್ಲಿಸಬೇಕಾದ ದಾಖಲೆಗಳು ಸೇರಿದಂತೆ ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಕೊಪ್ಪಳ ಮೀನುಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂತಶ್ರೇಷ್ಠ ಭಕ್ತ ಕನಕದಾಸ



ಕರ್ನಾಟಕವು ವೈವಿಧ್ಯತೆಗಳಿಂದ ಕೂಡಿದ ನಾಡಾಗಿದ್ದು ಇಲ್ಲಿ ವಿವಿಧತೆಯಲ್ಲಿ ಏಕತೆಯನ್ನು ಕಾಣುತ್ತೇವೆ. ಹಲವಾರು ಸಾಮ್ರಾಜ್ಯಗಳು, ರಾಜವಂಶಸ್ಥರು, ಸಂತ ಶರಣರು ಮತ್ತು ದಾರ್ಶನಿಕ-ರಿಗೆ ಜನ್ಮ ನೀಡಿದ ಪುಣ್ಯ ಭೂಮಿ ಇದಾಗಿದೆ. ಸಾಹಿತ್ಯ ಸಂಸ್ಕೃತಿ ಮತ್ತು ಪರಂಪರೆಯಲ್ಲಿಯೂ ತನ್ನದೇಯಾದ ರೀತಿಯಲ್ಲಿ ಹೆಸರು ಮಾಡಿದ ನಾಡು ನಮ್ಮದಾಗಿದೆ. ಸಮಾಜ ಸುಧಾರಣೆಗಾಗಿ ಈ ನಾಡಿನಲ್ಲಿ ಹಲವಾರು ಸಂತ ಶರಣರು ಶ್ರಮಿಸಿದ್ದಾರೆ. ಅಂತಹ ಮಹನೀಯರಲ್ಲಿ ಕನಕದಾಸರು ಒಬ್ಬರಾಗಿದ್ದಾರೆ. ದಾಸ ಸಾಹಿತ್ಯದಲ್ಲಿ ಶ್ರೇಷ್ಠ ಹರಿದಾಸರಾಗಿ ತಮ್ಮ ಕೀರ್ತನೆಗಳ ಮೂಲಕ ಅಂದಿನ ಸಾಮಾಜಿಕ ಅಂಕುಡೊಂಕುಗಳನ್ನು ತಿದ್ದಿದ ಒಬ್ಬ ಮಹಾನ ಸಂತರಾಗಿದ್ದಾರೆ.

ಕನಕದಾಸರ ತಂದೆಯವರು ಅಂದಿನ ವಿಜಯನಗರ ಸಾಮ್ರಾಜ್ಯದ ಆಡಳಿತಕ್ಕೆ ಒಳಪಟ್ಟ ಬಾಡ ಪ್ರದೇಶ 78 ಗ್ರಾಮಗಳ ಹೋಬಳಿ. ಈ ಪ್ರದೇಶ ಈಗ ಹಾವೇರಿ ಜಿಲ್ಲೆಯ ಶಿಗ್ಗಾಂವಿ ಮತ್ತು ಬಂಕಾಪುರ ಪ್ರದೇಶದಲ್ಲಿದೆ. ಇದರ ನಾಡಗೌಡಿಕೆ ಮತ್ತು ದಂಡನಾಯಕ (ಸೈನ್ಯದ ದಳಪತಿ) ಅಧಿಕಾರ ಬೀರಪ್ಪನಿಗೆ ಇತ್ತು. ಬಚ್ಚಮ್ಮ ಇವರ ಧರ್ಮಪತ್ನಿಯಾಗಿದ್ದರು. ಈ ದಂಪತಿಗೆ ಹಲವಾರು ವರ್ಷಗಳವರೆಗೆ ಸಂತಾನ ಭಾಗ್ಯ ಇರದ ಕಾರಣ ಇವರು ತಿರುಪತಿ ತಿಮ್ಮಪ್ಪನ ದರ್ಶನ ಪಡೆದ ನಂತರ ಅವನ ವರಪ್ರಸಾದದಿಂದ ಜನಿಸಿದ ಮಗುವಿಗೆ ತಿಮ್ಮಪ್ಪನೆಂದು ನಾಮಕರಣ ಮಾಡಿದ್ದರು.

ಬೀರಪ್ಪ ತನ್ನ ಮಗನ ವಿದ್ಯಾಭ್ಯಾಸಕ್ಕೆ ಸಕಲ ಸೌಕರ್ಯಗಳನ್ನು ಒದಗಿಸಿ ಕತ್ತಿವರಸೆ, ಕುಸ್ತಿ, ಅಶ್ವವಿದ್ಯೆ, ಬೇಟೆಯಾಡುವುದು ಹೀಗೆ ಹಲವಾರು ಯುದ್ಧ ಕೌಶಲ್ಯಗಳ ತರಬೇತಿಯನ್ನು ಕಲಿಸಿದ್ದನು. ಆಕಸ್ಮಿಕವಾಗಿ ನಡೆದ ಯುದ್ಧದಲ್ಲಿ ಬೀರಪ್ಪನು ಮೃತನಾದಾಗ ತನ್ನ ಚಿಕ್ಕವಯಸ್ಸಿನಲ್ಲಿಯೆ ದಂಡನಾಯಕನ ಅಧಿಕಾರವನ್ನು ತಿಮ್ಮಪ್ಪ ವಹಿಸಿ ಕೊಳ್ಳಬೇಕಾಯಿತು.

ಒಮ್ಮೆ ತಿಮ್ಮಪ್ಪನ ಕನಸಿನಲ್ಲಿ ಆದಿಕೇಶವನು ಬಂದು ಹೇಳಿದ ವಾಣಿಯಂತೆ ತನ್ನ ಊರಿನ ನಿರ್ಲಕ್ಷಿತ ಸ್ಥಳವೊಂದರಲ್ಲಿ ಮೂಲೆಗುಂಪಾಗಿ ಬಿದ್ದಿದ್ದ ಆದಿಕೇಶವನ ವಿಗ್ರಹವನ್ನು ಕಾಗಿನೆಲೆಯಲ್ಲಿ ಪ್ರತಿಷ್ಠಾಪಿಸಿದನು. ಇದರಿಂದ ತಿಮ್ಮಪ್ಪನ ಕೀರ್ತಿ ಮತ್ತಷ್ಟು ಹೆಚ್ಚಾಯಿತು. ಇದನ್ನು ತಿಳಿದ ಅಂದಿನ ವಿಜಯನಗರ ಸಾಮ್ರಾಜ್ಯದ ಅರಸ ವೀರನರಸಿಂಹನು ತಿಮ್ಮಪ್ಪನಿಗೆ ಬಂಕಾಪುರ ಪ್ರಾಂತ್ಯಕ್ಕೆ ಡಣ್ಣಾಯಕ( ಸೈನ್ಯದ ದಳಪತಿ)ನ್ನಾಗಿ ನೇಮಿಸಿದ್ದನು.

ಒಮ್ಮೆ ಭೂಮಿ ಅಗೆಯುತ್ತಿದ್ದಾಗ ತಿಮ್ಮಪ್ಪನಿಗೆ ನಿಧಿ (ಕನಕ) ಸಿಗುತ್ತದೆ. ಅದನ್ನು ದೀನ, ದುರ್ಬಲ ಮತ್ತು ಬಡ ಜನ-ರಿಗೆ ಹಂಚಿ ಜನಾನುರಾಗಿಯಾಗಿದ್ದರಿಂದ ತಿಮ್ಮಪ್ಪ ಮುಂದೆ ಕನಕನಾಯಕನೆಂದು ಪ್ರಚುರಗೊಂಡನೆಂದು ಹೇಳಲಾಗುತ್ತದೆ. ಕಾಗಿನೆಲೆಯಲ್ಲಿ ಪ್ರತಿಷ್ಠಾಪಿತವಾದ ಆದಿಕೇಶವನ ಇಚ್ಛೆಯಂತೆ ದಾಸನಾಗಲು ಕನಕನು ಹಿಂಜರಿಯುತ್ತಿದ್ದನು. ಆದ-ರೆ ಕನಕನು ಕದನವೊಂದರಲ್ಲಿ ಶತೃವಿನ ಹೊಡೆತಕ್ಕೆ ಸಿಕ್ಕು ಅರೆಜೀವವಾಗಿ ಬಿದ್ದ ಸಮಯದಲ್ಲಿ ಆದಿಕೇಶವನ ದೈವವಾಣಿಯಾಗಿ ನನ್ನ ಬಳಿ ಬಾ ಎಂದಾಗ ಆ ಆದ-ೇಶವನ್ನು ಸ್ವೀಕರಿಸಿ, ದಾಸನಾಗಲು ಸಮ್ಮತಿಸಿ ಮುಂದೆ ಕನಕನಾಯಕ ಕನಕದಾಸನಾದನು.

ವಿಜಯನಗರ ಸಾಮ್ರಾಜ್ಯದಲ್ಲಿ ಶ್ರೀ ಕೃಷ್ಣದೇವರಾಯನ ಗುರುಗಳಾಗಿದ್ದ ವ್ಯಾಸರಾಯರ ಮಹಿಮೆಯನ್ನು ಕೇಳಿದ್ದ ಕನಕದಾಸರು ಅವರ ಶಿಷ್ಯತ್ವವನ್ನು ಪಡೆದು ಗುರುಮಂತ್ರವನ್ನು ಸ್ವೀಕ-ರಿಸಿದ್ದರು. ತಿರುಪತಿಯಿಂದ ಉಡ-ುಪಿಗೆ ಹೋದ ಕನಕದಾಸರು ಅಲ್ಲಿ ಅವರಿಗೆ ಕೆಳವರ್ಗದವನೆಂಬ ಕಾರಣಕ್ಕಾಗಿ ಶ್ರೀಕೃಷ್ಣನ ದೇವಾಲಯ ಪ್ರವೇಶವನ್ನು ನಿರ್ಬಂಧಿಸಿದಾಗ ಗರ್ಭ ಗೃಹದ ಹಿಂಬದಿಗೆ ಬಂದು ಕೃಷ್ಣನ ದರ್ಶನಕ್ಕಾಗಿ ಪ್ರಾರ್ಥಿಸಿದಾಗ ಅವರ ಭಕ್ತಿಗೆ ಮೆಚ್ಚಿ ಶ್ರೀಕೃಷ್ಣನು ಹಿಂಭಾಗದ ಗೋಡೆ ಬಿರಿದು, ಪೂರ್ವಾಭಿಮುಖವಾಗಿದ್ದ ಕೃಷ್ಣನ ವಿಗ್ರಹ ಪಶ್ಚಿಮಕ್ಕೆ ತಿರುಗಿ ನಿಂತಿತಂತೆ. ಅದು ಇಂದಿಗೂ ಕನಕನಕಿಂಡಿ ಎಂದೇ ಪ್ರಸಿದ್ದವಾಗಿದೆ.


ಕನಕದಾಸರು ಅಂದು ಜಟಿಲವಾಗಿ ಬೇರೂರಿದ್ದ ಸಾಮಾಜಿಕ ಮೌಢ್ಯಗಳನ್ನು ಹೋಗಲಾಡಿಸಲು ಹರಿಭಕ್ತಸಾರ, ರಾಮಧ್ಯಾನಚರಿತೆ, ಕೃಷ್ಣಚರಿತೆ, ನಳಚ-ರಿತೆ, ಮೋಹನತರಂಗಿಣಿ, ಕನಕಮುಂಡಿಗೆ, ನರಸಿಂಹ ಸ್ತೋತ್ರ ಹೀಗೆ ಹಲವಾರು ಕೃತಿಗಳನ್ನು ರಚಿಸುವ ಮೂಲಕ ದಾಸ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದರು. ಅವರು ಉತ್ತರ ಭಾರತದ ಪ್ರಸಿದ್ಧ ಯಾತ್ರಾ ಸ್ಥಳಗಳಾದ ಗಯಾ, ಮಥ-ುರಾ, ಕಾಶಿ, ದ್ವಾರಕಗಳ ತೀರ್ಥಯಾತ್ರೆಗೆ ಹೋದಾಗ ರಾಜಸ್ಥಾನದ ಅರಸ ರಾಣಾ ಪ್ರತಾಪಸಿಂಹನ ಅರಮನೆಯಲ್ಲಿ ತಂಗಿ ಆಥರಾತಿಥ್ಯವನ್ನು ಪಡೆಯುತ್ತಿದ್ದರು. ಇವರ ಪವಾಡವನ್ನು ಕಂಡ ಜೈಪುರದ ಅರಸ ರಾಣಾ ಪ್ರತಾಪಸಿಂಹನು ತನ್ನ ಅರಮನೆ ಆವರಣದಲ್ಲಿ ಕನಕ ಬೃಂದಾವನ ಮತ್ತು ಕನಕಕೊಳವನ್ನು ನಿರ್ಮಿಸಿ ಕನಕದಾಸರ ಆರಾಧ್ಯ ದೈವ ಶ್ರೀಕೃಷ್ಣನ ಮೂರ್ತಿಯನ್ನು ಪ್ರತಿಷ್ಠಾಪಿಸಿದನೆಂದು ಹೇಳಲಾಗುತ್ತದೆ.

ಕನಕದಾಸರ ಕುರಿತಾಗಿ ಹೆಚ್ಚು ತಿಳಿದುಕೊಳ್ಳಬೇಕೆಂದರೆ ಅವರ ಜನ್ಮಸ್ಥಳ ಹಾವೇರಿ ಜಿಲ್ಲೆಯ ಬಾಡ ಗ್ರಾಮದಲ್ಲಿರುವ ಕನಕದಾಸರ ಸುಂದರ ಅರಮನೆ ಮತ್ತು ಕನಕ ಗುರುಪೀಠ ಕಾಗಿನೆಲೆಗಳು ಕನಕದಾಸರ ಪವಿತ್ರ ಹಾಗೂ ಐತಿಹಾಸಿಕ ಸ್ಥಳಗಳಾಗಿದ್ದು, ಇವುಗಳಿಗೆ ನಾವು ಒಮ್ಮೆಯಾದರು ಭೇಟಿ ನೀಡಲೇಬೇಕು. ಇಲ್ಲಿಗೆ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಬರುತ್ತಾರೆ. ಕರ್ನಾಟಕದಲ್ಲಿ ಸಂತಶ್ರೇಷ್ಠ ಭಕ್ತ ಕನಕದಾಸರ ಜಯಂತಿಯನ್ನು ನವೆಂಬರ್ 18 ರಂದು ಆಚರಿಸಲಾಗುತ್ತಿದೆ. ಕನಕದಾಸರ ಜಯಂತಿಯನ್ನು ಆಚ-ರಿಸಿದರೆ ಸಾಲದು. ಅವರ ತತ್ವ ಮತ್ತು ಸಿದ್ಧಾಂತಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಈ ಮಹನೀಯರ ಜಯಂತಿ ಆಚರಿಸಿದ್ದಕ್ಕೂ ಸಾರ್ಥಕವಾಗುತ್ತದೆ.



**ಡಾ. ಸುರೇಶ ಜಿ.**
**ಕೊಪ್ಪಳ**

# ಪತ್ರಿಕೋದ್ಯಮ ವಿಭಾಗದಿಂದ ರಸಪ್ರಶ್ನೆ ಕಾರ್ಯಕ್ರಮ



ಕೊಪ್ಪಳ : ಕೊಪ್ಪಳ ವಿಶ್ವ ವಿದ್ಯಾಲಯದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಅಂಗವಾಗಿ ರಸ ಪ್ರಶ್ನೆ ಕಾರ್ಯಕ್ರಮವನ್ನು ಗುರುವಾರ ಆಯೋಜನೆ ಮಾಡಲಾಯಿತು.

ಪತ್ರಿಕೋದ್ಯಮ, ಸಮಾಜಶಾಸ್ತ್ರ, ವಾಣಿಜ್ಯಶಾಸ್ತ್ರ, ರಾಜ್ಯಶಾಸ್ತ್ರ, ಇಂಗ್ಲಿಷ್, ಕನ್ನಡ, ಇತಿಹಾಸ, ಅರ್ಥಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಉತ್ಸುಕರಾಗಿ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ವಾಣಿಜ್ಯ ಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಪ್ರಥಮ ಸ್ಥಾನ, ರಾಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಹಾಗೂ ಅಥ-ರ್ಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ತೃತೀಯ ಸ್ಥಾನ ಪಡೆದುಕೊಂಡರು. ಕೊಪ್ಪಳ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ.ಬಿ.ಕೆ.ರವಿ, ಕುಲಸಚಿವ ಪ್ರೊ.ಕೆ.ವಿ. ಪ್ರಸಾದ್, ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಪ್ರಕಾಶ್ ಯಳವಟ್ಟಿ ಅವರು ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಈ ಸಂಧರ್ಭದಲ್ಲಿ ವಿವಿಧ ವಿಭಾಗಗಳ ಉಪನ್ಯಾಸಕರಾದ ಅಯ್ಯಪ್ಪ, ಪಾರ್ವತಿ, ಸಂತೋಷಕುಮಾರ, ಶ್ರೀಕಾಂತ್, ವಿರುಪಾಕ್ಷಿ, ಪ್ರವೀಣ ಪೋಲಿಸ್ ಪಾಟೀಲ, ಸತೀಶ್, ಭಾಷಾ , ಕುಮಾರ ನಾಯಕ, ಜಗದೀಶ, ಸುಧಾಕರ, ಪಾಪಣ್ಣ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ರಾಷ್ಟ್ರೀಯ ನವಜಾತು ಶಿಶು ಸಪ್ತಾಹ ಕಾರ್ಯಕ್ರಮ



ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಕೊಪ್ಪಳ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಕಿನ್ನಾಳ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ನವಜಾತು ಶಿಶು ಸಪ್ತಾಹ ಕಾರ್ಯಕ್ರಮವು ನವೆಂಬರ್ 15 ರಂದು ಟಣಕನಕಲ್ ಗ್ರಾಮದಲ್ಲಿ ನಡೆಯಿತು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಮಾತನಾಡಿ ಜಿಲ್ಲೆಯಲ್ಲಿ ನವೆಂಬರ್ 15 ರಿಂದ ನ.21 ರವರೆಗೆ ರಾಷ್ಟ್ರೀಯ ನವಜಾತು ಶಿಶು ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಮತ್ತು ತಾಲೂಕಾ ಮಟ್ಟದ ಆಸ್ಪತ್ರೆಗಳಲ್ಲಿ ನವಜಾತ ಶಿಶುವಿನ ರಕ್ಷಣೆ ಸಿಗುವ ಸೇವಾ ಸೌಲಭ್ಯಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿ, ಮಗು ಮತ್ತು ತಾಯಿಯನ್ನು ಒಂದೇ ಕೋಣೆಯಲ್ಲಿ ಇರಿಸಿ ಮತ್ತು ಮಗುವಿಗೆ ಬೇಡಿಕೆಯ ಮೇಲೆ ಆಹಾರವನ್ನು ನೀಡಲು ಅವಕಾಶ ಮಾಡಿಕೊಡಬೇಕು.

ಯಾವುದೇ ಮಗು ಅಪೌಷ್ಠಿಕತೆಯಿಂದ ಬಳಲದಂತೆ ನೋಡಿಕೊಳ್ಳಲು ಸಾರ್ವಜನಿಕರಿಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಉಡಚಪ್ಪ ಭೋವಿ, ಕಸ್ತೂರಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾ-ರಿಗಳಾದ ಸರೋಜಾಬಾಯಿ, ಮಂಜುಳಾ, ಆಶಾ ಕಾರ್ಯಕರ್ತೆಯರಾದ ಬಸವಣ್ಣಮ್ಮ, ಮಂಜುಳಾ, ತಾಯಂದಿರು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

# ಕೆ.ಕೆ.ಆರ್.ಡಿ.ಬಿ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಮುಗಿಸಿ - ಸಚಿವ ಶಿವರಾಜ ತಂಗಡಗಿ



ಕೊಪ್ಪಳ : ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಕೊಪ್ಪಳ ಜಿಲ್ಲೆಯಲ್ಲಿ ನಡೆಯುತ್ತಿರುವ ಕೆಲಸ ಮತ್ತು ಕಾಮಗಾ-ರಿಗಳನ್ನು ಕಾಲಮಿತಿಯಲ್ಲಿ ಮುಗಿಸಿ ಇಲ್ಲದಿದ್ದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಹೇಳಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕೊಪ್ಪಳ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೆ.ಕೆ.ಆರ್.ಡಿ.ಬಿ ಅನುದಾನಡಿ ಕೊಪ್ಪಳ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾದ 2018-19, 2019-20 ಮತ್ತು 2020-21ನೇ ಸಾಲಿನ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಇದರ ಜೊತೆಗೆ 2023-24ನೇ ಸಾಲಿನ ಮುಕ್ತಾಯ ಹಂತದಲ್ಲಿರುವ ಕಾಮಗಾರಿಗಳನ್ನು ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಲು ಅನುಷ್ಠಾನಾಧಿಕಾರಿಗಳು ತ್ವ-ರಿತ ಕ್ರಮ ಕೈಗೊಳ್ಳಬೇಕು ಎಂದರು.

ಇನ್ನೂ ಪ್ರಾರಂಭಿಸದೆ ಇರುವ ಕಾಮಗಾ-ರಿಗಳ ಕುರಿತು ಯಾವುದೇ ಸಮಸ್ಯೆಗಳಿದ್ದರೆ, ಕೂಡಲೇ ಅದನ್ನು ಸರಿಪಡಿಸಿ ಆ ಎಲ್ಲಾ ಕಾಮಗಾ-ರಿಗಳು ಸಹ ಈ ಡಿಸೆಂಬರ್ ಮಾಹೆಯೊಳಗೆ ಪ್ರಾರಂಭಿಸಲು ತುರ್ತಾಗಿ ಕ್ರಮ ಕೈಗೊಳ್ಳಬೇಕು. ಈ ಹಿನ್ನೆಲೆಯಲ್ಲಿ ಯಾವುದೇ ಕಾಮಗಾ-ರಿಗಳು ಅಪೂರ್ಣ ಅಥವಾ ಪ್ರಾರಂಭವಾಗದೇ ಬಾಕಿ ಉಳಿದರೆ ಸಂಬಂಧಪಟ್ಟ ಅಧಿಕಾರಿಗಳನ್ನೆ ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಸಚಿವರು ಸೂಚನೆ ನೀಡಿದರು.

2024-25ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮೈಕ್ರೋ ಮತ್ತು ಮ್ಯಾಕ್ರೋ ಯೋಜನೆಯ ಅನುದಾನದಡಿ ಕೊಪ್ಪಳ ಜಿಲ್ಲೆಗೆ ಮಂಜೂರಾದ ಎಲ್ಲಾ ಕಾಮಗಾರಿಗಳನ್ನು ಟೆಂಡರ್ ಕರೆದು ಅನುಮೋದನೆ ನೀಡಿ, ಅನುಷ್ಠಾನ ಕಾಮಗಾ-ರಿಗಳನ್ನು ಡಿಸೆಂಬರ್ ಅಂತ್ಯದೊಳಗೆ ಪ್ರಾರಂಭಕ್ಕೆ ಕ್ರಮ ವಹಿಸಬೇಕು. ಯಾವುದೇ ಕಾರಣ-ಕ್ಕೂ ಅನಗತ್ಯ ವಿಳಂಬ ಮಾಡಬಾರದು. ಕೆ.ಕೆ. ಆರ್.ಡಿ.ಬಿ ಮಂಡಳಿಯ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ಜಿಲ್ಲೆಯ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಹೇಳಿದರು.

ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ನಿರ್ಮಾಣವಾಗುತ್ತಿರುವ ರಂಗಮಂದಿರ ಮತ್ತು ಜಿಲ್ಲೆಯ ವಿವಿಧೆಡೆ ನಿರ್ಮಾಣವಾಗುತ್ತಿರುವ ಶಾಲಾ ಕೊಠಡಿಗಳು, ಆರೋಗ್ಯ ಕೇಂದ್ರಗಳು ಹಾಗೂ ಇತರೆ ಕಟ್ಟಡಗಳ ಲೋಕಾರ್ಪಣೆಗಳಿದ್ದರೆ ಸಂಬಂಧಪಟ್ಟ ಅಧಿಕಾರಿಗಳು ನಮ್ಮ ಗಮನಕ್ಕೆ ತನ್ನಿ. ಕಾರಟಗಿ, ಕನಕಗಿರಿ ಹಾಗೂ ಕುಕನೂರು ತಾಲ್ಲೂಕುಗಳಲ್ಲಿ ಮಿನಿ ವಿಧಾನಸೌಧ ನಿರ್ಮಾಣಕ್ಕಾಗಿ ಮೂರು ತಾಲ್ಲೂಕುಗಳಲ್ಲಿ ಜಮೀನು ಗುರುತಿಸಲು ಆಯಾ ತಹಶಿಲ್ದಾರರು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಟಿ.ಲಿಂಗರಾಜು ಸೇ-ರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಮತ್ತಿತರರಿದ್ದರು.

# ವಿದೇಶಿ ವ್ಯಾಸಂಗ ವೇತನಕ್ಕೆ ಅರ್ಜಿ ಆಹ್ವಾನ

ಕೊಪ್ಪಳ : 2024-25ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿಹೆಚ್‌ಡಿ ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ನೀಡುವ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 05 ಕೊನೆಯ ದಿನವಾಗಿದ್ದು, ಹೆಚ್ಚಿನ ವಿವರಗಳಿಗಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ಅಥವಾ ಸಹಾಯವಾಣಿ ಸಂಖ್ಯೆ: 8050770004 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾ-ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಲ್ಲಿಂದ ಬಂದೆ ಮುಂದೆತ್ತ ಪಯಣ

( ನವೆಂಬರ್ 18 ರಂದು ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಶ್ರೇಷ್ಠ ದಾರ್ಶನಿಕ ಕವಿ ಕನಕದಾಸರ ಜಯಂತಿ-2024 ನ್ನು ನಗರದ ಹಾತಲಗೇರಿ ನಾಕಾದ ಕನಕದಾಸ ವೃತ್ತದಲ್ಲಿ ಹಮ್ಮಿಕೊಳ್ಳಲಾಗಿದೆ. ತನ್ನಿಮಿತ್ತ ಈ ವಿಶೇಷ ಲೇಖನ )




ಎಲ್ಲಿಂದ ಬಂದೆ, ಮುಂದೆತ್ತ ಪಯಣ, ಇಲ್ಲಿ ನಿನಗೆಷ್ಟು ದಿನವಾಲಸ್ಯ ಮರುಳೆ ಎಂಬ ಕನಕದಾಸರ ಹಾಡಿನ ಸಾಲು ಒಬ್ಬ ವ್ಯಕ್ತಿಯ ಮೂಲ ಅರಿಯುವ ಹಾಗೂ ಜೀವಿತದ ಮುಂದಿನ ಪ್ರಯಾಣದ ಹಾದಿಯನ್ನು ವಿಚಾ-ರಿಸುವುದಾಗಿದೆ. ನಾನು ಎಲ್ಲಿಂದ ಬಂದೆ? ಎಂಬ ಪ್ರಶ್ನೆ ವ್ಯಕ್ತಿಗೆ ಆತ್ಮ ಅನ್ವೇಷಣೆ ಮಾಡಿಕೊಳ್ಳುವುದಾಗಿದೆ. ಮುಂದೆತ್ತ ಪಯಣ ಎಂದರೆ ಇದು ಜೀವನದ ಪ್ರಗತಿಯ ಹಾದಿಯನ್ನು ಮತ್ತು ಜೀವನದ ಉದ್ದೇಶವನ್ನು ಹುಡುಕುವ ಸಂದೇಶ ನೀಡುತ್ತದೆ. ವರ ಕಾಗಿನೆಲೆಯಾದಿ ಕೇಶವನ ಸಿರಿಚರಣ ಕಮಲವನು ನೆರೆ ನಂಬಿ ಸುಖಿಸೋ ಎನ್ನುವುದರ ಮೂಲಕ ಕನಕದಾಸರ ಪದದ ಸಾಲುಗಳು ಭಕ್ತಿ ಸಾಹಿತ್ಯದಲ್ಲಿ ಜೀವನದ ಮೂಲ, ಪಥ ಮತ್ತು ತನ್ನ ಧಾರ್ಮಿಕ ಹಾಗೂ ಭಗವಂತನ ಸಾಕ್ಷಾತ್ಕಾರಕ್ಕೆ ಮಾಡುವ ನೈತಿಕ ಪ್ರ0ಯಾಣವನ್ನು ಪ್ರತಿಬಿಂಬಿಸುತ್ತವೆ. ಈ ರೀತಿಯಲ್ಲಿ ಕನಕದಾಸರ ಹಾಡುಗಳು ಆಧ್ಯಾತ್ಮಿಕ ಮತ್ತು ದಾರ್ಶನಿಕ ಸಂದೇಶವನ್ನು ಹೊಂದಿವೆ.

ಪುರಂದರದಾಸರು ಹಾಗೂ ಕನಕದಾಸರನ್ನು ದಾಸಸಾಹಿತ್ಯದ ಅಶ್ವಿನಿ ದೇವತೆಗಳೆಂದೇ ವರ್ಣಿಸಲಾಗಿದೆ. ಕನಕದಾಸರ ಹುಟ್ಟೂರು ಹಾವೇರಿ ಜಿಲ್ಲೆ0ು ಬಾಡ ಗ್ರಾಮ. ಬೀರಪ್ಪ ಹಾಗೂ ಬಿಚ್ಚಮ್ಮನ ಮಗನಾಗಿ ಇವರು 1509 ರಲ್ಲಿ ಹುಟ್ಟಿದರು. ಕನಕದಾಸರ ಮೂಲ ಹೆಸರು ತಿಮ್ಮಪ್ಪ ನಾಯಕ. ಅದೊಂದು ದಿನ ಕನಸಲ್ಲಿ ತಿರುಪತಿ ತಿಮ್ಮಪ್ಪ ಪ್ರತ್ಯಕ್ಷನಾಗಿ ತನಗೊಂದು ಗುಡಿ ಕಟ್ಟಿಸಿ ಕೊಡುವಂತೆ ಕೇಳಿದಾಗ ತಿಮ್ಮಪ್ಪ ನಾ0ುಕ ದೇವಾಲಯುವೊಂದನ್ನ ಕಟ್ಟಿಸುವ ಕೆಲಸದಲ್ಲಿ ತೊಡಗಿದಾಗ ಭೂಮಿ ಅಗೆ0ುುತ್ತಿರುವ ಸಂದರ್ಭದಲ್ಲಿ ಏಳು ಗಡಿಗೆಗಳಷ್ಟು ಚಿನ್ನದ ನಾಣ್ಯಗಳು ಹಾಗು ಒಂದು ದೇವರ ವಿಗ್ರಹ ಕೂಡ ಅಲ್ಲಿ ಸಿಕ್ಕಿತು. ಮೂರ್ತಿಯನ್ನು ದೇವಾಲ0ುದಲ್ಲಿ ಪ್ರತಿಷ್ಠಾಪಿಸಿದ್ದ ತಿಮ್ಮಪ್ಪ ಮುಂದೆ ಸಿಕ್ಕಿದ ಹಣವನ್ನೆಲ್ಲ ಜನರ ಕಲ್ಯಾಣ ಹಾಗೂ ಧಾರ್ಮಿಕ ಕಾ0ುರ್ಗಳಿಗಾಗಿ ವಿನಿ0ುೋಗಿಸುವುದಕ್ಕೆ ಪ್ರಾರಂಭಿಸಿದರು. ಭೂಮಿಯಲ್ಲಿ ಬಂಗಾರ ಸಿಕ್ಕಿದ ಕಾರಣ ಇವರು ಮುಂದೆ ಕನಕ ನಾ0ುಕ ಎಂದು ಪ್ರಸಿದ್ಧಿ ಪಡೆದರು. ತದನಂತರ ಯುದ್ಧವೊಂದರಲ್ಲಿ ವೈರಾಗ್ಯ ಉಂಟಾಗಿ ಅವರು ಕನಕದಾಸರಾದರು.

ಕನಕದಾಸರು ವೇದಶಾಸ್ತ್ರ, ಉಪನಿಷತ್ತುಗಳನ್ನು ಕರತಲಾಮಲಕ ಮಾಡಿಕೊಂಡಿದ್ದ ವ್ಯಾಸತೀರ್ಥರಾಯರ ಅಚ್ಚುಮೆಚ್ಚಿನ ..ಶಿಷ್ಯರಾಗಿದ್ದರು. ಮದ್ವತತ್ವ ಶಾಸ್ತ್ರವನ್ನು ಕಲಿತು ಒಪ್ಪಿಕೊಂಡ ಕನಕದಾಸರು ಉಡುಪಿ ಶ್ರೀಕೃಷ್ಣನ ಅನನ್ಯ ಭಕ್ತರೂ ಆಗಿದ್ದರು. ಒಮ್ಮೆ ವ್ಯಾಸರಾಯರು ಭಕ್ತಿ ಪಂಥದ ದಾಸಕೂಟದಲ್ಲಿ ತಮ್ಮ ಶಿಷ್ಯರುಗಳಿಗೆ " ನಮ್ಮಲ್ಲಿ ವೈಕುಂಠಕ್ಕೆ ಯಾರು ಹೋಗಬಹುದು " ? ಎಂಬ ಪ್ರಶ್ನೆ ಕೇಳಿದರು. ಆಗ ಕನಕದಾಸರು ನಾನು ಹೋದರೆ ಹೋಗಬಹುದು ಎಂದು ಗುರುಗಳಿಗೆ ಉತ್ತರಿಸಿದರು. ಈ ಉತ್ತರದಿಂದ ಎಲ್ಲ ಶಿಷ್ಯರುಗಳು ಆಶ್ಚರ್ಯಚಕಿತರಾದರು. ಆದ-ರೆ ವ್ಯಾಸರಾಯರು ಕನಕದಾಸರ ಉತ್ತರಕ್ಕೆ ಸಂತಸ ವ್ಯಕ್ತಪಡಿಸಿದರು. "ನಾನು ಹೋದರೆ ಹೋಗಬಹುದು" ಎಂಬ ವಾಕ್ಯದ ಗೂಡಾರ್ಥವೇನೆಂದರೆ ಮನುಷ್ಯನಲ್ಲಿರುವ ಅಹಂಕಾರ ಹೋದಾಗ ಮಾತ್ರ ಅವನು ಪರಮಾತ್ಮನ ಬಳಿ ಹೋಗಬಹುದು ಎಂಬುದಾಗಿದೆ.

ಕನಕದಾಸರು ಕವಿ, ತತ್ವಜ್ಞಾನಿ, ಸಂಗೀತಗಾರರು ಆಗಿದ್ದು ವಿನೀತ ಭಾವಹೊಂದಿದ್ದ ಕನಕದಾಸರು ಜಾತಿ ಮತಗಳ ಕಟ್ಟುಪಾಡಿಲ್ಲದ ಇವರು ತಮ್ಮ ಅನುಭಾವದಿಂದ ಹೊರಹೊಮ್ಮಿರುವ ಭಕ್ತಿ ಭಾವಗಳನ್ನು ಗೀತೆಗಳ ಮೂಲಕ ಹಾಡಿ ಲೋಕ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ. ಭಗವಂತನ ಸಾಕ್ಷಾತ್ಕಾರಕ್ಕೆ ಭಕ್ತಿಯೇ ಮುಖ್ಯ ಎಂದು ಉಡುಪಿಯ ಶ್ರೀ ಕೃಷ್ಣನ ದರ್ಶನದಿಂದ ತೋರಿಸಿಕೊಟ್ಟರು. ಇವರ ಅಂಕಿತನಾಮ ಕಾಗಿನೆಲೆ ಆದಿಕೇಶವ ಎಂಬುದಾಗಿದೆ.

ಏನೂ ಒಲ್ಲೆ ಶ್ರೀ ಹರಿ ನಿನ್ನ ಜಗವು ಎಂಬೋದು, ಜ್ಞಾನ ಭಕ್ತಿ ಕೊಡು ಎನಗದೊಂದೇ ದೊಡ್ಡದು ಎನ್ನುವ ಕನಕದಾಸರ ಪದದಲ್ಲಿ ಸಾಲುಗಳು ಕನಕದಾಸರು ಜ್ಞಾನ, ಭಕ್ತಿ ಮತ್ತು ವೈರ್ಯಾಗದ ಕಡೆಗಿನ ಒಲವನ್ನು ಎತ್ತಿ ತೋ-ರಿಸುತ್ತವೆ.




ಕನಕದಾಸರು ಸಾಹಿತ್ಯದ ವಿವಿಧ ಪ್ರಕಾರಗಳಾದ ಕೀರ್ತನೆಗಳು, ಸುಳಾದಿಗಳು, ಉಗಾಭೋಗಗಳು, ಮುಂಡಿಗೆಗಳು, ಪದಗಳನ್ನು ಕನ್ನಡ ಸಾರಸ್ವತ ಲೋಕಕ್ಕೆ ಅರ್ಪಿಸಿದ್ದಾರೆ. ಮೋಹನತರಂಗಿಣಿ, ನಳಚರಿತ್ರೆ ರಾಮಧಾನ್ಯ ಚರಿತ ಹರಿಭಕ್ತಿಸಾರ ಇವರ ಮುಖ್ಯ ಕಾವ್ಯಕೃತಿಗಳಾಗಿವೆ. ಭಕ್ತ ಶ್ರೇಷ್ಟ ಕನಕದಾಸರು ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದುತ್ತಾ ಲೋಕಕಲ್ಯಾಣಕ್ಕಾಗಿ ಹ-ರಿದಾಸರಾಗಿ ಮಿಂಚಿದರು.

ಮನುಷ್ಯರಾದ ನಾವು ಸುಖಕ್ಕೆ ಹಿಗ್ಗದೇ ದು:ಖಕ್ಕೆ ಕುಗ್ಗದೇ ತಟಸ್ಥಮನಸ್ಕರಾಗಿರಬೇಕು ಎಂದು ಕನಕದಾಸರು ಹೇಳಿದ್ದಾರೆ. ಪರಮಾತ್ಮನ ಬಗ್ಗೆ ಅನನ್ಯ ಭಕ್ತಿ, ಅಚಲವಾದ ವಿಶ್ವಾಸ, ದೃಢವಾದ ನಂಬಿಕೆ ಇಟ್ಟು ತಮ್ಮ ಕರ್ತವ್ಯಗಳನ್ನು ಮಾಡುತ್ತಾ ಜೀವನ ನಡೆಸಬೇಕು ಎಂದು ಸಮಾಜಕ್ಕೆ ತಿಳಿಸಿಕೊಟ್ಟಿದ್ದಾರೆ.

ಕನಕದಾಸರ ಎಲ್ಲ ಕಾವ್ಯಗಳು ಕವಿ ಸಹಜವಾದ ವರ್ಣನೆಗಳಿಂದ ಉಪಮೆಗಳಿಂದ ಅಲಂಕೃತಗೊಂಡಿದ್ದು ಅವರ ಕಾವ್ಯ ಕೌಶಲ್ಯ ಕವಿಗಳಿಗೆ ಮಾದರಿ. ಅವರ ಕೀರ್ತನೆಗಳಲ್ಲಿ ಭಕ್ತಿಯ ಪಾರಮ್ಯವನ್ನು ಕಾಣಬಹುದಾಗಿದೆ. ಕನಕದಾಸರ ತತ್ವ ಸಂದೇಶಗಳು ಸಾರ್ವಕಾಲಿಕವಾಗಿದ್ದು, ಆಧ್ಯಾತ್ಮಿಕ, ಸಾಹಿತ್ಯ, ಸಾರಸ್ವತ ಲೋಕಕ್ಕೆ ಅನುಪಮ ಕೊಡುಗೆ ನೀಡಿದ ದಾಸಶ್ರೇಷ್ಠರಾದ ಕನಕದಾಸರು ರಚಿಸಿರುವ ಕೃತಿ, ಕೀರ್ತನೆ, ಭಕ್ತಿಗೀತೆಗಳನ್ನು ಅರ್ಥೈಸಿಕೊಂಡು ಜೀವನ ನಿರ್ವಹಣೆ ಮಾಡುವುದ-ರಿಂದ ಸಮಾಜದಲ್ಲಿ ಪ್ರತಿಯೊಬ್ಬರೂ ಸಂತೃಪ್ತ , ಶಾಂತ ರೀತಿಯ ಜೀವನ ನಡೆಸಬಹುದಾಗಿದೆ.

**ಶ್ರೀಮತಿ ಅಂಜನಾ ರಾಘವೇಂದ್ರ ಕುಬೇರ**
**ಗದಗ**

# ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ



ಗದಗ : ಗದಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಶುಕ್ರವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿಯಲ್ಲಿ ಹೆಣ್ಣು ಭ್ರೂಣ ಹತ್ಯೆ ತಡೆಯಲು ಮತ್ತು ಹೆಣ್ಣು ಮಕ್ಕಳ ಶಿಕ್ಷಣವನ್ನು ಪ್ರೋತ್ಸಾಹಿಸಲು ಜಿಲ್ಲಾ ಮಟ್ಟದಲ್ಲಿ ತೆರೆದ ವಾಹನದ ಮುಖಾಂತರ ಸ್ತಬ್ದ ಚಿತ್ರದ ಮೂಲಕ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಜಾಗೃತಿ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾದಿಕಾರಿ ಭರತ್ ಎಸ್ ಹಾಗೂ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಅವರು ಚಾಲನೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪದ್ಮಾವತಿ ಜಿ, ಜಿಲ್ಲಾ ನಿರೂಪಣಾಧಿಕಾರಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ರಾಧಾ ಮಣ್ಣೂರ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ಕಾರವಾರ - ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಸಂಶೋಧನಾ ವಿದ್ಯಾರ್ಥಿಗಳಿಗೆ ಯಾವುದೇ ಫೆಲೋಶೀಪ್ ಪಡೆಯದಿದ್ದಲ್ಲಿ ಮಾಸಿಕ ರೂ. 25,000 ಗಳಂತೆ ಶಿಷ್ಯವೇತನ ನೀಡಲು ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಡಿಸೆಂಬರ್ 14 ಕೊನೆಯ ದಿನವಾಗಿದೆ.

ಸದರಿ ಶಿಷ್ಯವೇತನ ಪಡಯಲು ಇಚ್ಛಿಸುವ ಅರ್ಹ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವಂತೆ ಹಾಗೂ ಅರ್ಜಿ ನಮೂನೆಯನ್ನು ಆಯಾ ತಾಲೂಕಿನ ಸಹಾಯಕ ನಿರ್ದೇಶಕರರು ಗ್ರೇಡ್-2, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ದೂ. ಸಂಖ್ಯೆ 08382-226575 ನ್ನು ಸಂಪರ್ಕಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಿತ್ತೂರು ಉತ್ಸವ ರಾಷ್ಟ್ರೀಯ ಉತ್ಸವವನ್ನಾಗಿ ಆಚರಿಸಿ

## ಶಿರೂರು ಪಟ್ಟಣದಲ್ಲಿ ಸ್ವಾತಂತ್ರ್ಯ ಹೋರಾಟದ ಪ್ರಥಮ ಮಹಿಳೆ ಕಿತ್ತೂರು ಚನ್ನಮ್ಮಳ ವಿಜಯೋತ್ಸವ ಸಮಾರಂಭ

**ಬಾಗಲಕೊಟೆ/ಶಿರೂರು:** ಸ್ವಾತಂತ್ರಕ್ಕಾಗಿ ಬ್ರೀಟಿರ ಸೈನ್ಯದ ವಿರುದ್ಧ ಹೋರಾಡಿದ ಭಾರತದ ಪ್ರಥಮ ಮಹಿಳಾ ಸ್ವಾತಂತ್ರ್ಯ ಹೋರಾಟಗಾರ್ತಿ ಕಿತ್ತೂರು ಚನ್ನಮ್ಮ ನಾಡು ಹಾಗೂ ದೇಶದಲ್ಲಿ ಮನೆಮಾತಾಗಿದ್ದಾಳೆ. ಕಿತ್ತೂರು ಚನ್ನಮ್ಮ ಸಮಸ್ತ ಭಾರತೀಯರಿಗೆ ಸ್ಫೂರ್ತಿಯಾಗಿದ್ದು, ಈಗ ನಡೆಯುವ ಕಿತ್ತೂರು ಉತ್ಸವವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜೊತೆಯಾಗಿ ರಾಷ್ಟ್ರೀಯ ಕಿತ್ತೂರು ಉತ್ಸವವನ್ನಾಗಿ ಆಚರಿಸಬೇಕು ಎಂದು ಉಪನ್ಯಾಸಕ ಡಾ.ಚಂದ್ರಶೇಖರ ಕಾಳನ್ನವರ ಹೇಳಿದರು.



ಅವರು ಶಿರೂರು ಪಟ್ಟಣದಲ್ಲಿ ಭಾನುವಾರ ನಡೆದ ವೀರಶೈವ ಲಿಂಗಾಯತ ಪಂಚಮಸಾಲಿ ಬಣಜಿಗರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಟಿ.ಎಂ.ಭಗವತಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ವೀರರಾಣಿ ಕಿತ್ತೂರು ಚನ್ನಮ್ಮಾಜಿಯ 200 ನೇ ವಿಜಯೋತ್ಸವದ ಉಪನ್ಯಾಸ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ, ಮಾತನಾಡಿದರು.

ಮುಂದುವರಿದು ಮಾತನಾಡಿ ಕಿತ್ತೂರು ರಾಣಿ ಚನ್ನಮ್ಮನ ವೀರಗಾಥೆ ಜೀವನವನ್ನು ಕನ್ನಡ ಜಾನಪದರು, ಲಾವಣಿಕಾರರು ಪದಗಳನ್ನು ರಚಿಸಿ, ಹೃದಯ ತುಂಬಿ ಹಾಡಿದ್ದಾರೆ. ಬ್ರೀಟಿಷರಿಗೆ ಸಿಂಹಸ್ವಪ್ನವಾಗಿದ್ದ ಕಿತ್ತೂರು ರಾಜಮನೆತನದ ವೀರಮಾತೆ ಚನ್ನಮ್ಮಳ ಸಾಹಸ, ಕೀರ್ತಿ, ಧೈರ್ಯ ಶೌರ್ಯ ನಮ್ಮ ಭಾರತೀಯ ಮಹಿಳೆಯರಿಗೆ ಇಂದಿಗೂ ಸ್ಫೂರ್ತಿಯಾಗಿದ್ದಾಳೆ.

ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ ಅವರು ಚನ್ನಮ್ಮಾಜಿ ವಿಜಯೋತ್ಸವದ ಉಪನ್ಯಾಸ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿ, ಕಿತ್ತೂರು ಚನ್ನಮ್ಮಳ ಸ್ವಾತಂತ್ರ್ಯ ಹೋರಾಟದ ಕೀರ್ತಿ ಭಾರತ ದೇಶವನ್ನೆ ಬೆಳಗಿದೆ. ಸ್ವಾತಂತ್ರ್ಯ ಹೋರಾಟದ ಪ್ರಥಮ ಮಹಿಳೆಯಾಗಿ ಇಂದಿನ ಭಾರತೀಯ ಮಹಿಳೆಯರಿಗೆ ಮಾದರಿಯಾಗಿದ್ದಾಳೆ ಎಂದರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ತು ಸದಸ್ಯ ಪಿ.ಹೆಚ್.ಪೂಜಾರ ಅವರು ಮಾತನಾಡಿ, ಕಿತ್ತೂರಿನ ವೀರರಾಣಿ ಚನ್ನಮ್ಮನ ಸ್ವಾತಂತ್ರ್ಯದ ಹೋರಾಟ, ಬ್ರೀಟೀಷರ್ ವಿರುದ್ಧದ ವಿಜಯವನ್ನು ಸಾಧಿಸಿದ ಸಾಹಸವನ್ನು ನಾವೆಲ್ಲರೂ ಸದಾ ಸ್ಮರಿಸಬೇಕು ಎಂದರು. ಆರ್.ಸಿ.ಚಿತ್ತವಾಡಿಗಿ ಅವರ ರಚಿಸಿದ 'ದಾನಿಯೊಳಗೆ ಮಹಾದಾನಿ' ಎಂಬ ಪುಸ್ತಕ ಕುರಿತು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಅವರು ಮಾತನಾಡಿದರು.

ವೀರಶೈವ ಲಿಂಗಾಯತ ಪಂಚಮಸಾಲಿ ಬಣಜಿಗರ ಸಂಘದ ಅಧ್ಯಕ್ಷರಾದ ಬಿ.ಎಲ್. ಮೆಣಸಗಿ ಅವರು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಹಿರಿಯ ನ್ಯಾಯವಾದಿಗಳಾದ ಸಿ.ವಿ.ಕೋಟಿ, ಲಿಂಗರಾಜ ವಾಲಿ, ಎಸ್.ಆಯ್.ಕರಿಶಂಕರಿ, ರಾಮಣ್ಣ ಜುಮನಾಳ, ಜಿ.ಎಂ.ಸಿಂಧೂರ, ಎಸ್.ಎ.ಮೇಳಿ, ಎಸ್.ಎಸ್.ಕಲಗುಡಿ, ಸಿದ್ಧಪ್ಪ ಮೇಳಿ, ರಾಜಶೇಖರ ಅಂಗಡಿ, ರಾಜು ಚಿತ್ತವಾಡಿಗಿ, ಎಸ್.ಆರ್.ಪಟ್ಟಣಶೆಟ್ಟರ, ಕಲ್ಲಪ್ಪ ಭಗವತಿ ಸಿದ್ಧಲಿಂಗಪ್ಪ ಪಟ್ಟಣಶೆಟ್ಟಿ ಅವರು ವೇದಿಕೆ ಮೇಲೆ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಸಮಾಜದ ಸಾಧಕರಿಗೆ, ವೈದ್ಯಕೀಯ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು.

# ಸಿದ್ಧಲಿಂಗ ಯತಿರಾಜರ, ಚಂಪಮ್ಮತಾಯಿ ಪುಣ್ಯಾರಾಧನೆ

**ಮೂಡಲಗಿ:** ತಾಲೂಕಿನ ಸುಕ್ಷೇತ್ರ ಹುಣಶ್ಯಾಳ ಪಿ.ಜಿ ಗ್ರಾಮದ ಶ್ರೀ ಸಿದ್ಧಲಿಂಗ ಕೈವಲ್ಯಾಶ್ರಮದ ಅಧಿಪತಿಗಳಾದ ಶ್ರೀ ನಿಜಗುಣದೇವ ಮಹಾಸ್ವಾಮಿಗಳರವರ ಗುರುಗಳಾದ ಸಿದ್ಧಿಪುರುಷ ಮಧುರಖಂಡಿಯ ಕಮರಿಮಠಾಧೀಶ ಶ್ರೀ ಸಿದ್ಧಲಿಂಗ ಯತಿರಾಜರ ಮತ್ತು ಮಾತೋಶ್ರೀ ಚಂಪಮ್ಮತಾಯಿಯವರ ಪುಣ್ಯಾರಾಧನೆ ಕಾರ್ಯಕ್ರಮವು ದಿ. 17 ರಂದು ಮುಂಜಾನೆ 9 ಗಂಟೆಗೆ ಶ್ರೀಮಠದಲ್ಲಿ ಜರುಗಲಿದೆ.

ಲಚ್ಯಾಣದ ಶ್ರೀ ಸಿದ್ಧಲಿಂಗ ಮಹಾರಾಜರ ಕೃಪೆಯನ್ನು ಹೊಂದಿ ದೇವಿಯ ಅನುಗ್ರಹದಿಂದ ವಾಕಸಿದ್ಧಿ ಹಾಗೂ ಪವಾಡ ಪುರುಷರಾಗಿದ್ದ ಸಿದ್ಧಲಿಂಗ ಮಹಾರಾಜರು ಅನ್ನದಾಸೋಹ, ಜ್ಞಾನದಾಸೋಹ ನಡೆಸುತ್ತ ಮುಗಳಖೋಡದ ಸದ್ಗುರು ಶ್ರೀ ಯಲ್ಲಾಲಿಂಗ ಮಹಾರಾಜರ ಜೊತೆ ಇಡೀ ಭಾರತ ದೇಶವನ್ನು ಕಾಲ್ನಡೆಗೆಯಲ್ಲಿ ಸಂಚರಿಸಿ ತೀರ್ಥಯಾತ್ರೆ ಮಾಡಿ ಭಕ್ತರಪಾಲಿಗೆ ಕಾಮಧೇನು ಕಲ್ಪವೃಕ್ಷ ಆಗಿದ್ದರು.

ಶ್ರೀಮಠದ ಅಧಿಪತಿ ನಿಜಗುಣದೇವ ಮಹಾಸ್ವಾಮಿಗಳು ಪಾವನ ಸನ್ನಿಧಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಯರಝರ್ವಿಯ ಪೂಜ್ಯ ಶ್ರೀ ಚಿದಾನಂದ ಮಹಾಸ್ವಾಮಿಜಿ, ಶಿರೋಳದ ಯಮುನಾನಂದ ಸ್ವಾಮಿಗಳು ಆಗಮಿಸುವರು. ಬೆಳಿಗ್ಗೆ ಗದ್ದುಗೆಗೆ ಮಹಾರುದ್ರಾಭಿಷೇಕ ಸುಮಂಗಲಿಯರ ಕಳಸ ಆರತಿ, ವಾದ್ಯ ವೈಭವದೊಂದಿಗೆ ಪಲ್ಲಕ್ಕಿಯಲ್ಲಿ ಶ್ರೀಗಳ ಭಾವಚಿತ್ರದ ಭವ್ಯ ಮೆರವಣಿಗೆ, ಶಿವಾನುಭಾವ, ಬಸಪ್ಪ ಸೋಮನಟ್ಟಿ ಇವರಿಂದ ಅನ್ನದಾಸೋಹ



ಜರುಗಲಿದೆ. ಶ್ರೀ ಸಿದ್ಧಲಿಂಗೇಶ್ವರ ಭಜನಾ ಮಂಡಳಿ ಇವರಿಂದ ಸಂಗೀತ ಸೇವೆ, ಮಲ್ಲಪ್ಪ ಲಕ್ಷೇಶ್ವರ ಇವರಿಂದ ಚಿಂತನ ಸೇವೆ ಜರುಗಲಿದೆ.

ಮಾತೋಶ್ರೀ ಚಂಪಮ್ಮತಾಯಿಯವರ ಪುಣ್ಯ ಸ್ಮರಣೋತ್ಸವಸದ್ಗುರು ಸಿದ್ದಲಿಂಗ ಯತಿರಾಜರ ಮಗಳಾದ ಮಧುರಖಂಡಿಯ ಮಾತೋಶ್ರೀ ಚಂಪಮ್ಮತಾಯಿಯವರು ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮವು ತಾಲೂಕಿನ ಹುಣಶ್ಯಾಳ ಪಿಜಿ ಶ್ರೀ ಸಿದ್ದಲಿಂಗ ಕೈವಲ್ಯಾಶ್ರಮದಲ್ಲಿ ದಿ.17 ಜರುಗಲಿದೆ.ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಅಭಿಷೇಕ, ಮಹಾತ್ಮರಿಂದ ಸಭೆ, ಭಜನಾ ಕಾರ್ಯಕ್ರಮ, ಮಹಾಪ್ರಸಾದ ಜರುಗಲಿದ್ದು ಭಕ್ತ ಸಮೂಹವು ಪಾಲ್ಗೊಳ್ಳಬೇಕೆಂದು ಶ್ರೀ ಸಿದ್ದಲಿಂಗ ಕೈವಲ್ಯಾಶ್ರಮದ ಪೀಠಾಧಿಪತಿ ಪೂಜ್ಯ ಶ್ರೀ ನಿಜಗುಣ ದೇವ ಮಹಾಸ್ವಾಮಿಗಳು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

**ಚೂರು–ಪಾರು**

## ಗ್ರಾಮೀಣ ಕ್ಷೇತ್ರದಲ್ಲಿ ಅಭಿವೃದ್ಧಿ ಪರ್ವ



**ರಾಯಬಾಗ: ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಅಪ್ಪಾಸಾಹೇಬ ಕುಲಗುಡೆ ಅವರನ್ನು ಬಿಡಿಸಿಸಿ ಬ್ಯಾಂಕ್ ರಾಯಬಾಗ ಶಾಖೆಯ ಪದಾಧಿಕಾರಿಗಳು ಮತ್ತು ಸಿಬ್ಬಂದಿ ಸತ್ಕರಿಸಿದರು.**

**ರಾಯಬಾಗ:** ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಅಪ್ಪಾಸಾಹೇಬ ಕುಲಗುಡೆ ಅವರನ್ನು ಗುರುವಾರ ಸಾಯಂಕಾಲ ಪಟ್ಟಣದ ನಾಗರಿಕರು ಹಾಗೂ ತಾಲೂಕಿನ ಸಹಕಾರಿ ಸಂಘಗಳ ಸದಸ್ಯರು ಅದ್ದೂರಿಯಾಗಿ ಸತ್ಕರಿಸಿದರು. ಸಂಜೆ ಪಟ್ಟಣಕ್ಕೆ ಆಗಮಿಸಿದ ನೂತನ ಅಧ್ಯಕ್ಷರಾದ ಅಪ್ಪಾಸಾಹೇಬ ಕುಲಗುಡೆ ಅವರನ್ನು ವಾದ್ಯಮೇಳದೊಂದಿಗೆ ಸ್ವಾಗತಿಸಿಕೊಂಡ ಪಟ್ಟಣದ ನಾಗರೀಕರು, ನಂತರ ಕುಲಗುಡೆ ತೋಟದಲ್ಲಿ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಸತ್ಕರಿಸಿದರು. ಸತ್ಕಾರ ಸ್ವೀಕರಿಸಿ ಮಾತನಾಡಿದ ಅಪ್ಪಾಸಾಹೇಬ ಕುಲಗುಡೆ ಅವರು, ಜಿಲ್ಲೆಯ ಎಲ್ಲ ಹಿರಿಯ ಮುಖಂಡರ ಸಹಕಾರದಿಂದ ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿ ಅವಿರೋಧ ಆಯ್ಕೆಗೊಂಡಿರುವುದು ಅತ್ಯಂತ ಸಂತೋಷವಾಗಿದೆ. ನನ್ನ ಅಧಿಕಾರವಧಿಯಲ್ಲಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಬಿಡಿಸಿಸಿ ಬ್ಯಾಂಕ್ ಏಳ್ಗೆಗಾಗಿ ಪ್ರಾಮಾಣಿಕ ಸೇವೆ ಸಲ್ಲಿಸುತ್ತೇನೆ. ತಾಲೂಕಿನ ಎಲ್ಲ ಸಹಕಾರಿ ಸಂಘಗಳಿಗೆ ಕೇಂದ್ರ ಬ್ಯಾಂಕ್‌ನಿಂದ ದೊರೆಯುವ ಎಲ್ಲ ಸೌಲಭ್ಯಗಳನ್ನು ಒದಗಿಸುವುದಾಗಿ ಹೇಳಿದರು. ವಕೀಲ ಆರ್.ಎಸ್.ಶಿರಗಾಂವೆ ಮಾತನಾಡಿ, ಬಿಡಿಸಿಸಿ ಅಧ್ಯಕ್ಷರಾದ ಅಪ್ಪಾಸಾಹೇಬ ಕುಲಗುಡೆ ಅವರು 19 ವರ್ಷಗಳಿಂದ ನಿರ್ದೇಶಕರಾಗಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದರಿಂದ ಇಂದು ಕೇಂದ್ರ ಬ್ಯಾಂಕ್ ಅಧ್ಯಕ್ಷರಾಗಿ ಅವಿರೋಧ ಆಯ್ಕೆಯಾಗಿದ್ದಾರೆ. ಅವರ ಅಧಿಕಾರವಧಿಯಲ್ಲಿ ತಾಲೂಕಿನ ಸಹಕಾರಿಗಳಿಗೆ ಹೆಚ್ಚಿನ ಅನುದಾನ ದೊರಕುವಂತಾಗಲಿ ಎಂದು ಶುಭಹಾರೈಸಿದರು. ಅಭಿನಂದನಾ ಸಮಾರಂಭದಲ್ಲಿ ಜಿನ್ನಪ್ಪ ಅಸ್ಕಿ, ಅಣ್ಣಾಸಾಹೇಬ ಕುಲಗುಡೆ, ಅಣ್ಣಾಸಾಹೇಬ ಮೇತ್ರಿ, ರಾಮಣ್ಣ ಗಸ್ತಿ, ಸುನೀಲಗೌಡ ಪಾಟೀಲ, ಕೃಷ್ಣಾ ಕೋಟಿವಾಲೆ, ನಾರಾಯಣ ಮೇತ್ರಿ, ಕಿರಣ ಸಂಕಪಾಳ, ಮಹೇಶ ಕೊರವಿ, ಗೋವಿಂದ ಕುಲಗುಡೆ, ಚನ್ನಪ್ಪ ಯಡವಣ್ಣವರ, ಪಾರೀಶ ಉಗಾರೆ, ಶಿವಪ್ಪ ಕುಲಗುಡೆ, ರವಿ ಮಾಳಿ, ಚನ್ನಮಲ್ಲ ಮಗದುಮ್ಮ, ವಸಂತ ಹೊಸಮನಿ, ಶ್ರೀಧರ ಖಿಚಡೆ, ವಸಂತ ಕುಲಗುಡೆ, ಹಾಜಿ ಮುಲ್ಲಾ, ಫಾರೂಕ ಮೊಮಿನ, ಗಂಗಪ್ಪ ಗೋಕಾಕ, ಸುರೇಶ ಜಂಬಗಿ ಸೇರಿದಂತೆ ಅನೇಕರು ಇದ್ದರು.

## ೨೦ಕ್ಕೆ ಜಿಲ್ಲಾಮಟ್ಟದ ಕಬಡ್ಡಿ ಪಂದ್ಯಾವಳಿ

**ವಿಜಯಪುರ:** ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ ಹಾಗೂ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವಿಜಯಪುರ ಇವರ ಸಂಯುಕ್ತ ಆಶ್ರಯದಲ್ಲಿ ಎಚ್ ಐ ವಿ/ ಏಡ್ಸ್ ಕುರಿತು ಜಾಗೃತಿಗೊಳಿಸಲು ತೀವ್ರ ಐಇಸಿ ಪ್ರಚಾರಾಂದೋಲನಅಂಗವಾಗಿ ಪದವಿ,ಸ್ನಾತಕೋತ್ತರ ಹಾಗೂ ವೃತ್ತಿಪರ ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ (ಪುರುಷರು 18ರಿಂದ 25 ವರ್ಷದೊಳಗಿನ) ಜಿಲ್ಲಾ ಮಟ್ಟದ ಕಬ್ಬಡಿ ಪಂದ್ಯಾವಳಿಯನ್ನು ನವೆಂಬರ್ 20ರಂದು ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.ಭಾಗವಹಿಸುವ ಕಾಲೇಜಿನವರು ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ್ಕೆ ಸಂಪರ್ಕಿಸಿ ನೋಂದಾಯಿಸಿಕೊಳ್ಳಬೇಕು. ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಯಾಣ ಭತ್ಯೆ ನೀಡಲಾಗುವುದು.

# ಜೀವನ ಮನಸ್ಸಿನ ಮೇಲೆ ಅವಲಂಬಿತವಾಗಿದೆ

## ಸಾಮೂಹಿಕ ಭಜನೆ, ಹಾಗೂ ಆಧ್ಯಾತ್ಮಿಕ ಪ್ರವಚನದಲ್ಲಿ ಪ್ರವಚನಕಾರ ನಿರಂಜನ ಮಹಾಸ್ವಾಮಿಗಳು

**ತಾಳಿಕೋಟೆ:** ಮನುಷ್ಯನ ಜೀವನವೆಂಬುದು ಅವನ ಮನಸ್ಸಿನ ಮೇಲೆ ಅವಲಂಬಿತವಾಗಿದ್ದು, ಪವಿತ್ರಜೀವನ ಆನಂದಮಯವಾಗಿ ಕಳೆದರೇ ಸಂತೃಪ್ತಿ ಎಂಬ ಬದುಕಾಗಲಿದೆ ಎಂದು ಖ್ಯಾತ ಆಧ್ಯಾತ್ಮಿಕ ಪ್ರವಚನಕಾರ ನಿರಂಜನ ಮಹಾ ಸ್ವಾಮಿಗಳು ನುಡಿದರು.

ಗುರುವಾರರಂದು ಯೋಗೋತ್ಸವ ಸಮಿತಿ ತಾಳಿಕೋಟೆ ಇವರ ವತಿಯಿಂದ ಸ್ಥಳೀಯ ಕನ್ನಡ ಶಾಲಾ ಮೈಧಾನದಲ್ಲಿ ಏರ್ಪಡಿಸಲಾದ ಸಾಮೂಹಿಕ ಭಜನೆ, ಹಾಗೂ ಆದ್ಯಾತ್ಮೀಕ ಪ್ರವಚನದ 3ನೇ ದಿನದಂದು ಮಾತನಾಡುತ್ತಿದ್ದ ಅವರು ಜೀವನ ಅಶುದ್ಧವಾದಷ್ಟು ದುಃಖಮಯವಾಗಲಿದೆ ಕಾರಣ ಮನಸ್ಸನ್ನು ಶುದ್ಧಮಾಡಿಕೊಳ್ಳಬೇಕೆಂದರು. ಸತ್ಸಂಗ ಮಾಡಿಕೊಂಡು ನಿಸರ್ಗದಲ್ಲಿ ಹೊತ್ತುಗಳೆದು ಜಪ-ತಪ ಮಾಡಿಕೊಂಡು ಹಾಡಿನೊಂದಿಗೆ ಮೌನವಾಗಿರಬೇಕು ಅಂದರೇ ಮನಸ್ಸೆಂಬುದು ಸ್ವಚ್ಛವಾಗಿರುತ್ತದೆಂದರು.

ಮನಸ್ಸೆಂಬುದು ವಿಸ್ತಾರಮಾಡಿಕೊಂಡರೆ ಬ್ರಹ್ಮಾಂಡದಷ್ಟು ದೊಡ್ಡದಾಗಬಹುದು ಸಣ್ಣಮಾತಿಗೆ



ಅಪಮಾನ ಅಂತಹುಗಳಿಗೆ ತಲೆಕೆಡಿಸಿಕೊಳ್ಳಬಾರದು ಅಂತವರಿಗೆ ಮಹಾತ್ಮರೆನ್ನುತ್ತಾರೆಂದರು. ಎಲ್ಲರ ಜೋತೆಗೆ ಸ್ನೇಹಭಾವದಿಂದ ನೋಡಬೇಕು, ನಡೆಯಬೇಕು ಖುಷಿ ಪಡಬೇಕು ಮನಸ್ಸನ್ನು ವಿಸ್ತಾರ ಮಾಡಿದರೆ ವಿಸ್ತಾರವಾಗುತ್ತದೆ ಸಣ್ಣದು ಮಾಡಿದರೆ ಸಣ್ಣದು ಆಗುತ್ತದೆ ಎಂಬುದನ್ನು ಶ್ರೀಗಳು ಭಹು ಮಾರ್ಮಿಕವಾಗಿ ವಿವರಿಸಿದರು.

ಮನಸ್ಸೆಂಬುದಕ್ಕೆ ಸಣ್ಣ ಸಣ್ಣ ವಿಷಯಕ್ಕೆ ತಾಪವಾಗುತ್ತದೆ ಸಣ್ಣ ಘಟನೆಗಳಿಗೆ ಸಣ್ಣ ಮಾತಿಗೆ ತಲೆ ಕೆಡಿಸಿಕೊಳ್ಳಬಾರದು ತಲೆ ಕೆಡಿಸಿಕೊಂಡರೆ ಮನಸ್ಸೆಂಬುದು ಸಣ್ಣದಾಗುತ್ತದೆ ಎಂದರು. ಮನುಷ್ಯರಲ್ಲಿ ಒಳ್ಳೆಯದು ಕೆಟ್ಟದ್ದು ಇರುತ್ತದೆ ಒಳ್ಳೆಯ ದೃಷ್ಟಿಕೋನದಿಂದ ಮನಸ್ಸೆಂಬುದು ದೊಡ್ಡದು ಮಾಡಿಕೊಳ್ಳಿ ಮನಸ್ಸಿನ ಪ್ರವೃತ್ತಿ ಸ್ವಭಾವ ತಿಳಿದುಕೊಂಡು ಅದರ ಪ್ರಭಾವ ಮಾಡಿಕೊಂಡರೆ ಒಳ್ಳೆಯದು ಆಗುತ್ತದೆ ಎಂದರು. ರಾತ್ರಿ, ಹಗಲು ಇದ್ದಂತೆ ಒಳ್ಳೆಯದು ಇದೆ ಕೆಟ್ಟದ್ದು ಇದೆ ಈ ಎರಡೂ ಯಾವಾಗಲೂ ಇದ್ದೇ ಇರುತ್ತದೆ ಒಳ್ಳೆಯದನ್ನು ನೋಡಿದವರ ಜೀವನ ಆನಂದಮಯವಾಗಿರುತ್ತದೆ ಎಂದರು.

ಈ ಜಗತ್ತಿನಲ್ಲಿ ಯಾರೂ ಪರಿಪೂರ್ಣರಿಲ್ಲಾ ಪರಿಪೂರ್ಣರಿದ್ದವನು ಪರಮಾತ್ಮನು ಒಬ್ಬನೇ ಆಗಿದ್ದಾನೆಂದು ತಂದೆಯ ಮಾತು ಕೇಳದೇ ಇದ್ದಂತ ಬಾಲಕಿ ತನ್ನ ಇಚ್ಛೆಯಂತೆ ಮಧುವೆಗೆ ಮುಂದಾಗಿ ಪರಿಪೂರ್ಣತೆಯಾಗಿ ಪರಿಣಮಿಸಲಾರದ್ದರ ಕುರಿತು ಚಿಕ್ಕ ಕಥೆಯೊಂದನ್ನು ಹೇಳಿದ ಶ್ರೀಗಳು ಜಗತ್ತಿನಲ್ಲಿ ಯಾರೂ ಪರಿಪೂರ್ಣರಿಲ್ಲಾವೆಂದರು. ಯಾವುದೇ ಘಟನೆಯಲ್ಲಿ ಒಳ್ಳೆಯದನ್ನೇ ಕಾಣಿ ಎಂದು ಒಬ್ಬ ಕಷ್ಟಪಟ್ಟು ಕಟ್ಟಿದ ಮನೆ ಆತ ಇನ್ನೂ ವಾಸಿಸಲು ಒಳಗೆ ಹೋಗದಿದ್ದಾಗ ಆ ಕಟ್ಟಿದ ಮನೆ ಬಿದ್ದು ಬಿಟ್ಟಿತು ಆತ ಮನೆ ಬಿತ್ತೆಂದು ದುಃಖಿಸಲಿಲ್ಲಾ ಖುಷಿ ಪಟ್ಟು ಎಲ್ಲರಿಗೂ ಸಿಹಿ ಹಂಚುವ ಕಾರ್ಯ ಮಾಡಿದ ಇದನ್ನು ಲಕ್ಷೀಸಿದ ಜನತೆ ಮನೆ ಬಿದ್ದು ವ್ಯರ್ಥ ಹಣ ಹಾಳಾಗಿದೆ ನೀನು ಸಿಹಿ ಹಂಚುತ್ತಿದ್ದಿಯಲ್ಲಾ ಎಂದು ಅನ್ಯರು ಪ್ರಶ್ನೀಸಿದಾಗ ಅದಕ್ಕೆ ಉತ್ತರಿಸಿದ ಆತ ನನ್ನ ಕುಟುಂಬದವರು ಎಲ್ಲರೂ ವಾಸಿಸಲು ಮುಂದಾಗುತ್ತಿದ್ದೇವು ಆದರೆ ಆ ಮನೆ ವಾಸಿಸುವದಕ್ಕಿಂತ ಮುಂಚೆಯೇ ಬಿದ್ದು ಹೋಯಿತು ಇದರಿಂದ ನನ್ನ ಕುಟುಂಭ ಉಳಿದಿದೆ ದೇವರು ದೊಡ್ಡವನಿದ್ದಾನೆಂಬ ಕಾರಣದಿಂದಲೇ ನಾನು ಸಿಹಿ ಹಂಚುತ್ತೇನೆಂದು ಆ ವ್ಯಕ್ತಿ ಖುಷಿ ಪಟ್ಟಿದ್ದರ ಕುರಿತು ಶ್ರೀಗಳು ಚಿಕ್ಕ ಕಥೆಯೊಂದನ್ನು ಹೇಳಿ ಕೆಟ್ಟದನ್ನು ಬಿಟ್ಟು ಒಳ್ಳೆಯದನ್ನು ಕಾಣಎಂದು ತಿಳಿ ಹೇಳಿದರು.

## ರಾಜ್ಯದ ಮೂರು ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು; ರಾಜು ಕಾಗೆ ಭವಿಷ್ಯ



ಮೋಳೆ :ರಾಜ್ಯದ ಮೂರೂ ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸುತ್ತದೆ ಎಂದು ಕಾಗವಾಡ ಶಾಸಕ ರಾಜು ಕಾಗೆ ಭವಿಷ್ಯ ನುಡಿದರು.

ಅವರು ಕಾಗವಾಡ ಮತಕ್ಷೇತ್ರದ 4 ಕೋಟಿ ರೂ. ಅನುದಾನದಲ್ಲಿ ಮಂಜೂರಾದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡುತ್ತಿದ್ದರು.

ರಾಜ್ಯದಲ್ಲಿ ಸಿಎಮ್ ಸಿದ್ಧರಾಮಯ್ಯನವರ ನೇತೃತ್ವದಲ್ಲಿ ಪಂಚ ಗ್ಯಾರಂಟಿಗಳು ಯಶಸ್ವಿಯಾಗಿ ಸಮಾಜದ ಕಟ್ಟ ಕಡೆಯ ವ್ಯಕ್ತಿಗೆ ತಲಪುತ್ತಿದ್ದು ಇದರಿಂದ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳು ಆರ್ಥಿಕವಾಗಿ ಸಧೃಡವಾಗಿವೆ ಎಂದ ಅವರು ಬಿಜೆಪಿ ಮತ್ತು ಜೆಡಿಎಸ್ ಪಕ್ಷದವರು ಕಾಂಗ್ರೆಸ್ ಸರಕಾರದ ವಿರುದ್ಧ ಅಪ ಪ್ರಚಾರ ಮಾಡಿ ಮತದಾರರನ್ನು ಒಲೈಸಿಕೊಳ್ಳುವ ಅವರ ಪ್ರಯತ್ನ ಸಫಲವಾಗುವುದಿಲ್ಲ ಎಂದರು. ಕಾಗವಾಡ ಮತಕ್ಷೇತ್ರದ ಜುಗೂಳ, ಕುಸನಾಳ, ಮೊಳವಾಡ, ಉಗಾರ ಬಿ.ಕೆ, ಮೋಳೆ ಮತ್ತು ಕೃಷ್ಣಾ ಕಿತ್ತೂರ ಗ್ರಾಮಗಳಲ್ಲಿ 4 ಕೋಟಿ ಮೊತ್ತದ ರಸ್ತೆ, ಚರಂಡಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ಅವರು ಸಿಎಮ್ ಸಿದ್ಧರಾಮಯ್ಯ ರಾಜ್ಯದ ಪ್ರತಿ ಕ್ಷೇತ್ರಕ್ಕೆ 20 ಕೋಟಿ ರೂ. ಗಳ ವಿಶೇಷ ಅನುದಾನವನ್ನು ಮಂಜೂರು ಮಾಡಿದ್ದು, ಕೆಲವೇ ದಿನಗಳಲ್ಲಿ ಈ ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನ ಗೊಳಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ಅಭಿಯಂತರ ವೀರಣ್ಣಾ ವಾಲಿ, ಗುತ್ತಿಗೆದಾರರಾದ ಅನೀಲಕುಮಾರ ಸತ್ತಿ, ಅಮಸಿದ್ಧ ಮಂಗಳೂರ, ಸಿದ್ಧಾರೂಡ ನೇಮಗೌಡ, ಶಿವಪುತ್ರ ನಾಯಿಕ,ಎಸ್.ವಿ.ಗಾಡಿವಡ್ಡರ.ಅಭಿಷೇಕ ಗುಡೋಡಗಿ ಮುಖಂಡರಾದ ಅಣ್ಣಾಸಾಹೇಬ ಪಾಟೀಲ, ಕಾಕಾ ಪಾಟೀಲ, ಅನೀಲ ಕಡೋಲಿ, ರಾಜು ಕಡೋಲಿ, ಉಮೇಶ ಪಾಟೀಲ, ಸುರೇಶ ಪಾಟೀಲ, ಶೀತಲಗೌಡ ಪಾಟೀಲ, ರಾಹುಲ ಶಹಾ, ವಿಪುಲ ಪಾಟೀಲ, ವಸಂತ ಖೋತ, ವಿಶ್ವನಾಥ ಪಾಟೀಲ, ರಾಜು ಮದನೆ, ಯಮನಪ್ಪ ಪಾಟೀಲ, ರಾಜು ಹುದ್ದಾರ, ಮಾರುತಿ ಕೊಕಣೆ, ರಾಜು ನಾಂದಣೆ , ಅಜಿತ ಗಡೆಣ್ಣವರ, ಮಲಗೌಡ ಪಾಟೀಲ, ಶಂಕರ ನಿಂಗನೂರೆ, ರವಿ ಜಾಧವ ವಿಕಾಸ ಪಾಂಡರೆ.ರಾಜು ಮುಜಾವರ.ರಾಜು ಅರ್ಜುನವಾಡ. ಅಪ್ಪು ಹುಲಗಬಾಳ.ಮುರಗೇಶ ತ್ರಿಕಾಣಿ.ರಾಜು ವಂಟಿ.ಬಸವೇಶ್ವರ ಪಾಟೀಲ.ಈರ್ಶಾದ ಅಲಾಸೆ.ಜಾವೇದ ಕುಡಚಿ.ಖಾಜುರ ಅಲಾಸೆ.ಚಿದಾನಂದ ಒಂಟಿ.ಭೀಮು ಒಂಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ನ.23 ರಂದು ಉಪಚುನಾವಣೆ: ಶಸ್ತ್ರಾಸ್ತ್ರಗಳನ್ನು ಜೊತೆಗಿಟ್ಟುಕೊಂಡು ತಿರುಗಾಡುವುದನ್ನು ನಿಷೇಧ

ಬೆಳಗಾವಿ : ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಖಾಲಿ ಸ್ಥಾನಗಳ ಆಯ್ಕೆಯ ಉಪಚುನಾವಣೆಯನ್ನು ನ.23 ರಂದು ಜರುಗಲಿದೆ.

ಈ ಹಿನ್ನಲೆಯಲ್ಲಿ ಚುನಾವಣೆಯ ಸಮಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮುಕ್ತ ಮತದಾನ ನಡೆಸಲು ಭಾರತೀಯ ಶಸ್ತ್ರಾಸ್ತಗಳ ಕಾಯ್ದೆ,1959 ರಡಿ ಸಂಕೇಶ್ವರ ಪುರಸಭೆ, ನಿಪ್ಪಾಣಿ ನಗರಸಭೆ, ನಾಗನೂರ ಪಟ್ಟಣ ಪಂಚಾಯತಿಗಳ ವ್ಯಾಪ್ತಿಯಲ್ಲಿ ಚುನಾವಣೆಯ ಸಮಯದಲ್ಲಿ ಲೈಸೆನ್ಸ್‌ದಾರರು ಆಯುಧ ಅಥವಾ ಶಸ್ತ್ರಾಸ್ತ್ರಗಳನ್ನು ಜೊತೆಗಿಟ್ಟುಕೊಂಡು ತಿರುಗಾಡುವುದನ್ನು ನಿಷೇದಿಸಿ ಜಿಲ್ಲಾಧಿಕಾರಿಗಳು ಆದೇಶವನ್ನು ಹೊರಡಿಸಿದ್ದಾರೆ.

ಸದರಿ ಆದೇಶವನ್ನು ಉಲ್ಲಂಘಿಸಿದವರ ವಿರುದ್ಧ ಭಾರತೀಯ ದಂಡ ಪ್ರಕ್ರಿಯೆ ಸಂಹಿತರ ಕಾಯ್ದೆ, 1973 ಹಾಗೂ ಪ್ರಜಾಪ್ರತಿನಿಧಿ ಕಾಯ್ದೆ,1951 ರ ಕೆಳಗೆ ದಂಡನೆಗೆ ಗುರಿಪಡಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಮುಧೋಳ: ನಗರದ ಅರಳಿಕಟ್ಟಿ ಸಮೂಹ ಸಂಸ್ಥೆ ಅಧ್ಯಕ್ಷ ಡಾ.ತಿಮ್ಮಣ್ಣ ವಿ. ಅರಳಿಕಟ್ಟಿ ಅವರಿಗೆ ಸಿಂಗಾಪೂರದಲ್ಲಿ ಇತ್ತಿಚಿಗೆ ಜರುಗಿದ ವಿಶ್ವ ಕನ್ನಡ ಹಬ್ಬ ಸಮಾರಂಭದಲ್ಲಿ ಪ್ರಸಕ್ತ ಸಾಲಿನ ಅಂತರಾಷ್ಟ್ರೀಯ ವಿಶ್ವ ಮಾನ್ಯ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಟಿ. ಶರವಣ, ಇಸ್ರೋ ಮಾಜಿ ಅಧ್ಯಕ್ಷ ಕಿರಣಕುಮಾರ ಇತರರಿದ್ದರು.**

# ಅಸಂವಿಧಾನಿಕ ವಕ್ಫ್ ರದ್ದುಪಡಿಸಲು ಸರ್ವರೂ ಒಗ್ಗೂಡುವುದು ಅವಶ್ಯ

**ಬೆಳಗಾವಿ:** ವಕ್ಫ್ ಕಾಯ್ದೆಯು ಮುಸ್ಲಿಂ ಮತ್ತು ಕುರಾನ್ ನಿಯಮಗಳಿಗೂ ಒಗ್ಗುವುದಿಲ್ಲ. ಅದು ಅಲ್ಲದೆ ಅಮಾನವೀಯ, ಹೀನ ಮತ್ತು ಕೌರ್ಯ ಮೆರೆಯುವ ಈ ವಕ್ಫ್ ಕಾಯ್ದೆ ಅಸಂವಿಧಾನಿಕವಾಗಿದೆ. ಈ ವಕ್ಫ್ ಕಾಯ್ದೆಗೆ ಶೀಘ್ರ ರದ್ದು ಪಡಿಸುವ ಅವಶ್ಯಕತೆಯಿದೆ ಎಂದು ಕೊಲ್ಲಾಪುರ ಕನೇರಿಮಠದ ಅದೃಶ್ಯ ಕಾಡಸಿದ್ದೇಶ್ವರಮಠದ ಸ್ವಾಮೀಜಿ ಹೇಳಿದರು.




ವಕ್ಫ್ ಮಂಡಳಿ ವಿರುದ್ಧ ಬೆಳಗಾವಿ ನಗರದ ಧರ್ಮವೀರ ಸಂಭಾಜಿ ಉದ್ಯಾನದಲ್ಲಿ ನಾಗರಿಕ ಹಿತರಕ್ಷಣಾ ಸಮಿತಿ ನೇತೃತ್ವದಲ್ಲಿ ಮಂಗಳವಾರ ಜರುಗಿದ ಬೃಹತ್ ಜನಜಾಗೃತಿ ಸಭೆಯಲ್ಲಿ ಅವರು ಮಾತನಾಡಿದರು.

ಬ್ರಿಟಿಷರು ಜಾರಿಗೆ ತಂದ ಈ ಕಾಯ್ದೆಯು ಸ್ವಾತಂತ್ರ್ಯ ನಂತರದ ಕಾಲದಲ್ಲಿ ಮುಸ್ಲಿಂ ಓಲೈಕೆ ರಾಜಕಾರಣದ ಪರಿಣಾಮ ಬಹಳಷ್ಟು ತಿದ್ದುಪಡಿಗಳಿಗೆ ಒಳಗಾಗಿ ಈ ಮಟ್ಟಕ್ಕೆ ಶಕ್ತಿಶಾಲಿಯಾಗಿದೆ. ನರಸಿಂಹರಾವ್ ಅವರ ಆಡಳಿತ ಮತ್ತು ಮನಮೋಹನ ಸಿಂಗ್ ಅವರ ಆಡಳಿತದಲ್ಲಿ ಈ ಕಾಯ್ದೆಗೆ ಹೊಸ ನಿಯಮಗಳನ್ನು ಸೇರ್ಪಡೆಗೊಳಿಸಿದ ಪರಿಣಾಮ ಈ ದುಸ್ಥಿತಿ ರೈತರಿಗೆ ಬಂದಿದೆ ಎಂದರು.

ವಕ್ಫ್ ಮಂಡಳಿಯಲ್ಲಿ ಓರ್ವ ಸಂಸದ, ಎಂಎಲ್‌ಎ, ಜಿಲ್ಲಾಧಿಕಾರಿ, ನಿವೃತ್ತ ಐಎಎಸ್ ಅಧಿಕಾರಿ, ಗುಮಾಸ್ತ ಮತ್ತು ನಿರ್ವಾಹಕ ಸೇರಿದಂತೆ ಓರ್ವ ಮುಸ್ಲಿಂ ಪರ್ಸನಲ್ ಕಾನೂನು ಪರಿಣಿತ ವ್ಯಕ್ತಿ ಒಟ್ಟು ಏಳು ಜನರು ಸದಸ್ಯರಾಗಿರುತ್ತಾರೆ. ಈ ಮಂಡಳಿಯಲ್ಲಿ ಮುಸ್ಲಿಂಯೇತರರಿಗೆ ಮತ್ತು ಮುಸ್ಲಿಂ ಮಹಿಳೆಯರಿಗೆ ಸ್ಥಾನವಿಲ್ಲ. ಶಿಯಾ ಮತ್ತು ಸುನ್ನಿ ಹೊರತಾಗಿ ಉಳಿದ ಮುಸ್ಲಿಂ ಉಪಜಾತಿ ಜನರಿಗೆ ಈ ವಕ್ಫ್‌ದಿಂದ ಯಾವುದೆ ಲಾಭವಿಲ್ಲ. ಈ ಬಗೆಯ ಅಸಂವಿಧಾನಿಕ ನಿಯಮಗಳ ಪರಿಣಾಮದಿಂದ ವಕ್ಫ್ ಮಂಡಳಿ ಹುಚ್ಚಾಟ ನಡೆಸಿದೆ ಎಂದರು.

ಅಕ್ಬರ್ ಕಾಲದಲ್ಲಿ ಅವರ ಕುರಿ ಓಡಾಡಿದ್ದು, ಔರಂಗಜೇಬ್ ಅರಮನೆಯ ಕುದರೆ ಓಡಾಡಿದ್ದು ಎಂತೆಲ್ಲಾ ಪಿಳ್ಳೆ ನೆಪಗಳನ್ನು ತಿಳಿಸಿ, ಜಮೀನುಗಳನ್ನು ಕಬಳಿಸಲಾಗುತ್ತಿದೆ. ಹೀಗೆ ವಕ್ಫ್ ಕೆಲಸ ಮಾಡುತ್ತಿರುವ ದುಷ್ಪರಿಣಾಮದಿಂದ ನಾಡಿನ ಮಠ, ಮಂದಿರ ಮತ್ತು ಕೃಷಿ ಭೂಮಿಯನ್ನು ಒತ್ತುವರಿ ಮಾಡಿಕೊಳ್ಳಲಾಗುತ್ತಿದೆ ಎಂದರು. ಕ್ರೈಸ್ತ, ಪಾರ್ಸಿ ಮತ್ತು ಜೈನ್ ಸೇರಿದಂತೆ ಉಳಿದ ಅಲ್ಪಸಂಖ್ಯಾತ ಮತಗಳಿಗೆ ನೀಡದ ವಿಶೇಷ ಸವಲತ್ತು ಕೇವಲ ಮುಸ್ಲಿಂಗೆ ಏಕೆ ಸರ್ಕಾರ ನೀಡಿದೆ. ಇದು ತುಷ್ಟಿಕರಣದ ನೀತಿಯಾಗಿದೆ ಎಂದು ಸರ್ಕಾರದ ನೀತಿಗಳನ್ನು ಖಂಡಿಸಿದರು. ಹುಕ್ಕೇರಿಯ ಹಿರೇಮಠದ ಚಂದ್ರಶೇಖರ ಸ್ವಾಮೀಜಿ ಮಾತನಾಡಿ, ನಾಡಿನ ಅನ್ನದಾತರು ರೈತರು ಸಮಸ್ಯೆಗೆ ಎಲ್ಲ ಮಠಗಳ ಸ್ವಾಮೀಜಿಗಳು ಒಗ್ಗೂಡಿ ಹೋರಾಟ ಮಾಡುತ್ತಿದ್ದೇವೆ. ರೈತರಿಗೆ ಸಂಕಷ್ಟ ನೀಡುವುದು ಸೂಕ್ತವಲ್ಲ ಎಂದು ಸರ್ಕಾರದ ನೀತಿಗಳನ್ನು ಅವರು ಖಂಡಿಸಿದರು.

ಸನಾತನ ಬೋರ್ಡ್ ಸ್ಥಾಪನೆಗೆ ಒತ್ತಾಯ: ವಕ್ಫ್ ಮಾದರಿಯಲ್ಲಿ ಸನಾತನ ಬೋರ್ಡ್ ಸ್ಥಾಪನೆಗೆ ಸರ್ಕಾರ ಮುಂದಾದರೆ, ನಾವು ಸನಾತನಿಗಳು ಅಟಕ್‌ದಿಂದ ಕಟಕ್‌ವರೆಗೆ ಅಂದರೆ ಇರಾನ್, ಇರಾಕ್ ಅಫಘಾನಿಸ್ತಾನ, ಪಾಕಿಸ್ತಾನ ಈ ಎಲ್ಲಾ ಭೂಮಿ ಭಾರತಕ್ಕೆ ಸೇರ್ಪಡೆಗೊಳ್ಳವವು. ಸನಾತನಿ ಬೋರ್ಡ್ ಸ್ಥಾಪನೆಗೊಂಡಲ್ಲಿ ನಾವು ಕೂಡಾ ಸಾಮ್ರಾಟ್ ಅಶೋಕ, ಇಮ್ಮಡಿ ಪುಲಕೇಶಿ, ಹರ್ಷವರ್ಧನ ಈ ರಾಜರ ಆಡಳಿತ ಕಾಂಬೋಡಿಯಾದವರೆಗೆ ಹಬ್ಬಿತ್ತು. ಪ್ರಪಂಚದ ಎಲ್ಲ ಖಂಡಗಳಲ್ಲಿ ಸಾಂಸ್ಕೃತಿಕವಾಗಿ ಭಾರತವು ತನ್ನ ಪ್ರಭಾವ ಬೀರಿರುವುದನ್ನು ಕಾಣುತ್ತೇವೆ. ಆ ಎಲ್ಲ ಖಂಡಗಳು ಸನಾತನ ಬೋರ್ಡ್ ವ್ಯಾಪ್ತಿಗೆ ಬರುತ್ತಾವೆ ಎಂದರು. ಹಿಂದುಗಳಿಗೆ ಶತ್ರು ಹಿಂದುಗಳೆ: ಅನಾದಿ ಕಾಲದಿಂದ ಹಿಂದುಗಳು ಸೋಲನ್ನು ಹಿನ್ನೆಡೆಯನ್ನು ಅನ್ಯರಿಗಿಂತ ಉಳಿದ ಹಿಂದುಗಳ ಕುತಂತ್ರವೇ ಕಾರಣವಾಗಿದೆ. ಆದ್ದರಿಂದ ಹಿಂದುಗಳು ಒಗ್ಗೂಡಿ ಹೋರಾಟ ನಡೆಸಿದರೆ ಯಾವುದೆ ಸರ್ಕಾರವನ್ನು ಕೂಡಾ ಮಣಿಸಬಹುದು ಎಂದರು.

ನಾಗರಿಕ ಹಿತರಕ್ಷಣಾ ಸಮಿತಿಯ ಸದಸ್ಯ ರೋಹಿತ ಉಮನಾದಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ರೋಹನ ಜುವಳಿ ಸ್ವಾಗತಿಸಿದರು. ಶಿವಾಜಿ ಶಹಾಪುರಕರ ವಂದಿಸಿದರು. ಡಾ. ಬಸವರಾಜ ಭಾಗೋಜಿ ಮತ್ತು ವಿನೋದ ನಿರೂಪಿಸಿದರು.

# ವಿರೂಪಾಕ್ಷ ದೇವರ ಪುರಪ್ರವೇಶ, ಪೀಠಾರೋಹಣ



**ಚಿಕ್ಕೋಡಿ:** ತಾಲೂಕಿನ ಕಮತೇನಟ್ಟಿ ಗ್ರಾಮದಲ್ಲಿ ಲಿಂ, ಶ್ರೀ ಮ,ನಿ,ಪ್ರ,ಸ್ವ, ಶಿವಪ್ರಭು ಮಹಾಸ್ವಾಮಿಗಳವರಿಂದ ಸ್ಥಾಪಿತವಾದ ಹೊರಗಿನ ವಿರಕ್ತ ಮಠದ ನಿಯೋಜಿತ ಶ್ರೀಗಳಾದ ಶ್ರೀಮ,ನಿ,ಪ್ರ,ಸ್ವ,ವಿರುಪಾಕ್ಷ ಮಹಾಸ್ವಾಮಿಗಳು ಶ್ರೀ ಕುಮಾರೇಶ್ವರ ಹೊಸಮಠ ಘಟಪ್ರಭಾ ಪರಮಪೂಜ್ಯರ ಪುರ ಪ್ರವೇಶ ಹಾಗೂ ಪೀಠಾರೋಹಣ ಕಾರ್ಯಕ್ರಮದಲ್ಲಿ ಜಗದ್ಗುರು ಪಂಚಮ ಶಿವಲಿಂಗೇಶ್ವರ ಮಹಾಸ್ವಾಮಿಗಳು ಸಿದ್ಧ ಸಂಸ್ಥಾನ ಮಠ ನಡೆಸೋಶಿ, ನೀಲಕಂಠ ಮಹಾಸ್ವಾಮಿಗಳು ಶ್ರೀ ಮಹಾಂತ ದುರದುಂಡೇಶ್ವರ ಮಠ ಮುರಗೋಡ, ಸಂಪಾದನ ಮಹಾಸ್ವಾಮಿಗಳು ಜಗದ್ಗುರು ಸಂಪಾದನಾ ಚರಮೂರ್ತಿ ಮಠ ಚಿಕ್ಕೋಡಿ,ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು ಗುಬ್ಬಲಗುಡ್ಡ ಕೆಂಪಯ್ಯ ಸ್ವಾಮಿ ಮಠ ಘಟಪ್ರಭಾ, ಗುರುದೇವ್ ದೇವರು ಪ್ರಭುಲಿಂಗೇಶ್ವರ ಮಠ ಕಮತೇನಟ್ಟಿ, ಹಾಗೂ ಶ್ರೀಮಠದ ಸರ್ವ ಸದ್ಭಕ್ತರು ಸಮ್ಮುಖದಲ್ಲಿ ನಡೆದ ಕಾರ್ಯಕ್ರಮ ನಡೆಯಿತು.ಈ ಸಂದರ್ಭದಲ್ಲಿ ಕನ್ನಡ ರಕ್ಷಣಾ ವೇದಿಕೆ ಸಂಘಟನೆಯ ರಾಜ್ಯಾಧ್ಯಕ್ಷರಾದ ಡಾ.ಕೆಂಪಣ್ಣ ಚೌಕಶಿ, ಬೆಳಗಾವಿ ಜಿಲ್ಲಾ ಉಪಾಧ್ಯಕ್ಷರಾದ ಮಾರುತಿ ಚೌಕಸಿ,ಗೋಕಾಕ್ ತಾಲೂಕ ಉಪಾಧ್ಯಕ್ಷರಾದ ಬಸವರಾಜ್ ಹುಬ್ಬಳ್ಳಿ, ಗೋಕಾಕ್ ತಾಲೂಕ ಗೌರವ ಅಧ್ಯಕ್ಷರಾದ ತಮ್ಮಣ್ಣ ಅರಭಾವಿ, ಗೋಕಾಕ್ ತಾಲೂಕ ಪ್ರಧಾನ ಕಾರ್ಯದರ್ಶಿಯಾದ ಸದಾಶಿವ್ ಸಂಪಗಾರ್, ಬೆಳಗಾವಿ ಜಿಲ್ಲಾ ಯುವ ಘಟಕದ ಅಧ್ಯಕ್ಷರಾದ ಶಶಿಧರ್ ಚೌಕಶಿ, ದುಂಡಪ್ಪ ನಾಯಕ್, ಬಾಹುಬಲಿ, ಮಲ್ಲಪ್ಪ ಅಟ್ಟಿಮಿಟ್ಟಿ,ಚೇತನ್ ಚೌಕಶಿ ಹಾಗೂ ಸಂಘಟನೆಯ ಪದಾಧಿಕಾರಿಗಳಿಂದ ಸತ್ಕರಿಸಿ ಸನ್ಮಾನಿಸಲಾಯಿತು.



ರಬಕವಿ ಬನಹಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜವಾಹರಲಾಲ ನೆಹರು ಅವರ ಜಯಂತ್ಯುತ್ಸವದ ಚಿ ಪ್ರಾಚಾರ್ಯ ಚೇತನ ಡಾಗಾ, ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಪೂಜೆ ಸಲ್ಲಿಸಿದರು. ಎಸ್.ಆರ್.ಹಂದಿಗುಂದ, ಮಹಾಂತೇಶ ರೆಡ್ಡೆರಟ್ಟಿ, ದೀಪಾ ಜಾಗೀರದಾರ, ರಾಜಶೇಖರ ಬೀಳಗಿ, ಸಂಗಮೇಶ ಗುಟ್ಲಿ ಸೇರಿದಂತೆ ಅನೇಕರು ಇದ್ದರು.

## ಜುಡೋ ಮಿನಿ ಒಲಂಪಿಕ್:ಒಂದೇ ಗರಡಿಮನೆಯಿಂದ 7 ಜನ ರಾಜ್ಯಮಟ್ಟಕ್ಕೆ ಆಯ್ಕೆ



**ರಬಕವಿ–ಬನಹಟ್ಟಿ** : ಬೆಂಗಳೂರಿನ ಕಂಠೀರವ ಸ್ಟೇಡಿಯಂನಲ್ಲಿ ಇಂದಿನಿಂದ (ದಿ.15, ಶುಕ್ರವಾರ) ಜರುಗಿದ ರಾಜ್ಯ ಸರ್ಕಾರದ ಮಿನಿ ಓಲಂಪಿಕ್‌ಗೆ 14 ವಯೋಮಿತಿಯೊಳಗಿನ ಬಾಗಲಕೋಟೆ ಜಿಲ್ಲಾ ಅಸೋಸಿಯೇಶನ್‌ದಿಂದ ರಬಕವಿ–ಬನಹಟ್ಟಿ ತಾಲೂಕಿನ ಬನಹಟ್ಟಿಯ ಸೋಮವಾರ ಪೇಟೆ ಸಮಸ್ತ ದೈವ ಮಂಡಳಿಯ ಒಂದೇ ಗರಡಿಮನೆಯಿಂದ 7 ಜನ ಕ್ರೀಡಾಪಟಗಳು ಕಣದಲ್ಲಿರುವದು ವಿಶೇಷ.

ಸದಾಶಿವ ತುಂಗಳ(25ಕೆಜಿ), ಶ್ರೀಮಂತ ಕಪರಟ್ಟಿ(45ಕೆಜಿ), ಅನಸ್ ಅಪರಾಧ(50ಕೆಜಿ), ಕಾರ್ತಿಕ ಮಡ್ಡಿ(55ಕೆಜಿ), ಆದಿತ್ಯ ಹಟ್ಟಿ ಪಾಟೀಲ(60ಕೆಜಿ), ಮಹಾದೇವ ಭುಜರುಕ್(66ಕೆಜಿ), ಪ್ರಫಿತ್ ಅಜ್ಜಪ್ಪಗೋಳ(66ಕೆಜಿ) ರಾಜ್ಯಮಟ್ಟದ ಕ್ರೀಡೆಯಲ್ಲಿ ಪಾಲ್ಗೊಳ್ಳಲಿದ್ದಾರೆ,

ಹಿರಿಯ ತರಬೇತು(ವಸ್ತಾದ)ದಾರರಾದ ಕಾಡಪ್ಪ ಜಿಡ್ಡಿಮನಿ, ತಮ್ಮಣ್ಣಿ ನಾಯಕ, ಗುರುಪಾದ ಕತ್ತಿ, ಬಂದೇನವಾಜ್ ಅಪರಾಧ, ಕಾಡಪ್ಪ ಮಹಿಷವಾಡಗಿ, ರಮೇಶ ಜಿಡ್ಡಿಮನಿ ಕ್ರೀಡಾಪಟುಗಳಿಗೆ ತರಬೇತಿ ನೀಡುವಲ್ಲಿ ಯಶಸ್ವಿ ಕಂಡು ಇಷ್ಟೊಂದು ಕುಸ್ತಿಪಟುಗಳನ್ನು ರಾಜ್ಯಮಟ್ಟಕ್ಕೆ ಏಕಕಾಲಕ್ಕೆ ಆಯ್ಕೆಯಲ್ಲಿ ಪ್ರಮುಖ ಕಾರಣವಾಗಿದೆ.

****

## ಜುಡೋ ಮಿನಿ ಒಲಂಪಿಕ್:ಒಂದೇ ಗರಡಿಮನೆಯಿಂದ 7 ಜನ ರಾಜ್ಯಮಟ್ಟಕ್ಕೆ ಆಯ್ಕೆ



**ರಬಕವಿ–ಬನಹಟ್ಟಿ,** : ಬೆಂಗಳೂರಿನ ಕಂಠೀರವ ಸ್ಟೇಡಿಯಂನಲ್ಲಿ ಇಂದಿನಿಂದ (ದಿ.15, ಶುಕ್ರವಾರ) ಜರುಗಿದ ರಾಜ್ಯ ಸರ್ಕಾರದ ಮಿನಿ ಓಲಂಪಿಕ್‌ಗೆ 14 ವಯೋಮಿತಿಯೊಳಗಿನ ಬಾಗಲಕೋಟೆ ಜಿಲ್ಲಾ ಅಸೋಸಿಯೇಶನ್‌ದಿಂದ ರಬಕವಿ–ಬನಹಟ್ಟಿ ತಾಲೂಕಿನ ಬನಹಟ್ಟಿಯ ಸೋಮವಾರ ಪೇಟೆ ಸಮಸ್ತ ದೈವ ಮಂಡಳಿಯ ಒಂದೇ ಗರಡಿಮನೆಯಿಂದ 7 ಜನ ಕ್ರೀಡಾಪಟಗಳು ಕಣದಲ್ಲಿರುವದು ವಿಶೇಷ.

ಸದಾಶಿವ ತುಂಗಳ(25ಕೆಜಿ), ಶ್ರೀಮಂತ ಕಪರಟ್ಟಿ(45ಕೆಜಿ), ಅನಸ್ ಅಪರಾಧ(50ಕೆಜಿ), ಕಾರ್ತಿಕ ಮಡ್ಡಿ(55ಕೆಜಿ), ಆದಿತ್ಯ ಹಟ್ಟಿ ಪಾಟೀಲ(60ಕೆಜಿ), ಮಹಾದೇವ ಭುಜರುಕ್(66ಕೆಜಿ), ಪ್ರಫಿತ್ ಅಜ್ಜಪ್ಪಗೋಳ(66ಕೆಜಿ) ರಾಜ್ಯಮಟ್ಟದ ಕ್ರೀಡೆಯಲ್ಲಿ ಪಾಲ್ಗೊಳ್ಳಲಿದ್ದಾರೆ,

ಹಿರಿಯ ತರಬೇತು(ವಸ್ತಾದ)ದಾರರಾದ ಕಾಡಪ್ಪ ಜಿಡ್ಡಿಮನಿ, ತಮ್ಮಣ್ಣಿ ನಾಯಕ, ಗುರುಪಾದ ಕತ್ತಿ, ಬಂದೇನವಾಜ್ ಅಪರಾಧ, ಕಾಡಪ್ಪ ಮಹಿಷವಾಡಗಿ, ರಮೇಶ ಜಿಡ್ಡಿಮನಿ ಕ್ರೀಡಾಪಟುಗಳಿಗೆ ತರಬೇತಿ ನೀಡುವಲ್ಲಿ ಯಶಸ್ವಿ ಕಂಡು ಇಷ್ಟೊಂದು ಕುಸ್ತಿಪಟುಗಳನ್ನು ರಾಜ್ಯಮಟ್ಟಕ್ಕೆ ಏಕಕಾಲಕ್ಕೆ ಆಯ್ಕೆಯಲ್ಲಿ ಪ್ರಮುಖ ಕಾರಣವಾಗಿದೆ.

***



ಈಚೆಗೆ ಔರಂಗಾಬಾದ್‌ನಲ್ಲಿ ಭಾರತೀಯ ವೈದ್ಯಕೀಯ ಅಶೋಸಿಯೇನ್‌ನಿಂದ ಜರುಗಿದ 20 ಕಿ.ಮೀ. ಸೈಕಲ್ ರೇಸ್‌ನಲ್ಲಿ ರಬಕವಿ–ಬನಹಟ್ಟಿಯ ಡಾ. ಸೋಮನಾಥ ಬಡೇಮಿ ಬೆಳ್ಳಿ ಹಾಗು ಡಾ. ಪದ್ಮಜೀತ ನಾಡಗೌಡ ಪಾಟೀಲ ಕಂಚಿನ ಪಡೆದು ಸಾಧನೆ ಮಾಡಿದ್ದಾರೆ.

## 20 ರಂದು ಲೋಕಾಯುಕ್ತರಿಂದ ಜನಸಂಪರ್ಕ ಸಭೆ

**ಬಾಗಲಕೋಟೆ:** : ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ನವೆಂಬರ 20 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ವರೆಗೆ ಬಾಗಲಕೋಟೆ ತಾಲೂಕಾ ಪಂಚಾಯತ ಕಾರ್ಯಾಲಯದಲ್ಲಿ ಜನಸಂಪರ್ಕ ಸಭೆ ಹಮ್ಮಿಕೊಂಡಿದ್ದಾರೆ.

ಸಾರ್ವಜನಿಕರು ಸರ್ಕಾರಿ ಕೆಲಸಗಳಲ್ಲಿ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿನಾಕಾರಣ ವಿಳಂಬ ಹಾಗೂ ಇನ್ನಿತರ ತೊಂದರೆ ಆಗಿದ್ದರೆ ಅಂತಹ ಅಧಿಕಾರಿ ಮತ್ತು ನೌಕರರ ವಿರುದ್ದ ಸಾರ್ವಜನಿಕರು ಸಭೆಗೆ ಹಾಜರಾಗಿ ಲಿಖಿತ ದೂರುಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂಸಂ.08354–236200, 295170ಗೆ ಸಂಪರ್ಕಿಸುವಂತೆ ಲೋಕಾಯುಕ್ತ ಪೋಲೀಸ್ ಅಧೀಕ್ಷಕ ಸತೀಶ ಚಿಟಗುಬ್ಬಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಮಕ್ಕಳೆ ಅಧ್ಯಕ್ಷರು ಮಕ್ಕಳೆ ಅತಿಥಿಗಳು

# ಕಲಿತ ಶಾಲೆ ಋಣ ತೀರಿಸೋಣ: ವಿದ್ಯಾರ್ಥಿ ಅರುಣ

**ಜಮಖಂಡಿ:** ಮಕ್ಕಳಾದ ನಾವು ಒಳ್ಳೆಯ ನಡೆನುಡಿಗಳನ್ನು ರೂಢಿಸಿಕೊಂಡು, ಇಷ್ಟಪಟ್ಟು ಕಲಿತ ಶಾಲೆ ಋಣವನ್ನು ತೀ–ರಿಸಬೇಕು ಎಂದು ಶಾಲಾ ಪ್ರಧಾನ ಕಾರ್ಯದರ್ಶಿ ವಿದ್ಯಾರ್ಥಿ ಅರುಣ ಶಿಂಧೆ ಹೇಳಿದರು.

ತಾಲೂಕಿನ ಕುಂಬಾರಹಳ್ಳ ಸರಕಾರಿ ಪ್ರೌಢ ಶಾಲೆಯಲ್ಲಿ ಮಕ್ಕಳ ದಿನಾಚರಣೆ ವಿಶೇಷ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ವಿದ್ಯಾರ್ಥಿ ನಮ್ಮ ಮೇಲಿನ ಪ್ರೀತಿಯಿಂದ ಗುರುವೃಂದ ನಡೆಸಿದ ವಿವಿಧ ಸ್ಪರ್ಧೆಗಳು ಮತ್ತು ಸಭಾಕಾರ್ಯಕ್ರಮ ನಮ್ಮಲ್ಲಿ ಹೊಸ ಉತ್ಸಾಹ ಮೂಡಿಸಿದೆ. ಶಿಕ್ಷಕರ ಶಿಕ್ಷಣ ವ್ಯವಸ್ಥೆಗೆ ನಮ್ಮ ಮನೆ ಪಕ್ಕದ ಮಕ್ಕಳಲ್ಲಿ ಶಿಕ್ಷಣ ಆಸಕ್ತಿ ಹೆಚ್ಚಾಗುತ್ತಿದೆ ಎಂದರು.




ಮುಖ್ಯಅತಿಥಿ ಸ್ಥಾನ ವಹಿಸಿದ್ದ ವಿದ್ಯಾರ್ಥಿನಿ ಪ್ರತಿನಿಧಿ ಕಲಾವತಿ ಪೂಜಾರಿ ಮಾತನಾಡಿ, ಇಂಥಹ ಗುರುಗಳನ್ನು ಪಡೆದ ನಾವೆಲ್ಲರೂ ಧನ್ಯರು. ನಾವು ಊರಿಗೆ, ಗುರುಗಳಿಗೆ, ತಂದೆ ತಾಯಿಗಳಿಗೆ ಕೀರ್ತಿ ತರಬೇಕು. ನೆಹರು ಅವರ ಆದರ್ಶವನ್ನು ಅಳವಡಿಸಿಕೊಳ್ಳಬೇಕು. ನೆಹರುರವರ ಮಗಳಾದ ಇಂದಿರಾಗಾಂಧಿ ಯವರಂತೆ ಆಗಬೇಕೆಂದರು.

ಶಾಲಾ ಸಾಂಸ್ಕೃತಿಕ ಮಂತ್ರಿ ನಿಂಗವ್ವ ಮರನೂರ ಮಾತನಾಡಿ, ಇಂಥ–ಹ ದಿನೋತ್ಸವಗಳು ನಮ್ಮಲ್ಲಿ ಜವಾಬ್ದಾರಿ ಹೆಚ್ಚಿಸುತ್ತವೆ. ಗುರಿ ಮುಟ್ಟಲು ಆತ್ಮಸ್ಥೆರ್ಯ ಹೆಚ್ಚಿಸುವ ನಿಟ್ಟಿನಲ್ಲಿ ನಮ್ಮ ನೆಚ್ಚಿನ ಶಿಕ್ಷಕರು ಜವಾಬ್ದಾರಿಯಿಂದ ಸೇವೆ ಸಲ್ಲಿಸುತ್ತಿದ್ದಾರೆ ಎಂದರು. ವಿದ್ಯಾರ್ಥಿ ಪ್ರತಿನಿಧಿಗಳಾದ ಸಾಗರ ಕುರಣಿ, ರಾಹುಲ ಬಣಕಾರ, ಲಕ್ಷ್ಮಣ ನಾವಿ, ರಾಗಿಣಿ ಚಿಕ್ಕಲಕಿ, ವಿನಾಯಕ ಐನಾಪುರ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಮಕ್ಕಳಿಗಾಗಿ ಏರ್ಪಡಿಸಿದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಲಾಯಿತು. ಮಕ್ಕಳು ಹಾಡು, ಕವಿತೆ, ನಾಟಕ, ನರ್ತನ, ಭರತನಾಟ್ಯದ ಮೂಲಕ ತಮ್ಮ ಪ್ರತಿಭೆ ಪ್ರದರ್ಶಿಸಿದರು. ಮಕ್ಕಳ ರಕ್ಷಣಾ ಕ್ಲಬ್ ಉದ್ಘಾಟಿಸುವ ಮೂಲಕ ಸಲಹಾ ಪೆಟ್ಟಿಗೆಯನ್ನು ಮಕ್ಕಳಿಗೆ ಹಸ್ತಾಂತ–ರಿಸಲಾಯಿತು.

ಮುಖ್ಯಶಿಕ್ಷಕ ನಾರಾಯಣ ಶಾಸ್ತ್ರಿ, ಶಿಕ್ಷಕರಾದ ಸಂಜೀವ ಝುಂಬುರೆ, ಸಂಗನಬಸವ ಉಟಗಿ, ಶಾರದಾ ಮಠ, ಬಾಹುಬಲಿ ಮುತ್ತೂರ, ಆಸೀಪಾಭಾನು ಮೋಮಿನ, ಸವಿತಾ ಬೆನಕಟ್ಟಿ, ಚಂದ್ರಕಾಂತ ಪೊಲೀಸ ಸಹಿತ ಹಲವರು ಇದ್ದರು.

## ರಾನಡೆ ಸಂಸ್ಥೆಗೆ ವಿದ್ಯಾರ್ಥಿಗಳಿಗೆ ರಾಷ್ಟ್ರಮಟ್ಟದ ಪ್ರಶಸ್ತಿ

**ಜಮಖಂಡಿ:** ಗದಗದ ಸಾಂಸ್ಕೃತಿ–ಕ ವೇದಿಕೆ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರಮಟ್ಟದ ಬಣ್ಣದಮನೆ ಮಕ್ಕಳ ಚಿತ್ರಕಲಾ ಸ್ಪರ್ಧೆಯಲ್ಲಿ ನಗರದ ಶ್ರೀ ಗುರುದೇವ ರಾನಡೆ ಶಿಕ್ಷಣ ಸಂಸ್ಥೆ ವಿದ್ಯಾಭವನ ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢ ಶಾಲೆ ವಿದ್ಯಾರ್ಥಿಗಳಾದ ಮಧುಶ್ರೀ ಮೆಂಡಿಗೇರಿ ಹಾಗೂ ಶಿವನಗೌಡ ಪಾಟೀಲ ಪ್ರಶಸ್ತಿ ಪಡೆದುಕೊಂಡಿದ್ದಾರೆ.

ಸನ್ 2023–24ನೇ ಸಾಲಿನ ಚಿಣ್ಣರ ಚಿತ್ತಾರ ಸರ್ಟಿಫಿಕೆಟ್ ಅವಾರ್ಡ್ ಪಡೆದುಕೊಂಡಿರುವ ಇಬ್ಬರು ವಿದ್ಯಾರ್ಥಿಗಳಿಗೆ ಸಂಸ್ಥೆ ಕಾರ್ಯದರ್ಶಿ ಪ್ರಸಾದ ಆಪ್ಟೆ, ಸಹಕಾರ್ಯದರ್ಶಿ ಶ್ರೀನಿವಾಸ ಅಪರಂಜಿ, ಸದಸ್ಯರಾದ ಕುಲದೀಪಿಕಾ ಆಪ್ಟೆ, ಆಡಳಿತಾಧಿಕಾರಿ ರವಿ ಲಗಳಿ ಸಹಿತ ಹಲವರು ಅಭಿನಂದಿಸಿದ್ದಾರೆ.

## ನ.18ರವರೆಗೆ ಗುಡಿದೇವಿ ಬೃಹತ್ ಜಾತ್ರಾ ಮಹೋತ್ಸವ

**ಜಮಖಂಡಿ:** ತಾಲೂಕಿನ ಲಿಂಗನೂರ ಗ್ರಾಮದ ಶ್ರೀ ಗುಡಿದೇವಿ ಜಾತ್ರಾ ಮಹೋತ್ಸವ, ಪಲ್ಲಕ್ಕಿ ಉತ್ಸವ ಹಾಗೂ ರಥೋತ್ಸವ ಕಾರ್ಯಕ್ರಮ ನವ್ಹೆಂಬರ್ ನತಜಒಥಡಿ 18ರ ವರೆಗೆ ಜರುಗಲಿದೆ. ಪ್ರತಿ ವರ್ಷದಂತೆ ಈ ವರ್ಷವು ಭಕ್ತರು ಜಾತಿ, ಬೇದ ಎನ್ನದೆ ಶ್ರೀಗುಡಿದೇವಿ ಪಲ್ಲಕ್ಕಿ ಹಾಗೂ ರಥೋತ್ಸವಕ್ಕೆ ಭಂಡಾರ ಹಾ–ರಿಸುವುದು ವಿಶೇಷವಾಗಿದೆ.



ನವ್ಹೆಂಬರ್ 16ರಂದು ಮುಂಜಾನೆ 10 ಗಂಟೆಗೆ ಸಂಗ್ರಾಮ ಕಲ್ಲು, ಗುಂಡು, ಚೀಲ, ಎತ್ತುವ ಸ್ಪರ್ಧೆಗೆ ಲಿಂಗನೂರ ಶಿವಪೂತ್ರಾವಧೂತ ಮಠದ ಶಿವಪುತ್ರಾವಧೂತ ಮಹಾಸ್ವಾಮಿಗಳು ಗದ್ದುಗೆ ಪೂಜಾರಿ ಸಾನಿದ್ಯ ವಹಿಸುವರು. ಶಾಸಕ ಜಗದೀಶ ಗುಡಗುಂಟಿಮಠ ಕಾರ್ಯಕ್ರಮ ಉದ್ಘಾಟಿಸುವರು. ಮಾಜಿ ಶಾಸಕರಾದ ಆನಂದ ನ್ಯಾಮಗೌಡ, ಶ್ರೀಕಾಂತ ಕುಲಕರ್ಣಿ, ಭೂಸೇನಾ ನಿಗಮ ಮಾಜಿ ಅಧ್ಯಕ್ಷ ಶ್ರೀಶೈಲ ದಳವಾಯಿ, ಮಾಜಿ ಜಿ.ಪಂ ಉಪಾಧ್ಯಕ್ಷ ಸುಶೀಲಕುಮಾರ ಬೆಳಗಲಿ, ಮಾಜಿ ಜಿ.ಪಂ ಸದಸ್ಯ ಅರ್ಜುನ ದಳವಾಯಿ, ನಗರಸಭೆ ಸದಸ್ಯ ಈಶ್ವರ ವಾಳೆನ್ನವರ ಆಗಮಿಸಲಿದ್ದಾರೆ. ರಾತ್ರಿ 10 ಗಂಟೆಗೆ ಗುಡಿದೇವಿ ನಾಟ್ಯ ಸಂಘ ಆಶ್ರಯದಲ್ಲಿ ಹಳ್ಳಿ ಹುಲಿ ಕೊಟ್ಟ ಬೆಳ್ಳಿ ಕಾಲುಂಗರ ಅರ್ಥಾತ ರೈತನ ಕಣ್ಣಿರಿಗೆ ಆಸರೆ ಯಾರು ಎಂಬ ಸಾಮಾಜಿಕ ನಾಟಕ ನಡೆಯಲಿದೆ.

ನವ್ಹೆಂಬರ್ 17 ರಂದು ಮುಂಜಾನೆ 10 ಗಂಟೆಗೆ 1 ಕ್ವಿಂಟಲ್ 10 ಕೆ.ಜಿ ಚೀಲ ಎತ್ತಿಕೊಂಡು ಹೋಗುವ ಸ್ಪರ್ದೆ ಹಾಗೂ ಓಪನ ಟಗರಿನ ಕಾಳಗ ಸ್ಪರ್ದೆ ಜರಗುವುದು. ರಾತ್ರಿ 10 ಗಂಟೆಗೆ ಡೊಳ್ಳಿನ ಪದಗಳು ಜರಗುವವು. ನ. 18 ರಂದು ಪಲ್ಲಕ್ಕಿಗಳ ಬಿಳ್ಕೊಡುಗೆ ನಡೆಯಲಿದೆ.

### ಜನ್ಮಶತಮಾನೋತ್ಸವ ಸಾಹಿತ್ಯ ವೇದಿಕೆ ಕಾರ್ಯಕ್ರಮ

## ಕೋ. ಚೆನ್ನಬಸಪಪ್ಪನವರು ಸಾಹಿತ್ಯಕ್ಕೆ ನೀಡಿದ ಕೊಡುಗೆ ಅಪಾರ: ಡಾ. ಜಗಜಂಪಿ

**ಬೆಳಗಾವಿ** : ಕೋ.ಚೆನ್ನಬಸಪಪ್ಪನವರು ಸಾಹಿತ್ಯಕ್ಕೆ ನೀಡಿದ ಕೊಡುಗೆ ಅಪಾರ. 89 ಕೃತಿಗಳನ್ನು ರಚಿಸಿದ್ದು ಇವರ ಸಾಹಿತ್ಯ ಕುರಿತಂತೆ ಸಂಶೋಧನಾ ಗ್ರಂಥ–'ಗಳು ಬಂದಿವೆ. ಇವರ ಸಮಗ್ರ ಸಾಹಿತ್ಯ ಗ್ರಂಥವನ್ನು ಕರ್ನಾಟಕ ಸರ್ಕಾರದ ಪುಸ್ತಕ ಪ್ರಾಧಿಕಾರದವರು ಹೊರತಂದಿದ್ದಾರೆ. ಸಾಹಿತ್ಯ, ಶರಣ ಸಾಹಿತ್ಯ, ಕಾನೂನುಗಳ ಕುರಿತಂತೆ ಕೋ. ಚೆನ್ನಬಸಪ್ಪನವರು ದೇಶ ವಿದೇಶಗಳಲ್ಲಿ ಉಪನ್ಯಾಸವನ್ನು ನೀಡಿದರು ಎಂದು ನಿವೃತ್ತ ಪ್ರಾಚಾರ್ಯ, ಖ್ಯಾತವಾಗ್ಮಿ ಡಾ. ಬಸವರಾಜ ಜಗಜಂಪಿಯವರು ಇಂದಿಲ್ಲಿ ಹೇಳಿದರು.

ತಿಳಕವಾಡಿಯ ರಾ. ಲ. ಕಾನೂನು ಮಹಾವಿದ್ಯಾಲಯದ ಸಭಾ ಭವನದಲ್ಲಿ ಇದೇ ದಿ. 15 ಶುಕ್ರವಾರದಂದು ಕೇಂದ್ರ ಸಾಹಿತ್ಯ ಅಕಾಡಮಿ ಮತ್ತು ಬೆಳಗಾವಿಯ ರಾಜಾ ಲಖಮಗೌಡ ಕಾನೂನು ಮಹಾವಿದ್ಯಾಲಯ ಸಂಯುಕ್ತ ಆಶ್ರಯದಲ್ಲಿ "ಕೋ. ಚೆನ್ನಬಸ್ಸಪ್ಪ ಅವರ ಬದುಕು ಮತ್ತು ಸಾಹಿತ್ಯ" ವಿಷಯ ಕುರಿತಂತೆ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. 'ಕೋ.ಚೆ. ಬದುಕು ಮತ್ತು ವ್ಯಕ್ತಿತ್ವ' ಕು–ರಿತು ಮಾತನಾಡಿದ ಡಾ. ಬಸವರಾಜ ಜಗಜಂಪಿಯವರು ಮೇಲಿನಂತೆ ಅಭಿಪ್ರಾಯ ವ್ಯಕ್ತ ಪಡಿಸಿದರು.



ಮುಂದೆ ಮಾತನಾಡುತ್ತ ಡಾ. ಜಗಜಂಪಿಯವರು, ಕೋ. ಚೆನ್ನಬಸಪ್ಪನವ–ರಿಗೆ ಬೆಳಗಾವಿಯಲ್ಲಿಯ ಸಮಾನ ಮನಸ್ಕರ ಸ್ನೇಹಿತರು, ಸಾಹಿತ್ಯಿಕ ಸಮಾರಂಭಗಳು, ಗಡಿವಿವಾದ ಹೋರಾಟಗಳು ಅವರಿಗೆ ಸಾಕಷ್ಟು ಅನುಭವಗಳನ್ನು ನೀಡುತ್ತವೆ. ಇಲ್ಲಿಯ ಪರಿಸರ ಅವರಿಗೆ ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳುವುದಕ್ಕೆ ಬಹುದೊಡ್ಡ ಸಹಾಯವನ್ನು ಮಾಡುತ್ತದೆ ಎಂದು ಹೇಳಿದರು. ದೀಪ ಬೆಳಗುವುದರೊಂದಿಗೆ ಕಾರ್ಯಕ್ರಮವನ್ನು ಉದ್ಘಾಟಿಸಿದ ರಾಜಾ ಲಖಮಗೌಡ ಕಾನೂನು ಮಹಾವಿದ್ಯಾಲಯ ಆಡಳಿತ ಮಂಡಳಿಯ ಅಧ್ಯಕ್ಷರಾದ ಎಮ್. ಆರ್. ಕುಲಕರ್ಣಿಯವರು ಮಾತನಾಡುತ್ತ ಕೋ. ಚೆನ್ನಬಸಪ್ಪನವರು ರಾ.ಲ. ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿಯೆಂಬುದು ನಮಗೆಲ್ಲ ಅಭಿಮಾನ, ಹೆಮ್ಮೆ ಪಡುವಂತಹ ಸಂಗತಿ ಎಂದು ಹೇಳಿದ ಅವರು ಇಂದಿನ ದಿನಗಳಲ್ಲಿ ಕನ್ನಡ ಭಾಷೆಯಲ್ಲಿ ಇಂಗ್ಲೀಷ ಮತ್ತು ಹಿಂದಿ ಭಾಷೆಯ ಶಬ್ದಗಳು ಸೇ–ರಿಕೊಳುವುದು ಎದ್ದು ಕಾಣುತ್ತಲಿದೆ. ಎಲ್ಲರೂ ಶುದ್ಧ ಕನ್ನಡದಲ್ಲಿ ಮಾತನಾಡುವುದನ್ನು ರೂಢಿಸಿಕೊಳ್ಳಬೇಕೆಂದು ಹೇಳೀದರು.

ಕೋ.ಚೆ.ಯವರ ಸೃಜನೇತರ ಸಾಹಿತ್ಯ ಎಂಬ ವಿಷಯದ ಮೇಲೆ ಮಾತನಾಡಿದ ಪ್ರೊ. ಪಿ.ಜಿ. ಕೆಂಪಣ್ಣವರ ಅವರು ಕೋ.ಚೆ. ಅವರ ಸೃಜನೇತರ ಸಾಹಿತ್ಯವೂ ಗಮನಿಸುವಂತಹದ್ದು ಸಾವಿತ್ರಿಯಂತಹ ಅಮೂಲ್ಯ ಗ್ರಂಥ–'ವನ್ನು ಕನ್ನಡಕ್ಕೆ ಅನುವಾದಿಸಿದ ಅವರ ಪ್ರತಿಭೆಗೆ ಸಾಕ್ಷಿಯಾಗಿದೆ. ಅವರ ಸೃಜನೇತರ ಸಾಹಿತ್ಯ ಅಭಿಮಾನ ತರುವಂತಹದ್ದು ಎಂದು ಹೇಳಿದರು. ಕೋ.ಚೆ. ಕತೆ ಕಾದಂಬರಿಗಳಲ್ಲಿ ಪ್ರಗತಿಪರತೆ ಎಂಬ ವಿಷಯ ಕುರಿತು ಮಾತನಾಡಿದ ಡಾ. ಗುರುದೇವಿ ಹುಲೆಪ್ಪನವರಮಠ ಅವರು, ಪ್ರಗತಿಶೀಲ ಸಾಹಿತ್ಯವನ್ನು ಸೃಷ್ಟಿ ಮಾಡುವುದೇ ಆದಲ್ಲಿ ಅದು ಬಡವರ ತಾಯಿಯಾಗಿರಬೇಕು. ದೀನದಲಿತರ ಧ್ವನಿಯಾಗಿರಬೇಕು. ನೊಂದವರ ಉದ್ಧಾರ ಮಾಡುವಂತಹದ್ದಿರಬೇಕು. ಈ ಸಾಹಿತ್ಯ ಬದುಕಿನ ವಾಸ್ತವತೆಗೆ ಕನ್ನಡಿ ಯಾಗಬೇಕೆಂದು ಕೋ.ಚೆ.ಯವರು ಹೇಳಿದ್ದರೆಂದರು. ರಾ.ಲ. ಕಾನೂನು ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ. ಡಿ. ಪ್ರಸನ್ನಕುಮಾರ 'ಕೊ.ಚೆ. ನ್ಯಾಯಿಕ ಸಾಹಿತ್ಯ' ವಿಷಯ ಕುರಿತು ಮಾತನಾಡಿದರು. ಕೊ.ಚೆ. ಒಡನಾಡ ಕುರಿತಂತೆ ಸಂಗಮದೇವ ಗುಡಗಿ ಮಾತನಾಡಿದರು. ಅಧ್ಯಕ್ಷತೆಯನ್ನು ರಾ.ಲ. ಕಾನೂನು ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಅನಿಲಕುಮಾರ ಹವಾಲ್ದಾರ ವಹಿಸಿದ್ದರು. ಕು. ಅನನ್ಯಾ ಸಾವಳಗಿ ಮತ್ತು ಶೃಂಖಲಾ ಜೋಶಿಯವರ ಸ್ವಾಗತ ಗೀತೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಡಾ. ಬಸವರಾಜ ಸಾದರ ಸ್ವಾಗತಿಸಿದರು. ರಾ.ಲ. ಕಾನೂನು ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ. ಎಸ್. ಎಸ್. ಹೆಗಡೆ ವಂದಿಸಿದರು.

## ಶೋಭಾ ಕೌಲಗಿ ಅವಿರೋಧ ಆಯ್ಕೆ

**ಮೋಳೆ:**–ಮೋಳೆ ಗ್ರಾಮ



ಪಂಚಾಯತಿ ಒಂದನೇ ವಾರ್ಡಿನ ಸದಸ್ಯೆಯಾಗಿದ್ದ ಅಲಖಾ ಭೂಪಾಲ ಕೌಲಗಿ ಅವರು ಹೃದಯಾಘಾತದಿಂದ ಮೃತಳಾಗಿದ್ದು ಅವರ ಸ್ಥಾನಕ್ಕೆ ಗ್ರಾಮ ಪಂಚಾಯತಿ ಸದಸ್ಯಕ್ಕೆ ಚುನಾವಣೆ ಘೋಷಣೆಯಾಗಿದ್ದು ಮೋಳೆ ಗ್ರಾ.ಪಂ ಒಂದನೇ ವಾರ್ಡಿನ ಸದಸ್ಯ ಸ್ಥಾನಕ್ಕೆ ಮೂರು ಜನ ನಾಮಪತ್ರ ಸಲ್ಲಿಕೆ ಮಾಡಿದರು. ಅನಿತಾ ಸುಭಾಸ ಕಣವಿ, ಇಂದುಮತಿ ಅಣ್ಣಪ್ಪ ಬೊರಗಾಂವೆ ಹಾಗೂ ಶೋಭಾ ಅಣ್ಣಪ್ಪ ಕೌಲಗಿ ಮೂವರು ನಾಮಪತ್ರ ಸಲ್ಲಿಕೆ ಮಾಡಿದರು. ಶುಕ್ರವಾರ ನಾಮ ಪತ್ರ ಹಿಂಪಡೆಯುವ ಕೊನೆಯ ದಿನ ಇದ್ದು, ಇಂದು ಅನಿತಾ ಸುಭಾಸ ಕಣವಿ ಹಾಗೂ ಇಂದುಮತಿ ಅಣ್ಣಪ್ಪ ಬೊರಗಾಂವೆ ನಾಮ ನಿರ್ದೇಶನ ಹಿಂಪಡೆದಿದ್ದು ಶೋಭಾ ಅಣ್ಣಪ್ಪ ಕೌಲಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಸಂಧರ್ಭದಲ್ಲಿ ಚುನಾವಣೆಯಾಧಿಕಾರಿಯಾದ ಚೇತನ ದೇವಮೋರೆ, ಸಹಾಯಕ ಚುನಾವಣಾಧಿಕಾರಿ ದಾನಮ್ಮ ಸಜ್ಜನ್ನ, ಮೋಳೆ ಗ್ರಾಮ ಲೆಕ್ಕಾಧಿಕಾರಿ ಕೆ.ಕೆ ಕುಲಕರ್ಣಿ ಹಾಗೂ ಗ್ರಾ.ಪಂ ಸಿಬ್ಬಂಧಿ ಗುರಪಾದಯ್ಯ ಮಠದ ಉಪಸ್ಥಿತರಿದ್ದರು.

## ಸಾರ್ವಜನಿಕ ಅಹವಾಲುಗಳ ಆದ್ಯತೆ ಮೇರೆಗೆ ಕೆಲಸ ನಿರ್ವಹಿಸುತ್ತೇನೆ.. ಬಾಬಾಸಾಹೇಬ ಪಾಟೀಲ

**ನೇಸರಗಿ** : ಕಿತ್ತೂರು ಚನ್ನಮ್ಮನ ಮತಕ್ಷೇತ್ರದ ಸರ್ವಾಂಗಿನ ಮೂಲಭೂತ ಸೌಕರ್ಯ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ಮೊದಲ ಆದ್ಯತೆ ನೀಡುತ್ತಿದ್ದು ಸಾರ್ವಜನಿಕರ ಅಪೇಕ್ಷೆಗಳು ಬಹಳಷ್ಟು ಇದ್ದು ಹಂತ ಹಂತವಾಗಿ ಕೆಲಸ ಕಾರ್ಯಗಳನ್ನು ಮಾಡಲಾಗುವದೆಂದು ಚನ್ನಮ್ಮನ ಕಿತ್ತೂರು ಶಾಸಕರಾದ ಬಾಬಾಸಾಹೇಬ ಪಾಟೀಲ ಹೇಳಿದರು.



ಅವರು ಸಮೀಪದ ದೇಶನೂರ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುಧಾನದಲ್ಲಿ ಸಿ ಸಿ ರಸ್ತೆ ನಿರ್ಮಾಣ–ಕ್ಕೆ 10 ಲಕ್ಷ ರೂಪಾಯಿಗಳ ಅನುಧಾನದ ಕಾಮಗಾರಿಗೆ ಭೂಮಿಪೂಜೆ, ತಾಲೂಕಿನ ಹೊಸಕೋಟಿ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ 10 ಲಕ್ಷ ರೂಪಾಯಿಗಳ ಸಿ ಸಿ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ, ದೇಶನೂರ ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆ ಮತ್ತು ನರೇಗಾ ಯೋಜನೆಯಡಿಯಲ್ಲಿ 20 ಲಕ್ಷ ರೂಪಾಯಿಗಳ ಅನುಧಾನದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿ ದೇಶನೂರ ಗ್ರಾಮದ ಎಲ್ಲ ಆಗು ಹೋಗುಗಳ ಅಹವಾಲು ಸ್ವೀಕರಿಸಿದ್ದೇನೆ. ರೈತರ, ಬಡವರ ಕೆಲಸ ಮಾಡುವ ಉದ್ದೇಶದಿಂದ ಹೆಚ್ಚಿನ ಪ್ರಯತ್ನ ಮಾಡಲಾಗುವದು ಎಂದರು.

ಕಾರ್ಯಕ್ರಮದಲ್ಲಿ ಯುವ ಮುಖಂಡರಾದ ಸಚಿನ ಪಾಟೀಲ,ಹಿ–ರಿಯ ಮುಖಂಡರಾದ ಮಾಜಿ ಗ್ರಾಂ ಪಂ ಅಧ್ಯಕ್ಷ ದೀಪಕಗೌಡ ಪಾಟೀಲ, ಪ್ರಕಾಶ ಮುಂಗರವಾಡಿ, ಪಂಚಾಯತ ರಾಜ ಸಹಾಯಕ ಇಂಜಿನಿಯರ್ ಮಹೇಶ ಹೊಲಿ,ರಾಮಚಂದ್ರ ಸಾಳವಂಕಿ,ಮಲ್ಲಿಕಾರ್ಜುನ ಕಲ್ಲೋಳಿ, ಅಣ್ಣಪ್ಪ ಕಡಕೋಳ, ಅಯೂಬ್ ಗಣಾಚಾರಿ, ಸದಾಶಿವ ಕಮತಗಿ, ಶಾನ ರಾಮಣ್ಣವರ, ದಾನಮ್ಮ ಹರಕುಣಿ, ರಾಜು ಮುಚಂಡಿ , ಮುಸ್ತಫಾ ಅಥಣಿ, ಶಿವಲೀಲಾ ಪಾಟೀಲ, ಸೋಮನಿಂಗ ಕೋಟಗಿ,ಶಿವಾನಂದ ಮೆಟ್ಯಾಳ, ನಿಂಗಪ್ಪ ತಳವಾರ, ಸುರೇಶ ಅಗಸಿಮನಿ,ರಾಯನಗೌಡ ಪಾಟೀಲ, ಪ್ರಕಾಶ ತೋಟಗಿ, ಯಮನಪ್ಪ ಪೂಜೇರಿ,ತಾಲೂಕ ಅಂಗನವಾಡಿ ಅಧಿಕಾರಿಗಳು, ಶಿಕ್ಷಕರು, ಕಾರ್ಯಕರ್ತರು, ದೇಶನೂರ ಗ್ರಾಮಸ್ಥರು ಉಪಸ್ಥಿತರಿದ್ದರು.

****

## ರಬಕವಿ : ಹೊಸ ಬಡಾವಣೆ ಮಾರ್ಗಸೂಚಿ ದರ ನಿಗದಿ

**ಬಾಗಲಕೋಟೆ:** : ರಬಕವಿ–ಬನಹಟ್ಟಿ ತಾಲೂಕ ತೇರದಾಳ ಉಪನೋಂದಣಿ ಕಚೇರಿ ವ್ಯಾಪ್ತಿಯ ರಬಕವಿ ನಗರದಲ್ಲಿಯ ಸರ್ವೆ ನಮ.1/1ರಲ್ಲಿ ಹೊಸದಾಗಿ ನಿರ್ಮಿತವಾಗಿರುವ ಹೊಸ ವಸತಿ ಬಡಾವಣೆಯ ಮಾರ್ಗಸೂಚಿ ದರವನ್ನು ಸದಸ್ಯ ಕಾರ್ಯದರ್ಶಿ ಹಾಗೂ ನೋಂದಣಿ ಉಪಮಹಾಪ–ರಿವೀಕ್ಷಕರ ಜ್ಞಾಪನಾ ಪತ್ರದನ್ವಯ 5500 ರೂ.ಗಳೆಂದು ನಿಗದಿಪಡಿಸಿದ್ದರು, ಸಾರ್ವಜನಿಕರು ಈ ಬಗ್ಗೆ ತಕರಾರು ಅಥವಾ ಸಲಹೆ ಸೂಚನೆ ಇದ್ದಲ್ಲಿ ಪತ್ರಿಕಾ ಪ್ರಕಟಣೆಗೊಂಡ 15 ದಿನಗಳ ಒಳಗಾಗಿ ಸೂಕ್ತ ದಾಖಲೆಗಳೊಂದಿಗೆ ಉಪ ನೋಂದಣಿ ಕಚೇರಿ ತೇರದಾಳ ಇವರಿಗೆ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

****

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 236 Postal Reg No. PMG/KA/NK/BM/135/22-24 / POST AT Vantamury Colony Post Office